30 ಆಗಸ್ಟ್ 2025 ಶನಿವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 170 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629

ಜನಮನದ ದನಿ

# ಪ್ರಜೋದಯ

ದಿನಪತ್ರಿಕೆ

ಸಂಪಾದಕ : ಜೆ.ಆರ್. ಕೆಂಚೇಗೌಡ



ಪ್ಯಾರಿಸ್ ವಿಶ್ವ ಚಾಂಪಿಯನ್ ಷಿಪ್‌ನಲ್ಲಿ ದಾಖಲೆಯ ಆರನೇ ಪದಕದ ನಿರೀಕ್ಷೆಯಲ್ಲಿದ್ದ ಭಾರತದ ಬ್ಯಾಡ್ಮಿಂಟನ್ ತಾರೆ ಪಿ.ವಿ.ಸಿಂಧು ಅವರಿಗೆ ಶುಕ್ರವಾರ ಕ್ವಾರ್ಟರ್ ಫೈನಲ್‌ನಲ್ಲಿ ನಿರಾಸೆಯಾಯಿತು. ಮೂರು ಗೇಮ್‌ಗಳ ರೋಚಕ ಹೋರಾಟದಲ್ಲಿ ಇಂಡೊನೇಷ್ಯಾದ ಪುತ್ರಿ ಕುಸುಮಾ ವರ್ದಾನಿ ಅವರಿಗೆ ಮಣಿದರು.




ಎಲ್ಲೋಡಿ ಅಲ್ಲಿ ಕಾರು, ಆದರೆ ಬಿಡುವಂತಿಲ್ಲ ಜೋರು » 2



ಮಕ್ಕಳಿಗೆ ಮೌಲ್ಯಯುತ ಶಿಕ್ಷಣದ ಅನಿವಾರ್ಯತೆ ಇದೆ » 3



ಜಿಎಸ್‌ಟಿ ಸರಳೀಕರಣದಿಂದ ರಾಜ್ಯಗಳಿಗೆ ನಷ್ಟ » 4


# ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್ ಆಯ್ಕೆ: ವಾಗ್ವಾದ ಜೋರು

## ಸರ್ಕಾರದ ವಿರುದ್ಧ ಮುಗಿಬಿದ್ದ ಬಿಜೆಪಿ | ಭುವನೇಶ್ವರಿ ಹೇಳಿಕೆಗೆ ಸ್ಪಷ್ಟನೆ ಕೇಳಿದ ಮೈಸೂರು ಸಂಸದ

• ಪ್ರಜೋದಯ ವರದಿ

**ಬೆಂಗಳೂರು:** ವಿಶ್ವವಿಖ್ಯಾತ ದಸರಾ ಉದ್ಘಾಟನೆಗೆ ಸಾಹಿತಿ ಬಾನು ಮುಷ್ತಾಕ್ ಅವರ ಆಯ್ಕೆ ವಿಚಾರ ಆಡಳಿತಾರೂಢ ಕಾಂಗ್ರೆಸ್ ಹಾಗು ಪ್ರತಿಪಕ್ಷ ಬಿಜೆಪಿ ನಡುವಿನ ವಾಗ್ವಾದ ತಾರಕಕ್ಕೇರುವಂತೆ ಮಾಡಿದೆ.

ಧರ್ಮಸ್ಥಳದಲ್ಲಿ ಬುರುಡೆ ಪ್ರಕರಣವನ್ನೇ ಅಸ್ತ್ರವಾಗಿ ಬಳಸಿಕೊಂಡಿದ್ದ ಬಿಜೆಪಿ ಈಗ ದಸರಾ ವಿಚಾರವನ್ನು ಮುನ್ನಲೆಗೆ ತಂದಿದ್ದು ಹಿಂದೂ ಮತ ಬ್ಯಾಂಕ್ ಗಟ್ಟಿಗೊಳಿಸಿಕೊಳ್ಳಲು ಪ್ರಯತ್ನಿ ಸುತ್ತಿದೆ. ಮತ್ತೊಂದೆಡೆ ಕಾಂಗ್ರೆಸ್ ನಾಯಕರು ಸಹ ಬಿಜೆಪಿಗೆ ತಿರುಗೇಟು ನೀಡುತ್ತಿದ್ದು ಮಾತಿನ ಸಮರ ಮುಂದುವರಿದಿದೆ. ಹುಬ್ಬಳ್ಳಿಯಲ್ಲಿ ಮಾಜಿ ಸಂಸದ ಪ್ರತಾಪ್ ಸಿಂಹ ಅವರು, ಬಾನು ಮುಷ್ತಾಕ್ ವಿರುದ್ಧ ಕಿಡಿಕಾರಿದ್ದರೆ, ಆರ್.ಅಶೋಕ್ ಸಹ ಆಯ್ಕೆಯನ್ನು ಖಂಡಿಸಿದ್ದಾರೆ. ಇನ್ನೊಂದೆಡೆ ಮೈಸೂರು ಸಂಸದ ಯದುವೀರ್ ಕೃಷ್ಣದತ್ತ ಒಡೆಯರ್ ಸಹ ಬಾನು ಮುಷ್ತಾಕ್ ಅವರು, ಭುವನೇಶ್ವರಿ ಕುರಿತು ಆಡಿದ ಮಾತುಗಳಿಗೆ ಸ್ಪಷ್ಟನೆ ನೀಡಬೇಕೆಂದು ಆಗ್ರಹಿಸಿದ್ದಾರೆ.



**ದಸರಾ ಉದ್ಘಾಟನೆಗೆ ವಿರೋಧವಿದೆ**

ಬಾನು ಮುಷ್ತಾಕ್ ಕನ್ನಡಾಂಬೆ ಕುರಿತ ಹೇಳಿಕೆಗೆ ಮೊದಲು ಸ್ಪಷ್ಟನೆ ಕೊಡಲಿ. ಸ್ಪಷ್ಟೀಕರಣ ಕೊಡದಿದ್ದರೆ ಅವರು ದಸರಾ ಉದ್ಘಾಟಿಸುವುದಕ್ಕೆ ನನ್ನ ವಿರೋಧವಿದೆ ಎಂದು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಹೇಳಿದರು.

ಉದ್ಘಾಟನೆಗೆ ಸರ್ಕಾರ ಅವರನ್ನು ಆಯ್ಕೆ ಮಾಡಿದಾಗ ಸ್ವಾಗತಿಸಿದ್ದೆ. ಅವರ ಹಳೆಯ ಭಾಷಣ ಈಚೆಗೆ ನೋಡಿದೆ. ಆ ಭಾಷಣಕ್ಕೆ ಸ್ಪಷ್ಟೀಕರಣ ಕೊಡಲಿ. ಇಲ್ಲವೇ ಹೇಳಿಕೆ ವಾಪಾಸ್ ಪಡೆಯಲಿ. ಎರಡೂ ಮಾಡದಿದ್ದರೆ ನನ್ನ ವಿರೋಧವಿದೆ. ಪಕ್ಷದ ನಿರ್ಧಾರವೇ ನಮ್ಮ ನಿರ್ಧಾರ. ಪಕ್ಷದ ವಿರುದ್ಧವಾದ ನಿಲುವು ನನ್ನದಲ್ಲವೆಂದು ಸ್ಪಷ್ಟಪಡಿಸಿದರು.

ಭುವನೇಶ್ವರಿ ಕುರಿತ ಬಾನು ಮುಷ್ತಾಕ್ ಅವರ ಹೇಳಿಕೆಯಿಂದ ನಮ್ಮ ಭಾವನೆಗಳಿಗೆ ಧಕ್ಕೆ ಯಾಗಿದೆ. ಅದನ್ನು ಅವರು ಅರ್ಥ ಮಾಡಿಕೊಳ್ಳಬೇಕು. ಅವರ ಧರ್ಮದ ಆಚರಣೆ ಬಗ್ಗೆ ನಾನು ಮಾತನಾಡಲಾರೆ. ನಮ್ಮ ಧರ್ಮದಲ್ಲಂತೂ ಮೂರ್ತಿ ಪೂಜೆ ಶ್ರೇಷ್ಠ. ಚಾಮುಂಡಿ ಮಾತೆಯನ್ನು ಗೌರವಿಸಿ ಬರಲಿ ಎಂದರು.

ಚಾಮುಂಡಿ ಬೆಟ್ಟ ಸದಾ ಕಾಲದಿಂದಲೂ ಹಿಂದೂಗಳ ದೇವಸ್ಥಾನ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿಕೆ ಹಾಸ್ಯಾಸ್ಪದ. ಇದು ಬೇರೆಯವರ ಶ್ರದ್ಧಾ ಕೇಂದ್ರ ಆಗಲು ಹೇಗೆ ಸಾಧ್ಯವೆಂದು ಪ್ರಶ್ನಿಸಿದರು.

**ದೇವಿ ಪೂಜೆಗೆ ಅನುಮತಿ ಬೇಕು**

ಬೂಕರ್ ಪ್ರಶಸ್ತಿ ಪುರಸ್ಕೃತ ಬಾನು ಮುಷ್ತಾಕ್ ದಸರಾ ಉದ್ಘಾಟನೆಯಲ್ಲಿ ಭಾಗ ವಹಿಸಲು ನಮ್ಮ ಅಡ್ಡಿಯಿಲ್ಲ. ಆದರೆ ದೇವಿಗೆ ಪೂಜೆ ಮಾಡಿದರೆ ಫತ್ವಾ ಇನ್‌ಸ್ಟಿಟ್ಯೂಷನ್‌ನಿಂದ ಅನುಮತಿ ಪಡೆಯಬೇಕೆಂದು ಜಾಮೀಯಾ ಮಸೀದಿ ಮೌಲಾನಾ ಡಾ.ಮಕ್ಸೂದ್ ಇಮ್ರಾನ್ ಅವರು ತಿಳಿಸಿದ್ದಾರೆ.

ಪೂಜೆಯಲ್ಲಿ ನಿಂತರೆ ತಪ್ಪಿಲ್ಲ. ಅರ್ಚಕ ಅಥವಾ ಬೇರೆಯವರು ಪೂಜೆ ಮಾಡುತ್ತಿದ್ದರೆ ಅವರು ಭಾಗವಹಿಸಬಹುದು. ಚಾಮುಂಡಿಗೆ ಪೂಜಾ ವಿಧಿ ವಿಧಾನ ಅಥವಾ ಆರತಿ ಬೆಳಗುವುದು ಹೀಗೆ ಪೂಜಾ ಕೈಂಕರ್ಯದಲ್ಲಿ ತಾವೇ ಭಾಗಿಯಾದರೆ ಬಾನು ಮುಷ್ತಾಕ್ ಫತ್ವಾ ಇನ್‌ಸ್ಟಿಟ್ಯೂಷನ್‌ನಿಂದ ಅನುಮತಿ ತೆಗೆದುಕೊಳ್ಳಬೇಕು. ಅದಕ್ಕೆ ಇನ್‌ಸ್ಟಿಟ್ಯೂಷನ್‌ನವರು ಏನು ಹೇಳುತ್ತಾರೋ ನೋಡಬೇಕು. ಅದು ಅವರಿಗೆ ಬಿಟ್ಟ ವಿಚಾರ. ನಾನು ಬಾನು ಮುಷ್ತಾಕ್ ಅವರಿಗೆ ಸಲಹೆ ಮಾತ್ರ ಕೊಡಬಹುದೆಂದರು.

> ದಸರಾ ಉದ್ಘಾಟನೆ ವಿಚಾರದಲ್ಲಿ ಆಡಳಿತ ಹಾಗು ವಿಪಕ್ಷಗಳು ಮಾತಾಡಲಿ. ಸಂವಿಧಾನಬದ್ಧವಾಗಿ ಪ್ರಕ್ರಿಯೆ ನಡೆದಿದೆಯೋ ಇಲ್ಲವೋ ಎಂಬುದನ್ನು ನಾವು ನೋಡ್ತೀವಿ. ಸಂವಿಧಾನದ ಪ್ರಕಾರ ಇದ್ದರೆ ಎಲ್ಲವನ್ನು ಒಪ್ಪಬೇಕು.
> -ಯು.ಟಿ.ಖಾದರ್, ಸ್ಪೀಕರ್

**ಮಸೀದಿಯಲ್ಲೇ ಅವರಿಗೆ ಪ್ರವೇಶವಿಲ್ಲ**

ಈ ಬಗ್ಗೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ಪ್ರತಿಕ್ರಿಯಿಸಿ, ಬಾನು ಮುಷ್ತಾಕ್ ಮತ್ತು ನಿಸಾರ್ ಅಹ್ಮದ್ ನಡುವೆ ಯಾವುದೇ ಹೋಲಿಕೆ ಇಲ್ಲ. ನಿಸಾರ್ ಅವರು ಎಂದಿಗೂ ಹಿಂದೂ ಧರ್ಮದ ಬಗ್ಗೆ ಮಾತನಾಡಲಿಲ್ಲ. ದಸರಾ ಉತ್ಸವಕ್ಕೆ ಸರ್ಕಾರ ಆಹ್ವಾನ ನೀಡಿದ್ದು, ತಾಯಿ ಚಾಮುಂಡೇಶ್ವರಿಯೇ ತಮಗೆ ಆಹ್ವಾನ ನೀಡಿದ್ದಾರೆಂದು ಬಾನು ಅವರು ಹೇಳಿದ್ದಾರೆ. ಆದರೆ, ಅವರ ಮಸೀದಿಯಲ್ಲಿಯೇ ಅವರಿಗೆ ಪ್ರವೇಶವಿಲ್ಲ ಎಂದು ಕುಟುಕಿದ್ದಾರೆ.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಮಾತನಾಡಿ, ಸರ್ಕಾರ ದಸರಾ ಉತ್ಸವಕ್ಕೆ ಬಾನು ಮುಷ್ತಾಕ್ ಅವರನ್ನು ಮಾತ್ರ ಏಕೆ ಆಹ್ವಾನಿಸಿದೆ. ದೀಪಾ ಭಾಸ್ತಿ ಕೂಡ ಪ್ರಶಸ್ತಿಯ ವಿಜೇತೆ. ಸರ್ಕಾರ ಅವರನ್ನೇಕೆ ಆಹ್ವಾನಿಸಲಿಲ್ಲ ಎಂದು ಪ್ರಶ್ನಿಸಿದ್ದಾರೆ.

# ಎತ್ತಿನಹೊಳೆ ಮರಳು ಅಕ್ರಮ: ಲೋಕಾಯುಕ್ತ ಅಧಿಕಾರಿಗಳ ಭೇಟಿ

• ಪ್ರಜೋದಯ ವರದಿ

**ಹಾಸನ:** ಎತ್ತಿನಹೊಳೆ ಯೋಜನೆ ಕಾಮಗಾರಿಗೆ ವಾಮ ಮಾರ್ಗದಲ್ಲಿ ಮರಳು ತರಿಸಿಕೊಳ್ಳಲಾಗಿದೆ ಎಂಬ ಆರೋಪಕ್ಕೆ ಸಂಬಂಧಿಸಿ ಶುಕ್ರವಾರ ಲೋಕಾಯಕ್ತ ಅಧಿಕಾರಿಗಳು ಸಕಲೇಶಪುರದ ವಿಶ್ವೇಶ್ವರಯ್ಯ ಜಲ ನಿಗಮ ಕಚೇರಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಬಯಲು ಸೀಮೆ ಜಿಲ್ಲೆಗಳಿಗೆ ಕುಡಿಯುವ ನೀರು ಕಲ್ಪಿಸುವ ಉದ್ದೇಶದಿಂದ ಕೈಗೊಂಡಿರುವ ಮಹತ್ವಾಕಾಂಕ್ಷಿ ಯೋಜನೆಯಲ್ಲಿ ಅವ್ಯವಹಾರ ನಡೆದಿದೆ ಎಂದು ರಾಜ್ಯ ರೈತ ಸಂಘ ಹಾಗು ಹಸಿರು ಸೇನೆ ಮಾಜಿ ರಾಜ್ಯ ಸಂಚಾಲಕ ಎಸ್.ಮೊಹಮ್ಮದ್ ಸಾಧಿಕ್ 2018ರಲ್ಲಿ ಲೋಕಾಯುಕ್ತಕ್ಕೆ ದೂರು ಸಲ್ಲಿಸಿದ್ದರು.

ಕಾಮಗಾರಿಗಾಗಿ ಮರಳು ಒದಗಿಸಲು 2017ರಲ್ಲೇ ಲೋಕೋಪಯೋಗಿ ಇಲಾಖೆ ಟೆಂಡರ್ ನಡೆಸಿತ್ತು. ಎತ್ತಿನಹೊಳೆ ಯೋಜನೆ ಅಧಿಕಾರಿಗಳು 5 ಪ್ಯಾಕೇಜ್‌ನಿಂದ 49 ಸಾವಿರ ಕ್ಯೂಬಿಕ್ ಮೀಟರ್ ಮರಳು ಬಳಕೆ ಮಾಡಿದ್ದಾರೆ. ಲೋಕೋಪಯೋಗಿ



ಇಲಾಖೆಯ ಸುಪರ್ದಿಯಲ್ಲಿದ್ದ ಮರಳು ಬ್ಲಾಕ್‌ಗಳಿಂದ ಸುಮಾರು 45 ಸಾವಿರ ಕ್ಯೂ.ಮೀ. ಮರಳನ್ನು ಕಳ್ಳತನದಿಂದ ತಂದಿರುವುದು ತಿಳಿದು ಬಂದಿದೆ. ಕೇವಲ 2400 ಕ್ಯೂಬಿಕ್ ಮೀ. ಮರಳಿಗೆ ಪರವಾನಗಿ ಪಡೆದು ಉಳಿದ ಮರಳನ್ನು ಎಲ್ಲಿಂದ ತಂದರೆಂಬುದರ ಕುರಿತು ತನಿಖೆಗೆ ಸಾದಿಕ್ ಆಗ್ರಹಿಸಿದ್ದರು.

ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಮಾರ್ಗಸೂಚಿ ಪ್ರಕಾರ ಒಂದು ಪರ್ಮಿಟ್ ಇಲ್ಲದ ವಾಹನಗಳಿಗೆ 50 ಸಾವಿರದಿಂದ 1 ಲಕ್ಷ ರೂ. ವರೆಗೆ ದಂಡ ವಿಧಿಸಲು ಕಾನೂನಿನಲ್ಲಿ ಅವಕಾಶವಿದೆ. ಸರ್ಕಾರಕ್ಕೆ 7 ರಿಂದ 8 ಕೋ. ರೂ. ದಂಡ ಪಾವತಿಸ ಬೇಕಾಗುತ್ತದೆ. 2018ರಲ್ಲಿ ನಾನು ದೂರು ಕೊಟ್ಟಿದ್ದೆ. ಅಕ್ರಮದಲ್ಲಿ ಗುತ್ತಿಗೆದಾರರು, ಇಂಜಿನೀಯರ್‌ಗಳು ಶಾಮೀಲಾಗಿದ್ದು, ಎಲ್ಲರನ್ನು ತನಿಖೆಗೆ ಒಳಪಡಿಸಬೇಕೆಂದು ಒತ್ತಾಯಿಸಿದರು.

# ನಾಳೆ ಜೆಡಿಎಸ್‌ನಿಂದ ಧರ್ಮಸ್ಥಳಕ್ಕೆ ಸತ್ಯ ಯಾತ್ರೆ

• ಪ್ರಜೋದಯ ವರದಿ

**ಹಾಸನ:** ಧರ್ಮಸ್ಥಳದ ಕ್ಷೇತ್ರದ ವಿರುದ್ಧ ನಡೆಯುತ್ತಿರುವ ಅಪಪ್ರಚಾರ ಖಂಡಿಸಿ ಜೆಡಿಎಸ್ ವತಿಯಿಂದ ಆ. 31ರ ಭಾನುವಾರ ಧರ್ಮಸ್ಥಳ ಸತ್ಯಯಾತ್ರೆ ಹಮ್ಮಿಕೊಳ್ಳಲಾಗಿದೆ ಎಂದು ಶಾಸಕ ಹೆಚ್.ಪಿ. ಸ್ವರೂಪ್ ಅವರು ತಿಳಿಸಿದರು.

ಸುದ್ದಿಗಾರರೊಂದಿಗೆ ಶುಕ್ರವಾರ ಮಾತನಾಡಿದ ಅವರು, ಅಂದು ಬೆಳಗ್ಗೆ 7.30ಕ್ಕೆ ರಾಜ್ಯದ ವಿವಿಧೆಡೆಗಳಿಂದ ಸಹಸ್ರಾರು ಸಂಖ್ಯೆಯ ಕಾರ್ಯಕರ್ತರು, ಮುಖಂಡರು ಹಾಗು ಧರ್ಮಸ್ಥಳದ ಭಕ್ತರು ಆಗಮಿಸಲಿದ್ದು, ಎಲ್ಲರಿಗೂ ಕಂದಲಿಯ ಯಗಚಿ ಶಾಲಾ ಆವರಣದಲ್ಲಿ ಉಪಾಹಾರದ ವ್ಯವಸ್ಥೆ ಮಾಡಲಾಗಿದೆ.

ಪಕ್ಷದ ವರಿಷ್ಠರಾದ ಹೆಚ್.ಡಿ. ದೇವೇಗೌಡ, ಹೆಚ್.ಡಿ.ಕುಮಾರಸ್ವಾಮಿ, ಹೆಚ್.ಡಿ.ರೇವಣ್ಣ ಅವರ ಮಾರ್ಗದರ್ಶನ ಮತ್ತು ನಿಖಿಲ್ ಕುಮಾರಸ್ವಾಮಿ ನೇತೃತ್ವದಲ್ಲಿ ಯಾತ್ರೆ ನಡೆಯಲಿದೆ. ಸುಮಾರು 10 ಸಾವಿರ ಜನರು ಹಾಸನದಿಂದ ಧರ್ಮಸ್ಥಳಕ್ಕೆ ತೆರಳಿ ಡಾ.ವೀರೇಂದ್ರ ಹೆಗ್ಗಡೆ ಅವರನ್ನು ಭೇಟಿಯಾಗುತ್ತೇವೆಂದರು.



ಶಾಸಕ ಸಿ.ಎನ್.ಬಾಲಕೃಷ್ಣ ಅವರು ಮಾತನಾಡಿ, ನಿಖಿಲ್ ಅವರ ನೇತೃತ್ವದಲ್ಲಿ ಭಾನುವಾರ ಸಹಸ್ರಾರು ಜನರು ಧರ್ಮಸ್ಥಳಕ್ಕೆ ಹೊರಡುತ್ತೇವೆ. ವೀರೇಂದ್ರ ಹೆಗ್ಗಡೆ ಅವರಿಗೆ ಶಕ್ತಿ ತುಂಬುತ್ತೇವೆ. ಶ್ರೀ ಕ್ಷೇತ್ರ ಧರ್ಮಸ್ಥಳವು ನಾಡಿನ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸುತ್ತಿದೆ. ಮೀನುಗಾರಿಕೆ, ಕೃಷಿ, ಸಂಘ ರಚನೆ, ಕೆರೆಗಳ ಪ್ರಗತಿ, ಅತಿವೃಷ್ಟಿ-ಅನಾವೃಷ್ಟಿ ವೇಳೆ ಸಹಾಯ ಮಾಡಿದೆ. ಅದರ ಬಗ್ಗೆ ಅಪಪ್ರಚಾರ ಸಲ್ಲದು ಎಂದರು.

ಧರ್ಮಸ್ಥಳ ಕ್ಷೇತ್ರ 800 ವರ್ಷಗಳ ಇತಿಹಾಸ ಹೊಂದಿದೆ. ಹಿಂದೂಗಳ ಶ್ರದ್ಧಾ ಕೇಂದ್ರಗಳು ಧಾರ್ಮಿಕ ಪರಂಪರೆ ತಾಣಗಳು. ಅವುಗಳಿಗೆ ಕೆಟ್ಟ ಹೆಸರು ತರಲು ಹಲವು ವರ್ಷಗಳಿಂದ ಷಡ್ಯಂತ್ರ ನಡೆಯುತ್ತಲೆ ಇದೆ. ಯಾವುದೇ ಸಾಕ್ಷ್ಯಧಾರ ಇಲ್ಲದಿದ್ದರೂ ಸುಖಾ ಸುಮ್ಮನೆ ಆರೋಪ ಮಾಡುತ್ತಿರುವುದು ಸರಿಯಲ್ಲ. ಇದರಿಂದ ಧರ್ಮಾಧಿಕಾರಿ ಅವರ ಮನಸ್ಸಿಗೆ ನೋವಾಗಿದೆ ಎಂದರು.

**ಸತ್ಯಯಾತ್ರೆಯ ಮಾರ್ಗಸೂಚಿ**

ಅಂದು ಹಾಸನದಿಂದ ಆರಂಭವಾಗುವ ಯಾತ್ರೆಯಲ್ಲಿ ಭಾಗಿ ಯಾಗುವ ಕಾರ್ಯಕರ್ತರು, ಭಕ್ತಾಧಿಗಳು ಬೆಳಿಗ್ಗೆ 7 ಗಂಟೆಗೆ ನಗರಕ್ಕೆ ಬರಬೇಕು. ಬಿಳಿ ವಸ್ತ್ರದ ಶಲ್ಯ ಧರಿಸಬೇಕು. ಉಪಾಹಾರದ ನಂತರ ಯಾತ್ರೆ ಹೊರಡಲಿದೆ. ಧರ್ಮಸ್ಥಳದ ನೇತ್ರಾವತಿ ಬಳಿ ವಾಹನಗಳ ಪಾರ್ಕಿಂಗ್ ವ್ಯವಸ್ಥೆ ಇದೆ. ಎಲ್ಲರೂ ವಾಹನಗಳ (ಆರ್‌ಸಿ/ಡಿಎಲ್) ತರಬೇಕು. ಮಧ್ಯಾಹ್ನ 1 ಗಂಟೆಗೆ ಅಮೃತ ವರ್ಷಿಣಿ ಸಭಾಂಗಣದಲ್ಲಿ ಕಾರ್ಯ ಕ್ರಮ ನಡೆಯಲಿದೆ. ಆ ನಂತರ ಮಂಜುನಾಥನ ದರ್ಶನ ಪಡೆದು, ಪ್ರಸಾದ ಸ್ವೀಕರಿಸಿ ವಾಪಾಸ್ ಬರುವುದು.

# ಮೂರನೇ ಬಾರಿಗೆ ಹೆಚ್‌ಡಿಸಿಸಿ ಬ್ಯಾಂಕ್ ಅಧ್ಯಕ್ಷರಾದ ಸೋಮನಹಳ್ಳಿ ನಾಗರಾಜ್

## ಉಪಾಧ್ಯಕ್ಷ ಹುದ್ದೆ ಗಿಟ್ಟಿಸಿಕೊಂಡ ಶೇಖರಪ್ಪ | ನಿರ್ದೇಶಕರಿಗೆ ಪ್ರಮಾಣ ಪತ್ರ ವಿತರಣೆ | ಪದಾಧಿಕಾರಿಗಳಿಗೆ ಅಭಿನಂದನೆ

• ಪ್ರಜೋದಯ ವರದಿ

**ಹಾಸನ:** ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ನ ನೂತನ ಅಧ್ಯಕ್ಷರಾಗಿ ಹಾಲಿ ಅಧ್ಯಕ್ಷ ಸೋಮನಹಳ್ಳಿ ನಾಗರಾಜ್ ಹಾಗು ಉಪಾಧ್ಯಕ್ಷರಾಗಿ ಅರಸೀಕೆರೆಯ ಶೇಖರಪ್ಪ ಅವರು ಶುಕ್ರವಾರ ಅವಿರೋಧವಾಗಿ ಆಯ್ಕೆಯಾದರು.

ಮಾಜಿ ಸಚಿವ ಹೆಚ್.ಡಿ.ರೇವಣ್ಣ ಅವರ ಪರಮಾಪ್ತರಾದ ಸೋಮನಹಳ್ಳಿ ನಾಗರಾಜ್ ಹಾಗು ಶೇಖರಪ್ಪ ಅವರ ಆಯ್ಕೆಗೆ ಬ್ಯಾಂಕ್‌ನ ನಿರ್ದೇಶಕರು ಸಮ್ಮತಿ ಸೂಚಿಸಿದ್ದರಿಂದ ಚುನಾವಣಾಧಿಕಾರಿ ಮಾರುತಿ ಅವರು ಅವಿರೋಧ ಆಯ್ಕೆ ಘೋಷಿಸಿದರು.

ಅಧ್ಯಕ್ಷ ಸ್ಥಾನಕ್ಕೆ ನಾಗರಾಜ್ ಹಾಗು ಉಪಾಧ್ಯಕ್ಷ ಸ್ಥಾನಕ್ಕೆ ಶೇಖರಪ್ಪ ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸಲಿಲ್ಲ. ಈ ಮೂಲಕ ಸತತ 3ನೇ ಬಾರಿಗೆ ನಾಗರಾಜ್ ಅಧ್ಯಕ್ಷರಾಗಿ ಮರು ಆಯ್ಕೆಯಾದರು. ಸೋಮನಹಳ್ಳಿ ನಾಗರಾಜ್ ಅವರು ಮೊದಲ ಬಾರಿಗೆ ಎರಡೂವರೆ ವರ್ಷ, ನಂತರ ಐದು ವರ್ಷ ಅಧ್ಯಕ್ಷರಾಗಿದ್ದು, ಮೂರನೇ ಬಾರಿಗೂ ಪುನರಾಯ್ಕೆಯಾಗಿದ್ದಾರೆ.



ಶ್ರವಣಬೆಳಗೊಳ ಶಾಸಕ ಸಿ.ಎನ್. ಬಾಲಕೃಷ್ಣ ಅವರು ಮಾತನಾಡಿ, ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರ ಆಶೀರ್ವಾದ, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಹಾಗು ಮಾಜಿ ಸಚಿವ ಹೆಚ್.ಡಿ. ರೇವಣ್ಣ, ಎಲ್ಲಾ ಶಾಸಕರ ಸಹಕಾರದಿಂದ ಬ್ಯಾಂಕ್ ಸದೃಢವಾಗಿ ಬೆಳೆದಿದೆ ಎಂದರು.

ಬ್ಯಾಂಕ್‌ಗೆ ದೇವೇಗೌಡರು ಉತ್ತಮ ತಳಹದಿ ಹಾಕಿಕೊಟ್ಟಿದ್ದಾರೆ. ಅವರು ಉಳಿಸಿದ ಬ್ಯಾಂಕ್‌ನ್ನು ದಿ|| ಪಟೇಲ್ ಶಿವರಾಂ, ನಾನು, ಹೊನ್ನವಳ್ಳಿ ಸತೀಶ್, ಸೋಮನಹಳ್ಳಿ ನಾಗರಾಜ್ ಮತ್ತಿತರರು ಉತ್ತಮ ರೀತಿಯಲ್ಲಿ ಮುನ್ನಡೆಸಿಕೊಂಡು ಬಂದಿದ್ದೇವೆ. ಲಕ್ಷಾಂತರ ರೈತರಿಗೆ ಸಾಲ ಸೌಲಭ್ಯ ನೀಡಲಾಗಿದೆ ಎಂದು ತಿಳಿಸಿದರು.

ಇದೇ ವೇಳೆ ಸರ್ಕಾರದ ವಿಶ್ವಾಸ ಪಡೆದು ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಬೇಕು. ರೈತರಿಗೆ ಇನ್ನೂ ಹೆಚ್ಚಿನ ರೀತಿಯಲ್ಲಿ ಅನುಕೂಲ ಮಾಡಿಕೊಡಿ ಎಂದು ನೂತನ ಅಧ್ಯಕ್ಷರು-ಉಪಾಧ್ಯಕ್ಷರಿಗೆ ಸಲಹೆ ನೀಡಿದರು.

ವಿಧಾನ ಪರಿಷತ್ ಸದಸ್ಯ ಡಾ. ಸೂರಜ್ ರೇವಣ್ಣ ಅವರು ಮಾತನಾಡಿ, ನಾಗರಾಜ್ ಅವರು ಅಧ್ಯಕ್ಷರಾಗಿ ಎಲ್ಲರೂ ಮೆಚ್ಚುವ, ವಿಶ್ವಾಸದ ಕೆಲಸ ಮಾಡಿದ್ದಾರೆ. ಅವರ ಅವಿರೋಧ ಆಯ್ಕೆ ಸಮರ್ಥನೀಯ. ಅವರ ಕಾರ್ಯವೈಖರಿ ಉತ್ತಮವಾಗಿದೆ. ಅವರಿಂದ ರೈತರಿಗೆ ಇನ್ನೂ ಹೆಚ್ಚಿನ ನೆರವು ಸಿಗಲಿ. ಉತ್ತಮ ಕೆಲಸ ಮಾಡಲಿ, ಅವರಿಂದ ಜಿಲ್ಲೆಯ ರೈತರಿಗೆ ಮತ್ತಷ್ಟು ಅನುಕೂಲ ಆಗಲಿದೆ ಎಂದು ನಿರೀಕ್ಷೆ ಹೊಂದಿದ್ದೇನೆಂದರು.

> ಮಾಜಿ ಸಚಿವ ಹೆಚ್.ಡಿ.ರೇವಣ್ಣ ಅವರ ಮಾರ್ಗದರ್ಶನದಲ್ಲಿ ಸೋಮನಹಳ್ಳಿ ನಾಗರಾಜ್ ಹಾಗು ಶೇಖರಪ್ಪ ಅವರನ್ನು ಹೆಚ್‌ಡಿಸಿಸಿ ಬ್ಯಾಂಕ್ ಅಧ್ಯಕ್ಷ ಹಾಗು ಉಪಾಧ್ಯಕ್ಷರಾಗಿ ಆಯ್ಕೆ ಮಾಡಲಾಗಿದೆ. ನೂತನ ಪದಾಧಿಕಾರಿಗಳಿಂದ ಬ್ಯಾಂಕ್ ಮತ್ತಷ್ಟು ಅಭಿವೃದ್ಧಿ ಹೊಂದಲಿದೆ.
> -ಹೆಚ್.ಪಿ.ಸ್ವರೂಪ್, ಶಾಸಕ.

**ಮುಳ್ಳಿನ ಹಾದಿ**

ಬ್ಯಾಂಕ್ ಅಧ್ಯಕ್ಷ ನಾಗರಾಜ್ ಅವರು ಮಾತನಾಡಿ, ತಮ್ಮ ಅವಿರೋಧ ಆಯ್ಕೆಗೆ ಸಹಕರಿಸಿದ ಮಾಜಿ ಸಚಿವ ಹೆಚ್.ಡಿ.ರೇವಣ್ಣ, ಶಾಸಕರಾದ ಸಿ.ಎನ್.ಬಾಲಕೃಷ್ಣ, ಹೆಚ್.ಪಿ.ಸ್ವರೂಪ್, ಸೂರಜ್ ರೇವಣ್ಣ, ಆಡಳಿತ ಮಂಡಳಿ ಸದಸ್ಯರು ಹಾಗು ಸಹಕಾರಿ ಬಂಧುಗಳಿಗೆ ಧನ್ಯವಾದ ಹೇಳಿದರು. » ನಾಲ್ಕನೇ ಪುಟದಲ್ಲಿ

# ಹಿಂದೂ ಸಂಪ್ರದಾಯದಂತೆ ಶ್ರದ್ಧಾ ಭಕ್ತಿಯಿಂದ ದಸರಾ ಉದ್ಘಾಟಿಸಲಿ

• ಪ್ರಜೋದಯ ವರದಿ

**ಹಾಸನ:** ಸಾಹಿತಿ ಬಾನು ಮುಷ್ತಾಕ್ ಅವರು ಹಿಂದೂ ಸಂಪ್ರದಾಯದಂತೆ ತಾಯಿ ಚಾಮುಂಡೇಶ್ವರಿಯನ್ನು ಒಪ್ಪಿ ಶ್ರದ್ಧೆಯಿಂದ ದಸರಾ ಉದ್ಘಾಟನೆ ಮಾಡಿಕೊಡುವುದಾದರೆ ಅದಕ್ಕೆ ವಿರೋಧ ವ್ಯಕ್ತಪಡಿಸಲು ನಾನ್ಯಾರು ಎಂದು ಮಾಜಿ ಶಾಸಕ ಪ್ರೀತಮ್ ಜೆ. ಗೌಡ ಅವರು ಹೇಳಿದರು.

ನಗರದ ಬಿಜೆಪಿ ಜಿಲ್ಲಾ ಕಚೇರಿಯಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಿಂದೂಗಳ ನಂಬಿಕೆ ಮೇಲೆ ವಿಶ್ವಾಸ, ಗೌರವ, ಪ್ರೀತಿ ಇಟ್ಟು ಉದ್ಘಾಟನೆ ಮಾಡುವುದಾದರೆ ಮಾಡಲಿ. ಮುಂದಿನ ದಿನಗಳಲ್ಲಿ ಬೇರೆ ಧರ್ಮಗಳಲ್ಲೂ ಎಲ್ಲಾ ಮಹಿಳೆಯರಿಗೂ ಈ ರೀತಿಯ ಶಕ್ತಿ ಸಿಗಲಿ ಎಂದು ಪ್ರಾರ್ಥಿಸುತ್ತೇನೆ. ಬಾನು ಮುಷ್ತಾಕ್ ಅವರ ಆಯ್ಕೆಯನ್ನು ಯಾರೋ ವಿರೋಧಿಸುತ್ತಾರೆಂದ ಮಾತ್ರಕ್ಕೆ ನಾನು ಅವರ ವಕ್ತಾರನಾಗಲು ಇಷ್ಟಪಡುವುದಿಲ್ಲವೆಂದರು.



**ಸೆ. 1 ರಂದು ಧರ್ಮಸ್ಥಳ ಚಲೋ**

ಧರ್ಮಸ್ಥಳದ ವಿರುದ್ಧ ನಡೆಯುತ್ತಿರುವ ಷಡ್ಯಂತ್ರ ಖಂಡಿಸಿ ಸೆ.1 ರಂದು ಬಿಜೆಪಿಯಿಂದ ಧರ್ಮಸ್ಥಳ ಚಲೋ ಹಮ್ಮಿಕೊಳ್ಳಲಾಗಿದೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರ ನೇತೃತ್ವದಲ್ಲಿ ಯಾತ್ರೆ ಆಯೋಜಿಸಲಾಗಿದೆ. ಸಮಾರಂಭದಲ್ಲಿ 10 ಸಾವಿರ ಜನರು ಭಾಗವಹಿಸಲಿದ್ದಾರೆಂದರು.

ಶ್ರೀ ಮಂಜುನಾಥನ ಭಕ್ತರು, ಕ್ಷೇತ್ರದ ಹಿತೈಷಿಗಳು ಭಾಗಿಯಾಗಿ ಪಿತೂರಿ ಮಾಡುವವರಿಗೆ ಉತ್ತರ ಕೊಡಬೇಕು. ಸನಾತನ ಹಿಂದೂ ಧರ್ಮದ ವಿರುದ್ಧ ಷಡ್ಯಂತ್ರ ವ್ಯವಸ್ಥಿತವಾಗಿ ನಡೆಯುತ್ತಿದೆ. ಅದಕ್ಕಾಗಿ ಕೆಲವರು ಒಂದು ತಂಡವಾಗಿ ಕೆಲಸ ಮಾಡುತ್ತಿದ್ದಾರೆ. ಇದು ರಾಜ್ಯ-ದೇಶದ ಗಮನ ಸೆಳೆದಿದೆ. ಕಪಟಿಗಳ ನಿಜ ಬಣ್ಣ ಬಯಲಾಗಬೇಕೆಂದರು.

**ರಾಜಕಾರಣ ಮಾಡುತ್ತಿಲ್ಲ**

ಧರ್ಮಸ್ಥಳ ವಿಚಾರದಲ್ಲಿ ಬಿಜೆಪಿ ರಾಜಕೀಯ ಮಾಡುತ್ತಿಲ್ಲ. ಹಿಂದೂ ಧರ್ಮ ಉಳಿಸಲು ಬಿಜೆಪಿ ಸದಾ ಮುಂದೆ ಇರಲಿದೆ. ಎಲ್ಲಾ ಸಮಾಜಗಳ ಹಿಂದೂ ಬಾಂಧವರು ಹೋರಾಟಕ್ಕೆ » ನಾಲ್ಕನೇ ಪುಟದಲ್ಲಿ

# ವಾಹನ ಸಂಚಾರ ಬಂದ್ ಮಾಡಿದ ಒಂಟಿ ಸಲಗ

• ಪ್ರಜೋದಯ ವರದಿ

**ಸಕಲೇಶಪುರ:** ದೈತ್ಯಾಕಾರದ ಒಂಟಿ ಸಲಗ ರಸ್ತೆಗೆ ಅಡ್ಡಲಾಗಿ ನಿಂತು ವಾಹನ ಸಂಚಾರಕ್ಕೆ ಅಡ್ಡಿ ಉಂಟು ಮಾಡಿದ ಘಟನೆ ತಾಲ್ಲೂಕಿನ ಹಳ್ಳಿಬೈಲು ಗ್ರಾಮದಲ್ಲಿ ಗುರುವಾರ ರಾತ್ರಿ ನಡೆದಿದೆ.



ಬೈನೆ ಮರವನ್ನು ನೆಲಕ್ಕುರುಳಿಸಿ ತಿಂದು ನಿಂತಿದ್ದ ಕಾಡಾನೆ, ವಾಹನಗಳ ಓಡಾಟಕ್ಕೆ ತೊಂದರೆ ಮಾಡಿತು. ಹಲವಾರು ವಾಹನಗಳು ರಸ್ತೆಯಲ್ಲೇ ನಿಂತುಕೊಳ್ಳಬೇಕಾಯಿತು. ಮಳೆ ಸುರಿಯುತ್ತಿದ್ದ ಕಾರಣ ವಾಹನ ಸವಾರರು ಪರದಾಡಿದರು. ಚಾಲಕರು ಘಟನೆಯ ವಿಡಿಯೋ ಮಾಡಿ ಅರಣ್ಯ ಇಲಾಖೆ ಸಿಬ್ಬಂದಿ ತಕ್ಷಣ ಸ್ಥಳಕ್ಕೆ ಬರುವಂತೆ ಒತ್ತಾಯಿಸಿದರು. ಸ್ಥಳಕ್ಕೆ ಬಂದ ಇಟಿಎಫ್ ಸಿಬ್ಬಂದಿ ಪಟಾಕಿ ಸಿಡಿಸಿ ಕಾಡಾನೆಯನ್ನು ಓಡಿಸಿದರು. ಪಟಾಕಿ ಶಬ್ದಕ್ಕೆ ಹೆದರಿದ ಒಂಟಿ ಸಲಗ ಕಾಡು ಪ್ರವೇಶಿಸಿತು.

# ತೆಂಗು ಬೆಳೆ ರಕ್ಷಣೆ: ಐಸಿಎಆರ್ ಪ್ರಾಥಮಿಕ ಸಭೆ

• ಪ್ರಜೋದಯ ವರದಿ

**ಬೆಂಗಳೂರು:** ಕಾಸರಗೋಡಿನ ಕೇಂದ್ರೀಯ ತೋಟ ಬೆಳೆಗಳ ಸಂಶೋಧನಾ ಸಂಸ್ಥೆ (ಐಸಿಎಆರ್) ವತಿಯಿಂದ ಇಲ್ಲಿನ ಕುಮಾರ ಕೃಪಾ ಅತಿಥಿ ಗೃಹದಲ್ಲಿ ಶುಕ್ರವಾರ ನಡೆದ ತೆಂಗು ಬೆಳೆಗೆ ಕೀಟ ಮತ್ತು ರೋಗ ನಿರ್ವಹಣೆ ಕುರಿತ ಪ್ರಾಥಮಿಕ ಸಭೆಯಲ್ಲಿ ಸಂಸದ ಶ್ರೇಯಸ್ ಪಟೇಲ್ ಅವರು ಭಾಗಿಯಾಗಿದರು.

ಹಾಸನ ಜಿಲ್ಲೆಯ ಅರಸೀಕೆರೆ, ಚನ್ನರಾಯಪಟ್ಟಣ, ಕಡೂರು ಭಾಗಗಳಲ್ಲಿ ಹೆಚ್ಚಾಗಿ ತೆಂಗು ಬೆಳೆಯಲಾಗುತ್ತಿದೆ. ಅದನ್ನೇ ಜೀವನಾಧಾರವಾಗಿಸಿಕೊಂಡಿರುವ ರೈತರು ರೋಗಗಳ ಹೊಡೆತದಿಂದ ಸಂಕಷ್ಟಕ್ಕೆ ಸಿಲುಕಿದ್ದಾರೆ. ಅವರ ಬದುಕು ಸುಧಾರಿಸಬೇಕು. ಪ್ರಮುಖ ವಾಣಿಜ್ಯ ಬೆಳೆ ತೆಂಗಿನ ಬೆಳೆ ಉಳಿವಿಗೆ ಸರ್ಕಾರ ಹಾಗು ಸಂಶೋಧನಾ ಸಂಸ್ಥೆಗಳ ಸಹಕಾರ ಅಗತ್ಯವಿದೆ ಎಂದು



ಶ್ರೇಯಸ್ ಪಟೇಲ್ ಸಭೆಯ ಗಮನಕ್ಕೆ ತಂದರು.

ತೆಂಗಿನ ತೋಟಗಳಿಗೆ ಕೀಟ ಮತ್ತು ರೋಗಗಳಿಂದ ಉಂಟಾಗುತ್ತಿರುವ ಹಾನಿ, ರೈತರ ಆರ್ಥಿಕ ಹಿತಾಸಕ್ತಿ ಹಾಗು ಮುಂದಿನ ದಿನಗಳಲ್ಲಿ ಕೈಗೊಳ್ಳಬೇಕಾದ ಸಮಗ್ರ ಕ್ರಮಗಳ ಬಗ್ಗೆ ಚರ್ಚೆ ನಡೆಯಿತು. ಕೇಂದ್ರ ಸಚಿವ ವಿ.ಸೋಮಣ್ಣ, ಸಂಸದ ಡಾ. ಸಿ.ಎನ್. ಮಂಜುನಾಥ್, ಐಸಿಎಆರ್ ನಿರ್ದೇಶಕ ಡಾ.ಕೆ.ಬಾಲಚಂದ್ರ, ಹೆಬ್ಬಾರ್ ಸೇರಿ ಅಧಿಕಾರಿಗಳು ಹಾಜರಿದ್ದರು.

# ಬೇಕರಿ, ಹೋಟೆಲ್‌ಗಳಲ್ಲಿ ಆಹಾರ ಸುರಕ್ಷತೆಗೆ ಸೂಚನೆ

• ಪ್ರಜೋದಯ ವರದಿ

**ಅರಕಲಗೂಡು :** ಪಟ್ಟಣ ಸೇರಿ ತಾಲೂಕಿನಾದ್ಯಂತ ಇರುವ ಹೋಟೆಲ್ ಮತ್ತು ಬೇಕರಿಗಳಲ್ಲಿ ಕಡ್ಡಾಯವಾಗಿ ಆಹಾರ ಸುರಕ್ಷತೆ ಮತ್ತು ಗುಣಮಟ್ಟದ ಬಗ್ಗೆ ಸಾರ್ವಜನಿಕ ವಿಶ್ವಾಸಾರ್ಹವನ್ನು ಮೂಡಿಸಬೇಕೆಂದು ಬೇಕರಿ, ಹೋಟೆಲ್ ಮಾಲೀಕರಿಗೆ ತಾಲೂಕು ಆರೋಗ್ಯಾಧಿಕಾರಿ ಡಾ.ಪುಷ್ಪಲತಾ ಅವರು ತಿಳುವಳಿಕೆ ನೀಡಿದರು.

ಶುಕ್ರವಾರ ಆಹಾರ ಸುರಕ್ಷತೆ ಮತ್ತು ಗುಣಮಟ್ಟದ ಇಲಾಖೆ ಮತ್ತು ಆರೋಗ್ಯ ಇಲಾಖೆ ಜಂಟಿಯಾಗಿ ಪಟ್ಟಣದ ವಿವಿಧ ಬೇಕರಿ, ಹೋಟಲ್‌ಗಳಿಗೆ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದ ಬಳಿಕ ಮಾತನಾಡಿದ ಅವರು, ಶುಕ್ರವಾರ ಎರಡು ಹೋಟೆಲ್, ಸ್ವೀಟ್ ಅಂಗಡಿ, ಪಿಜಾ ಸೆಂಟರ್ ಹಾಗೂ 11ಬೇಕರಿಗಳಿಗೆ ಭೇಟಿ ನೀಡಿದ ವೇಳೆ ಆಹಾರ ಸಿದ್ದಪಡಿಸುವ ಸ್ಥಳ ತುಂಬಾ ಮಲೀನವಾಗಿರುವುದು ಕಂಡು ಬಂದಿತು. ಪರಿಕರಗಳು ಸ್ವಚ್ಛವಾಗಿಲ್ಲದಿರುವುದು ಸೇರಿ ಶುದ್ಧ ನೀರು ಬಳಕೆ ಇಲ್ಲದಿರುವುದನ್ನು ನೋಡಿ ಗಾಬರಿ ಉಂಟಾ



ಯಿತು.ಇನ್ನೂ ಮುಂದೆ ಈರೀತಿ ನಿರ್ಲಕ್ಷ್ಯತೆ ವಹಿಸಿದರೇ ಬಾಗಿಲು ಮುಚ್ಚಿಸುವ ಜತೆಗೆ ಕಾನೂನು ರೀತಿಯ ಕ್ರಮ ಜರುಗಿಸಲಾಗುವು ದೆಂದು ಮಾಲೀಕರಿಗೆ ಎಚ್ಚರಿಕೆ ನೀಡಿದರು.

ಕೆಲವು ಬೇಕರಿ, ಹೋಟೆಲ್‌ಗಳಲ್ಲಿ ಬಳಕೆ ಮಾಡುತ್ತಿರುವ ಆಹಾರ ಪದಾರ್ಥಗಳಲ್ಲಿ ಕಲ್ಮಶಗಳು ಮತ್ತು ಇತರೆ ಅಪಾಯಕಾರಿ ವಸ್ತುಗಳ ಬಳಕೆಯನ್ನು ಗಮನಿಸಲಾಗಿದೆ. ಅವುಗಳನ್ನು ಕಡ್ಡಾಯವಾಗಿ ಬಳಕೆ ಮಾಡಬಾರದು. ಆಹಾರ ಸುರಕ್ಷತೆ ಮತ್ತು ಪೋಷಣೆಯುಕ್ತ ಪದಾರ್ಥಗಳನ್ನು ಬಳಕೆ ಮಾಡಬೇಕು. ಬಳಕೆ ಮಾಡುವ ಪದಾರ್ಥಗಳ ಉತ್ಪಾದನೆ ದಿನಾಂಕ, ಎಕ್ಸ್‌ಪೆರಿ ಡೇಟ್ ಗಮನಿಸಿ ಬಳಕೆ ಮಾಡಬೇಕು. ಕಡ್ಡಾಯವಾಗಿ ಬೇಕರಿ ತಿನಿಸುಗಳನ್ನು ತಯಾರಿಸುವ ಪರಿಕರಗಳ ಸ್ವಚ್ಛತೆಯನ್ನು ಪಾಲನೆ ಮಾಡಬೇಕಿದೆ ಎಂಬ ತಿಳುವಳಿಕೆಯನ್ನು ಮಾಲೀಕರಿಗೆ ನೀಡಲಾಯಿತು ಎಂದರು.

ರಸ್ತೆ ಬದಿಯಲ್ಲಿ ತಿಂಡಿ ತಿನಿಸುವ ಮಾರುವ ಗೂಡಂಗಡಿಗಳು ಸಹ ಪಡೆದಿಲ್ಲ.ಕಡ್ಡಾಯವಾಗಿ ಸ್ಥಳೀಯ ಸಂಸ್ಥೆ ಮತ್ತು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ವತಿಯಿಂದ ಅನುಮತಿ ಪಡೆಯಬೇಕಿದೆ.ಕೂಡಲೇ ಪಪಂ ಆರೋಗ್ಯ ನಿರೀಕ್ಷಕರನ್ನು ಒಳಗೊಂಡಂತೆ ಪಟ್ಟಣದ ಎಲ್ಲಾ ಬೇಕರಿ ಮಾಲೀಕರು,ಹೋಟೆಲ್ ಮಾಲೀಕರುಗಳು ಸಭೆಯನ್ನು ಕರೆದು ಆಹಾರ ಸುರಕ್ಷತೆ,ನಿರ್ವಹಣೆ ಕುರಿತಂತೆ ತಿಳುವಳಿಕೆ ನೀಡಲು ಉದ್ದೇಶಿಸಲಾಗಿದೆ ಎಂದು ಹೇಳಿದರು.

ಸಿದ್ದಗೊಳ್ಳುವ ಬಿಸಿಯಾದ ಆಹಾರವನ್ನು ಪ್ಲಾಸ್ಟಿಕ್‌ಗೆ ಹಾಕಿ ಕೊಡ ಬಾರದು. ಶಾಲಾ ಕಾಲೇಜು ಬಳಿ ಮಾದಕ ವಸ್ತುಗಳ ಮಾರಾಟ ಮಾಡಬಾರದು. ಇಂತಹ ಅಂಗಡಿಗಳ ಮೇಲೆ ದಾಳಿ ಮಾಡಲಾಗುವುದೆಂದರು. ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಅಧಿಕಾರಿ ವಿನಯ್,ಆರೋಗ್ಯ ಇಲಾಖೆ ಅಧಿಕಾರಿಗಳಾದ ಪರಮೇಶ್, ಜಯರಾಮ್ ಇದ್ದರು.


## ಸಂತೆಪೇಟೆಯಲ್ಲಿ ಸಿಸಿಟಿವಿ ಕ್ಯಾಮರಾ | ಚಾಲಕರ ಆಟಾಟೋಪಕ್ಕೆ ಕಡಿವಾಣ

# ಕಸ ಸಂಗ್ರಹ ಆಟೋಗಳಿಗೆ ಜಿಪಿಎಸ್ ಕಣ್ಗಾವಲು

• ಪ್ರಜೋದಯ ವರದಿ

**ಹಾಸನ:** ನಗರದಲ್ಲಿ ತ್ಯಾಜ್ಯ ವಿಲೇವಾರಿ ಸಮಸ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಲೇ ಇದ್ದು, ಕಸ ಸಂಗ್ರಹ ಆಟೋಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿಲ್ಲವೆಂಬ ಗಂಭೀರ ಆರೋಪ ಕೇಳಿ ಬಂದ ಹಿನ್ನಲೆಯಲ್ಲಿ ಎಲ್ಲಾ ವಾಹನಗಳಿಗೆ ಜಿಪಿಎಸ್ ಅಳವಡಿಸಿ ಅವುಗಳ ಮೇಲ್ವಿಚಾರಣೆಗೆ ಮಹಾನಗರ ಪಾಲಿಕೆ ಕ್ರಮ ಕೈಗೊಂಡಿದೆ.

ನಗರದ 35 ವಾರ್ಡ್ ಹಾಗು ಇತ್ತೀಚೆಗೆ ಪಾಲಿಕೆಗೆ ಸೇರ್ಪಡೆಯಾಗಿರುವ 37 ಹಳ್ಳಿಗಳಲ್ಲಿ ಕಸ ಸಂಗ್ರಹ ಜವಾಬ್ದಾರಿಯನ್ನು ಪಾಲಿಕೆ ಮಾಡು ತ್ತಿದೆ. ಅದಕ್ಕಾಗಿ 52 ಆಟೋ ಹಾಗು 2 ಟಿಪ್ಪರ್‌ಗಳನ್ನು ನಿಯೋಜಿಸಲಾಗಿದೆ. ಪ್ರತಿ ಆಟೋ ದಿನಕ್ಕೆ 3 ಟ್ರಿಪ್ ಕಸ ಸಂಗ್ರಹ ಮಾಡಬೇಕು. ಅಂದರೆ ಒಂದು ವಾರ್ಡ್‌ಗೆ ಮೂರು ಬಾರಿ ಭೇಟಿ ನೀಡಬೇಕೆಂಬ ಕಟ್ಟುನಿಟ್ಟಿನ ಆದೇಶ ಮಾಡಲಾಗಿದೆ. ಆದರೆ, ಬಹುತೇಕ ಆಟೋ ಚಾಲಕರು



ಕೇವಲ ಒಂದು ಟ್ರಿಪ್ ಕಸ ಸಂಗ್ರಹಿಸಿ ನಂತರ ವಾಹನ ನಿಲ್ಲಿಸಿ ಬಿಡುತ್ತಿದ್ದರು. ಈ ಬಗ್ಗೆ ಪಾಲಿಕೆ ಸದಸ್ಯರು ಹಾಗು ಸಾರ್ವಜನಿಕರಿಂದ ದೂರು ಕೇಳಿ ಬಂದ ಹಿನ್ನಲೆ ಯಲ್ಲಿ ಎಲ್ಲಾ ಆಟೋಗಳಿಗೆ ಜಿಪಿಎಸ್ ಅಳವಡಿಸಿದ್ದು, ವಾಹನ ಎಲ್ಲಿದೆ ಎಂಬುದನ್ನು ಸುಲಭವಾಗಿ ತಿಳಿಯಲಾಗುತ್ತಿದೆ. ಜಿಪಿಎಸ್ ಅಳವಡಿಕೆ ಬಳಿಕ ಚಾಲಕರ ಆಟಾಟೋಪಕ್ಕೆ ಕಡಿವಾಣ ಬಿದ್ದಂತಾಗಿದೆ. ಜೊತೆಗೆ ಸಂತೆಪೇಟೆಯ ತ್ಯಾಜ್ಯ ಸಂಗ್ರಹ ಸ್ಥಳದಲ್ಲಿ ಸಿಸಿಟಿವಿ ಕ್ಯಾಮರಾ ಅಳವಡಿಸಲಾಗಿದೆ. ಸಮಯ ವ್ಯರ್ಥ ಮಾಡುವ ಸಿಬ್ಬಂದಿಯ ಮೇಲೆ ಪಾಲಿಕೆ ಅಧಿಕಾರಿಗಳು ಹದ್ದಿನ ಕಣ್ಣಿಟ್ಟಿದ್ದಾರೆ. ಮತ್ತೊಂದೆಡೆ ಸಂತೆಪೇಟೆಯಿಂದ ಅಗಿಲೆ ನೆಲಭರ್ತಿ ಘಟಕಕ್ಕೆ ತ್ಯಾಜ್ಯ ಹೊತ್ತೊಯ್ಯುವ ಟಿಪ್ಪರ್‌ಗಳಿಗೂ ಜಿಪಿಎಸ್ ಹಾಕಿ, ಸಂಚಾರದಲ್ಲಿ ವಿಳಂಬವಾಗದಂತೆ ಮುನ್ನೆಚ್ಚರಿಕೆ ವಹಿಸಲಾಗಿದೆ.

**ಎಷ್ಟೇ ಬಿಗಿ ಮಾಡಿದರೂ ಮುಗಿಯದ ಗೋಳು**

ನಗರದಲ್ಲಿ ಸ್ವಚ್ಛತೆ ಕಾಪಾಡಬೇಕೆಂಬ ನಿಟ್ಟಿನಲ್ಲಿ ಮಹಾನಗರ ಪಾಲಿಕೆ ಎಷ್ಟೇ ಬಿಗಿ ನಿಯಮ ಕೈಗೊಂಡರೂ ಪರಿಸ್ಥಿತಿ ನಿಯಂತ್ರಣಕ್ಕೆ ಬರುತ್ತಿಲ್ಲ. ರಸ್ತೆಯ

**ಕಾರ್ಮಿಕರಿಗೆ ಸುರಕ್ಷತಾ ಪರಿಕರಗಳಿಲ್ಲ**

ಇನ್ನು ಕಸ ಸಂಗ್ರಹ ಹಾಗು ವಿಲೇವಾರಿ ಕಾರ್ಯದಲ್ಲಿ ನಿರತರಾಗಿರುವ ಕಾರ್ಮಿಕರಿಗೆ ಸುರಕ್ಷತಾ ಪರಿಕರಗಳೇ ಇಲ್ಲದಾಗಿದೆ. ಕಸ ಸಂಗ್ರಹಕ್ಕೆ ಆಟೋದಲ್ಲಿ ಬರುವ ಕಾರ್ಮಿಕರು ಮಾಸ್ಕ್, ಶೂ, ಕೈ ಗವಸು ಧರಿಸದೆ ತ್ಯಾಜ್ಯ ಶೇಖರಿಸುತ್ತಾರೆ. ಇನ್ನು ಸಂತೆಪೇಟೆಯಲ್ಲಿ ತ್ಯಾಜ್ಯ ಬೇರ್ಪಡಿಸುವ ಸಿಬ್ಬಂದಿಯ ಪರಿಸ್ಥಿತಿಯೂ ಹೇಳತೀರದಾಗಿದೆ. ಸಾಕಷ್ಟು ಕ್ಲಿಷ್ಟಕರ ಸನ್ನಿವೇಶದಲ್ಲಿ ಅಲ್ಲಿನ ಕಾರ್ಮಿಕರು ಕೆಲಸ ಮಾಡುತ್ತಿದ್ದು ಅಗತ್ಯ ಪರಿಕರಗಳನ್ನು ನೀಡುವತ್ತ ಸಂಬಂಧಪಟ್ಟ ಅಧಿಕಾರಿಗಳು ಗಮನ ಹರಿಸಬೇಕಿದೆ.

ಎಲ್ಲೆಂದರಲ್ಲಿ ಕಸದ ರಾಶಿ ಬಿದ್ದಿದ್ದು ತೆರವು ಮಾಡುವುದು ಅಪರೂಪವಾ ಗಿದೆ. ಕೆಲವು ವಾರ್ಡ್‌ಗಳಲ್ಲಿ ಕಸ ಸಂಗ್ರಹ ಆಟೋಗಳು ಬೆಳಿಗ್ಗೆ 10 ಗಂಟೆ ಬಳಿಕ ಬರುವುದರಿಂದ ಸಾರ್ವಜನಿಕರು ಕಸ ಹಾಕಲು ಸಾಧ್ಯವಾಗುತ್ತಿಲ್ಲ. ಹೀಗಾಗಿ ಅವರು ರಸ್ತೆಬದಿ ಕಸ ಸುರಿ ಯುವ ರೂಢಿ ಬೆಳೆಸಿಕೊಂಡಿದ್ದಾರೆ. ಸಾರ್ವಜನಿಕ ಸ್ಥಳದಲ್ಲಿ ಕಸ ಸುರಿ ಯುವವರಿಗೆ ದಂಡ ವಿಧಿಸುವ ಅವಕಾಶ ಇದೆಯಾದರೂ ಅಧಿಕಾರಿ ಗಳು ಅದನ್ನು ಗಂಭೀರವಾಗಿ ಪರಿಗಣಿ ಸುತ್ತಿಲ್ಲ. ಹೀಗಾಗಿ ನಗರದ ಎಲ್ಲಾ ಕಡೆ ಅನೈರ್ಮಲ್ಯ ತಾಂಡವವಾಡುತ್ತಿದ್ದು, ಬೀದಿ ಬದಿ ನಾಯಿಗಳ ಹಾವಳಿ ಹೆಚ್ಚಾಗಿರುವುದು ಮಾತ್ರವಲ್ಲದೆ ದುರ್ವಾಸನೆಗೆ ಮೂಗು ಮುಚಿಕೊಂಡು ಹೋಗಬೇಕಾದ ಪರಿಸ್ಥಿತಿ ಇದೆ. ನಗರದ 80 ಅಡಿ ರಸ್ತೆ, ಉತ್ತರ ಬಡಾವಣೆ, ಪೆನ್ಷನ್ ಮೊಹಲ್ಲಾ, ಚಿಪ್ಪಿನಕಟ್ಟೆ, ಸಿದ್ಧಯ್ಯ ನಗರ, ಹೇಮಾವತಿ ನಗರ ಸೇರಿದಂತೆ ಅನೇಕ ಬಡಾವಣೆಗಳಲ್ಲಿ ಕಸದ ರಾಶಿ ಮಿತಿ ಮೀರಿ ಸಾರ್ವಜನಿಕರು ಅನುಭವಿಸುತ್ತಿರುವ ತೊಂದರೆ ಹೇಳತೀರದಾಗಿದೆ.

# ಮಕ್ಕಳಿಗೆ ಮೌಲ್ಯಯುತ ಶಿಕ್ಷಣದ ಅನಿವಾರ್ಯತೆ ಇದೆ

## ವಿದ್ಯೆ ಕೆಲಸ ಪಡೆಯಲು ಮಾತ್ರವಲ್ಲದೆ ಬದುಕು ರೂಪಿಸಿಕೊಳ್ಳಲು ಸಹಕಾರಿಯಾಗಬೇಕು: ಕೆ.ಪಿ.ಗಂಗಾಧರ್

• ಪ್ರಜೋದಯ ವರದಿ

**ಹಾಸನ:** ಶಿಕ್ಷಣ ಸಂಸ್ಥೆಗಳು ಹಾಗೂ ಸರ್ಕಾರ ಕೂಡ ಫಲಿತಾಂಶದ ಧಾವಂತದಲ್ಲಿವೆ. ಮಕ್ಕಳಿಗೆ ಮೌಲ್ಯಯುತ ಶಿಕ್ಷಣ ನೀಡುವ ಅನಿವಾರ್ಯತೆ ಇದೆ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಕೆ.ಪಿ. ಗಂಗಾಧರ್ ಹೇಳಿದರು.

ಹಾಸನ ಪದವಿ ಪೂರ್ವ ಕಾಲೇಜುಗಳ ಅರ್ಥಶಾಸ್ತ್ರ ಪ್ರಾಂಶುಪಾಲರು ಮತ್ತು ಉಪನ್ಯಾಸಕರ ವೇದಿಕೆಯಿಂದ ನಗರದ ಎ.ವಿ.ಕೆ. ಪದವಿ ಪೂರ್ವ ಕಾಲೇಜು ಸಭಾಂಗಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಶೈಕ್ಷಣಿಕ ಕಾರ್ಯಾಗಾರ, ಪ್ರತಿಭಾ ಪುರಸ್ಕಾರ ಮತ್ತು ವಿಚಾರ ಸಂಕಿರಣ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯೆ ಕೆಲಸ ಪಡೆಯಲು ಮಾತ್ರವಲ್ಲದೆ ಬದುಕು ರೂಪಿಸಿಕೊಳ್ಳಲು ಸಹಕಾರಿಯಾಗಬೇಕು. ಎಐ ತಂತ್ರಜ್ಞಾನದ ಕಾಲಘಟ್ಟದಲ್ಲಿ ಉದ್ಯೋಗಕ್ಕೆ ಮನುಷ್ಯರೇ ಬೇಡವಾದ ಸನ್ನಿವೇಶ ಇದೆ. ಇಂತಹ ಸಂದರ್ಭದಲ್ಲಿ ವಿದ್ಯೆ ಬದುಕು ರೂಪಿಸಿಕೊಳ್ಳಲು ಸಹಕಾರಿಯಾಗಬೇಕು. ಆ ನಿಟ್ಟಿನಲ್ಲಿ ಶಿಕ್ಷಕರು ಮಕ್ಕಳಿಗೆ ಬೋಧನೆ ಮಾಡಬೇಕೆಂದರು.



ಫಲಿತಾಂಶ ಒಂದನ್ನೇ ಗುರಿಯಾಗಿಸಿಕೊಂಡು ಬೋಧನೆ ಮಾಡುವುದು ಸರಿಯಾದ ಕ್ರಮವಲ್ಲ. ಮಕ್ಕಳಿಗೆ ಮೌಲ್ಯಯುತ ಶಿಕ್ಷಣ ಅನಿವಾರ್ಯವಾಗಿದೆ. ಉಪಯೋಗಕ್ಕೆ ಬಾರದ ಮೂರು, ನಾಲ್ಕು ಡಿಗ್ರಿ ಪಡೆಯುವುದರಿಂದ ದೇಶ ಮುನ್ನಡೆಯುವುದಿಲ್ಲ. ಭಾರತಕ್ಕೆ ಸತ್ವಯುತ ಶಿಕ್ಷಣ ಪಡೆದ ಪ್ರಜೆಗಳು ಬೇಕಾಗಿದ್ದಾರೆ ಎಂದು ಅಭಿಪ್ರಾಯಪಟ್ಟರು.

ಶಾಲೆಗಳಲ್ಲಿ ಮಕ್ಕಳ ಸಂಖ್ಯೆ ಹೆಚ್ಚಿರಬೇಕು. ಆಗ ಬೋಧಕರು ಕೂಡ ಉತ್ಸಾಹದಲ್ಲಿ ಕಲಿಸಲು ಸಹಕಾರಿಯಾಗುತ್ತದೆ. ಶೇ.100 ಫಲಿತಾಂಶದ ಧಾವಂತಕ್ಕೆ ಬಿದ್ದ ಶಾಲೆಗಳೇ ಮಕ್ಕಳನ್ನು ಹುಡುಕಿಕೊಂಡು ಹೋಗುತ್ತಿರುವ ಸನ್ನಿವೇಶ ಉಂಟಾಗಿದೆ. ವಿದ್ಯೆ ಕೆಲಸ ಪಡೆಯಲು ಅಲ್ಲ. ಕೆಲಸವನ್ನು ಯಶಸ್ವಿಗೊಳಿಸಲು, ಜೀವನದ ಮಾರ್ಗ ಸುಗಮಗೊಳಿಸಿಕೊಳ್ಳಲು ಅವಶ್ಯಕವಾಗಿದೆ ಎಂದರಲ್ಲದೆ, ದೊಡ್ಡಮಟ್ಟದ ಬದಲಾವಣೆ ಆಗುವ ಕಾಲಘಟ್ಟದಲ್ಲಿ ಶಿಕ್ಷಣ ಸಂಸ್ಥೆಗಳು ಗುಣಮಟ್ಟದ ಶಿಕ್ಷಣ ನೀಡಲು ವಿಫಲವಾಗುತ್ತಿದ್ದು, ಶಿಕ್ಷಕರು ಈ ನಿಟ್ಟಿನಲ್ಲಿ ಶ್ರಮ ವಹಿಸಬೇಕು ಎಂದು ಸಲಹೆ ನೀಡಿದರು.

ದ್ವಿತೀಯ ಪಿಯುಸಿ ಅರ್ಥಶಾಸ್ತ್ರ ವಿಷಯದಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

ಸಕಲೇಶಪುರ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ವಿ.ಪಿ. ರಮೇಶ್, ಹಾಸನ ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘದ ಅಧ್ಯಕ್ಷ ಎಚ್.ಡಿ. ಸುರೇಶ್, ಪದವಿ ಪೂರ್ವ ಕಾಲೇಜುಗಳ ಅರ್ಥಶಾಸ್ತ್ರ ಪ್ರಾಂಶುಪಾಲರು ಮತ್ತು ಉಪನ್ಯಾಸಕರ ವೇದಿಕೆ ಅಧ್ಯಕ್ಷ ಪ್ರಕಾಶ್, ಎಂ.ಆರ್. ಸಹದೇವ, ಜಸ್ಟಿನಾ ಪ್ಯಾಟ್ರಿಕ್, ವೆಂಕಟೇಶ್, ವೈ.ಪಿ.ಕೀರ್ತಿಕುಮಾರ್, ಎಚ್.ಟಿ. ಸುರೇಶ್, ಎಚ್.ಎಸ್. ಶಕುಂತಲ, ಎಂ.ಎಸ್. ಫರ್ಜಾನಾ ಅಂಜುಂ, ಕಂಬೇಗೌಡ, ಗಿಡ್ಡೆಗೌಡ, ಎಂ.ಆರ್.ಸಹದೇವ ಸೇರಿದಂತೆ ಇನ್ನಿತರರು ಹಾಜರಿದ್ದರು.

# ಭಾರತದಲ್ಲಿ ಬಂಡವಾಳ ದುಪ್ಪಟ್ಟಾಗುತ್ತದೆ: ಮೋದಿ

• ಪ್ರಜೋದಯ ವರದಿ

**ಟೋಕಿಯೋ:** ಭಾರತೀಯ ಮಾರುಕಟ್ಟೆಯಲ್ಲಿ ವಿದೇಶಿ ಕಂಪನಿಗಳ ಹೆಚ್ಚುತ್ತಿರುವ ಹೂಡಿಕೆಯನ್ನು ಒತ್ತಿ ಹೇಳಿದ ಪ್ರಧಾನಿ ನರೇಂದ್ರ ಮೋದಿ, ಭಾರತದಲ್ಲಿ ಬಂಡವಾಳ ಬೆಳೆಯುವುದು ಮಾತ್ರವಲ್ಲ, ಬದಲಾಗಿ ಅದು ದುಪ್ಪಟ್ಟಾಗುತ್ತದೆ ಎಂದು ವಿಶ್ವಾಸದಿಂದ ನುಡಿದಿದ್ದಾರೆ.

ಶುಕ್ರವಾರ ಟೋಕಿಯೊದಲ್ಲಿ ನಡೆದ ಭಾರತ-ಜಪಾನ್ ಆರ್ಥಿಕ ವೇದಿಕೆಯನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, ಭಾರತವನ್ನು ವೇಗವಾಗಿ ಬೆಳೆಯುತ್ತಿರುವ ಪ್ರಮುಖ ಆರ್ಥಿಕತೆಯನ್ನಾಗಿ ಮಾಡಿರುವ ಆರ್ಥಿಕ ಸುಧಾರಣೆಗಳನ್ನು ಎತ್ತಿ ತೋರಿಸಿದರು.

ಜೆಟ್ರೋ (ಜಪಾನ್ ಬಾಹ್ಯ ವ್ಯಾಪಾರ ಸಂಸ್ಥೆ) ಹೇಳುವಂತೆ ಶೇ. 80 ರಷ್ಟು ಕಂಪನಿಗಳು ಭಾರತದಲ್ಲಿ ತಮ್ಮ ನೆಲೆಯನ್ನು ವಿಸ್ತರಿಸಿಕೊಳ್ಳಲು ಬಯಸುತ್ತವೆ. ಶೇ. 75 ರಷ್ಟು ಕಂಪನಿಗಳು ಲಾಭ ಗಳಿಸುತ್ತಿವೆ. ಭಾರತದಲ್ಲಿ, ಬಂಡವಾಳವು ಕೇವಲ ಬೆಳೆಯುವುದಿಲ್ಲ, ಅದು ದುಪ್ಪಟ್ಟಾಗುತ್ತದೆ ಎಂದರು.

ಭಾರತದ ರಾಜಕೀಯ ಮತ್ತು ಆರ್ಥಿಕ ಸ್ಥಿರತೆಯನ್ನು ಬಿಂಬಿಸಿ ಮಾತನಾಡಿದ ಮೋದಿ, ದೇಶವು ಶೀಘ್ರದಲ್ಲೇ ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯಾಗಲಿದೆ ಎಂದರು.



ಕಳೆದ 11 ವರ್ಷಗಳಲ್ಲಿ ಭಾರತದ ಪರಿವರ್ತನೆಯ ಬಗ್ಗೆ ನಿಮಗೆಲ್ಲರಿಗೂ ತಿಳಿದಿದೆ. ಇಂದು, ಭಾರತವು ರಾಜಕೀಯ ಮತ್ತು ಆರ್ಥಿಕ ಸ್ಥಿರತೆಯನ್ನು ಹೊಂದಿದೆ. ನೀತಿಯಲ್ಲಿ ಪಾರದರ್ಶಕತೆ ಮತ್ತು ಮುನ್ಸೂಚನೆ ಇದೆ. ಭಾರತವು ವೇಗವಾಗಿ ಬೆಳೆಯುತ್ತಿರುವ ಪ್ರಮುಖ ಆರ್ಥಿಕತೆಯಾಗಿದ್ದು, ಶೀಘ್ರದಲ್ಲೇ ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯಾಗಲಿದೆ. ಭಾರತವು ಬಲವಾದ ಬ್ಯಾಂಕಿಂಗ್ ವಲಯ, ಕಡಿಮೆ ಹಣದುಬ್ಬರ ಮತ್ತು ಕಡಿಮೆ ಬಡ್ಡಿದರಗಳನ್ನು ಹೊಂದಿದೆ. ಸುಮಾರು 700 ಬಿಲಿಯನ್ ಯುಎಸ್ ಡಾಲರ್ ವಿದೇಶೀ ವಿನಿಮಯ ಮೀಸಲು ಭಾರತದಲ್ಲಿದೆ ಎಂದರು.

ಸುಧಾರಣೆ, ಕಾರ್ಯಕ್ಷಮತೆ ಮತ್ತು ರೂಪಾಂತರ ಎಂಬ ಭಾರತದ ವಿಧಾನವು ಈ ಅಭಿವೃದ್ಧಿಯ ಹಿಂದೆ ಇದೆ. ಜಿಎಸ್ಟಿ ಮತ್ತು ವ್ಯವಹಾರ ಮಾಡುವ ಸಲಭ ವಿಧಾನ ಸುಧಾರಣೆಗಳಂತಹ ಪ್ರಮುಖ ಯೋಜನೆಗಳನ್ನು ಎತ್ತಿ ತೋರಿಸಿದರು.

2017 ರಲ್ಲಿ, ನಾವು ಒಂದು ರಾಷ್ಟ್ರ ಒಂದು ತೆರಿಗೆಯನ್ನು ಪ್ರಾರಂಭಿಸಿದೆವು. ಈಗ ನಾವು ಇದಕ್ಕೆ ಹೊಸ ಸುಧಾರಣೆಗಳನ್ನು ತರುತ್ತಿದ್ದೇವೆ. ವ್ಯಾಪಾರ ಮಾಡುವ ಸುಲಭತೆಗೆ ನಾವು ಪ್ರಾಮುಖ್ಯತೆಯನ್ನು ನೀಡಿದ್ದೇವೆ. ನಾವು ವ್ಯವಹಾರಗಳಿಗೆ ಏಕ-ಗವಾಕ್ಷಿ ಅನುಮೋದನೆಯನ್ನು ನೀಡಿದ್ದೇವೆ ಎಂದರು.

ಜಪಾನ್ ಯಾವಾಗಲೂ ಭಾರತದ ಅಭಿವೃದ್ಧಿ ಪ್ರಯಾಣದ ಭಾಗವಾಗಿದೆ, ಭಾರತದಲ್ಲಿ ಜಪಾನಿಯರ ಹೂಡಿಕೆ ಹೆಚ್ಚಾಗುತ್ತಿದೆ. ಇದರಿಂದ ಎರಡೂ ದೇಶಗಳ ನಡುವಿನ ಬಾಂಧವ್ಯವೂ ಉತ್ತಮಗೊಳ್ಳುತ್ತದೆ ಎಂದರು.

# ಶ್ರೀ ಮಂಜುನಾಥನ ಭಕ್ತರು ಶಾಂತತೆ ಕಾಪಾಡಿ: ಹೆಗ್ಗಡೆ

• ಪ್ರಜೋದಯ ವರದಿ

**ಮಂಗಳೂರು:** ಧರ್ಮಸ್ಥಳದ ಬೆಳವಣಿಗೆಯಿಂದ ಪುರುಷರಿಗಿಂತ, ಮಹಿಳೆಯರೇ ಹೆಚ್ಚಾಗಿ ಕಣ್ಣೀರಿಟ್ಟಿದ್ದಾರೆ, ವೇದನೆ ಪಡುತ್ತಿದ್ದಾರೆ. ಕೆಲ ಹೆಣ್ಣು ಮಕ್ಕಳು ಯಾವುದೇ ರೀತಿಯ ಹೋರಾಟಕ್ಕೆ, ಪ್ರತಿಭಟನೆಗೂ ತಯಾರಿದ್ದಾರೆ. ಆದ್ರೆ ಅಂತಹ ಹೋರಾಟ ಅಗತ್ಯವಿಲ್ಲ. ಎಲ್ಲವೂ ಮಂಜುನಾಥಸ್ವಾಮಿಗೆ ಬಿಟ್ಟಿದ್ದೇವೆ. ಸತ್ಯ ಬಿಟ್ಟು ನಾನು ಯಾವತ್ತೂ ಹೋಗಿಲ್ಲ. ಹೋಗುವುದೂ ಇಲ್ಲ, ಎಲ್ಲರೂ ಶಾಂತತೆಯನ್ನು ಕಾಪಾಡಬೇಕು. ತಾಳ್ಮೆಯಿಂದ ಇರಬೇಕು ಎಂದು ಧರ್ಮಸ್ಥಳದ ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹೆಗ್ಗಡೆ ಮನವಿ ಮಾಡಿದ್ದಾರೆ.

ಧರ್ಮಸ್ಥಳ ಅಪಪ್ರಚಾರ ಖಂಡಿಸಿ ಶುಕ್ರವಾರ ನಡೆದ ಜೈನ ಮುನಿಗಳ



ಕಾರ್ಯಕ್ರಮ ನಡೆಸಿದ್ದು, ಇದರಲ್ಲಿ ರಾಜ್ಯದ ಎಲ್ಲಾ ಜೈನ ಮಠಗಳ ಭಟ್ಟಾರಕರು ಪಾಲ್ಗೊಂಡಿದ್ದರು. ಅಲ್ಲದೇ ವಿವಿಧ ಜೈನ ಸಂಘ ಸಂಸ್ಥೆಗಳಿಂದ ನೂರಾರು ಜನ ಭಾಗಿಯಾಗಿದ್ದರು. ಇದಕ್ಕೂ ಮುನ್ನ ಧರ್ಮಸ್ಥಳ ಪ್ರವೇಶದ್ವಾರದಿಂದ ದೇಗುಲದ ವರೆಗೆ ಪಾದಯಾತ್ರೆ ನಡೆಸಿದರು.

ಬಳಿಕ ಧರ್ಮಸ್ಥಳದ ಅಮೃತವರ್ಷಿಣಿ ಸಭಾಂಗಣದಲ್ಲಿ ಜೈನ ಸಮುದಾಯದ ಮುನಿಗಳು, ಜೈನ ಮಠಗಳ ಭಟ್ಟಾರಕರ ನೇತೃತ್ವದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಿತು. ಈ ವೇಳೆ ಮಾತನಾಡಿದ ಡಾ.ಡಿ. ವೀರೇಂದ್ರ ಹೆಗ್ಗಡೆ, ಇಂದು ಶ್ರೀ ಕ್ಷೇತ್ರಕ್ಕೆ ಬಹಳ ವಿಶೇಷವಾದ ಕಳೆ ಬಂದಿದೆ. ಇಷ್ಟೊಂದು ಆಶಯಧಾರಿಗಳು, ಆಶೀರ್ವಚನ ನೀಡುತ್ತಿರೋದು ತುಂಬಾ ದೊಡ್ಡದು. ಇಷ್ಟೊಂದು ಸಂಖ್ಯೆಯಲ್ಲಿ ಕ್ಷೇತ್ರಕ್ಕೆ ಬಂದಿರೋದು ಸಂತಸ ತಂದಿದೆ. ಇಂದು ಮೂಡಬಿದ್ರೆ ಭಟ್ಟಾರಕರ ಪಟ್ಟಾಭೀಷೇಕದ ದಿನ, ಅವರು ಕೂಡ ನಿಮ್ಮೊಂದಿಗಿದ್ದೇವೆ ಎಂಬ ಸಂದೇಶ ಕೊಟ್ಟಿದ್ದಾರೆ ಇದಕ್ಕಿಂತ ದೊಡ್ಡ ಮಾತು ನನಗೆ ಬೇಡ ಎಂದರು.

ಎಸ್ಐಟಿ ತನಿಖೆ ನಡೆಯುತ್ತಿರುವುದರಿಂದ ಹೆಚ್ಚು ಮಾತನಾಡಬಾರದು ಎಂಬ ಆದೇಶ ಆಗಿದೆ. ಆದ್ರೆ ಭಕ್ತರೊಬ್ಬರು ನನಗೆ ಹೇಳುತ್ತಿದ್ದರು, ಈ ಬೆಳವಣಿಗೆ ಆದಾಗಿನಿಂದ ಪುರುಷರಿಗಿಂತ ಮಹಿಳೆಯರು ಹೆಚ್ಚು ಕಣ್ಣೀರು ಹಾಕಿದ್ದಾರೆ. ವೇದನೆ ಪಡುತ್ತಿದ್ದಾರೆ ಎಂದು ದುಃಖ ವ್ಯಕ್ತಪಡಿಸಿದರು.

# ಅರಿವು ಕಾರ್ಯಾಗಾರ

• ಪ್ರಜೋದಯ ವರದಿ

**ಹಾಸನ:** ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ವತಿಯಿಂದ 2025-26 ನೇ ಸಾಲಿಗೆ ರ್‍ಯಾಂಪ್ ಯೋಜನೆಯಡಿ ಹಾಸನ ಜಿಲ್ಲೆಯಲ್ಲಿ ಉದ್ಯಮ ನೊಂದಣಿ ಪಡೆದಿರುವ ನೊಂದಾಯಿತ ಕೈಗಾರಿಕೋದ್ಯಮಿಗಳಿಗೆ USB ಯೋಜನೆಯ ಬಗ್ಗೆ ಅರಿವು ಮೂಡಿಸಲು ಒಂದು ದಿನದ ಕಾರ್ಯಾಗಾರವನ್ನು ಏರ್ಪಡಿಸಲು ಉದ್ದೇಶಿಸಿದ್ದು, ಜಂಟಿ ನಿರ್ದೇಶಕರ ಕಚೇರಿ, ಡೈರಿ ಸರ್ಕಲ್, ಬಿ.ಎಂ.ರಸ್ತೆ, ಹಾಸನ ಕಚೇರಿಯಲ್ಲಿ ಸೆ.4 ರೊಳಗೆ ನೊಂದಾಯಿಸಿಕೊಳ್ಳಲು ಕೋರಲಾಗಿದೆ.

ನೊಂದಣಿ ಮಾಡಿಸಲು ಆಧಾರ್ ಕಾರ್ಡ್, ಉದ್ಯಮ್ ರಿಜಿಸ್ಟ್ರೇಷನ್ ಪ್ರತಿಯ ದಾಖಲಾತಿಗಳನ್ನು ತರಲು ಕೋರಿದೆ. ಮಾಹಿತಿಗಾಗಿ 08172-240606 ನ್ನು ಸಂಪರ್ಕಿಸಬಹುದು.

# ಒಲಿಂಪಿಕ್ಸ್ ಪದಕ ಗೆದ್ದರೆ 5 ಕೋಟಿ ರೂ. ನಗದು: ಸಿಎಂ

## ರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ ಪದಕ ವಿಜೇತರಿಗೆ ಬಹುಮಾನದ ಮೊತ್ತ ಹೆಚ್ಚಳ

• ಪ್ರಜೋದಯ ವರದಿ

**ಬೆಂಗಳೂರು:** ಕ್ರೀಡಾಕೂಟಗಳ ಪದಕ ವಿಜೇತರಿಗೆ ನಗದು ಪುರಸ್ಕಾರವನ್ನು ಹೆಚ್ಚಿಸಿ, ಚಿನ್ನ ಪದಕ ವಿಜೇತರಿಗೆ 7 ಲಕ್ಷ ರೂ, ಬೆಳ್ಳಿ ಪದಕ ವಿಜೇತರಿಗೆ 5 ಲಕ್ಷ ರೂ. ಹಾಗೂ ಕಂಚಿನ ಪದಕ ವಿಜೇತರಿಗೆ 3 ಲಕ್ಷ ರೂ. ನೀಡಲು ಸರ್ಕಾರ ತೀರ್ಮಾನಿಸಿದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ.

ರಾಷ್ಟ್ರೀಯ ಕ್ರೀಡಾ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, 38ನೇ ರಾಷ್ಟ್ರೀಯ ಕ್ರೀಡಾಕೂಟದಲ್ಲಿ ಪದಕ ವಿಜೇತ ಕ್ರೀಡಾಪಟುಗಳಿಗೆ ನಗದು ಪುರಸ್ಕಾರವನ್ನು ಹೆಚ್ಚಿಸುವುದಾಗಿ ಘೋಷಿಸಿದ್ದು, ಚಿನ್ನ ಗೆದ್ದವರಿಗೆ 7 ಲಕ್ಷ ರೂ., ಬೆಳ್ಳಿ ಪದಕಕ್ಕೆ 5 ಲಕ್ಷ ರೂ. ಮತ್ತು ಕಂಚು ಪದಕಕ್ಕೆ 3 ಲಕ್ಷ ರೂ. ನೀಡಲಾಗುವುದು. ಜೊತೆಗೆ, ನಮ್ಮ ರಾಜ್ಯದವರು ಒಲಿಂಪಿಕ್ಸ್‌ನಲ್ಲಿ ಪದಕ ಗೆದ್ದರೆ 5 ಕೋಟಿ ರೂ. ನಗದು ಕೊಡಲಾಗುವುದು ಎಂದು ಘೋಷಿಸಿದ್ದಾರೆ.



ಉತ್ತರಾಖಂಡದಲ್ಲಿ ನಡೆದ ರಾಷ್ಟ್ರೀಯ ಕ್ರೀಡಾಕೂಟದಲ್ಲಿ ಕರ್ನಾಟಕದ ಕ್ರೀಡಾಪಟುಗಳು ರಾಜ್ಯಕ್ಕೆ 5ನೇ ಸ್ಥಾನವನ್ನು ದೊರಕಿಸಿಕೊಟ್ಟಿದ್ದು, ರಾಜ್ಯಕ್ಕೆ ಕೀರ್ತಿ ತಂದಿದ್ದಾರೆ. ಕ್ರೀಡಾಕೂಟದಲ್ಲಿ ರಾಜ್ಯದ ಕ್ರೀಡಾಪಟುಗಳು 34 ಚಿನ್ನ, 18 ಬೆಳ್ಳಿ ಹಾಗೂ 28 ಕಂಚಿನ ಪದಕಗಳನ್ನು ಗೆದ್ದಿರುವುದು ನಮಗೆಲ್ಲ ಹೆಮ್ಮೆಯ ವಿಷಯ. ಕ್ರೀಡಾಕೂಟದಲ್ಲಿ ಭಾಗವಹಿಸಿದ ಎಲ್ಲರಿಗೂ ಅಭಿನಂದನೆಗಳು ಎಂದ ಅವರು, ಮುಂದಿನ ಕ್ರೀಡಾಕೂಟದಲ್ಲಿ ರಾಜ್ಯಕ್ಕೆ ಮೊದಲನೇ ಸ್ಥಾನ ದೊರಕಲೆಂದು ಹಾರೈಸಿದರು.

2015 ರಲ್ಲಿ ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಚಿನ್ನದ ಪದಕ ಗೆದ್ದ ವಿಜೇತರಿಗೆ 5 ಲಕ್ಷ, ಬೆಳ್ಳಿ ಪದಕ ಪಡೆದವರಿಗೆ 3 ಲಕ್ಷ ಹಾಗೂ ಕಂಚಿನ ಪದಕ ಗೆದ್ದವರಿಗೆ 2 ಲಕ್ಷ ರೂ. ನೀಡುವುದಾಗಿ ತಿಳಿಸಲಾಗಿತ್ತು, ನಮ್ಮ ಸರ್ಕಾರ ಈ ಘೋಷಣೆಯನ್ನು ಜಾರಿಗೆ ತಂದಿದೆ. ಕರ್ನಾಟಕ ಒಲಂಪಿಕ್ಸ್ ಸಂಸ್ಥೆಯವರು ಪದಕ ವಿಜೇತರಿಗೆ ನೀಡಲಾಗುವ ನಗದು ಪುರಸ್ಕಾರವನ್ನು ಹೆಚ್ಚಿಸಬೇಕೆಂದು ಕೋರಿದ್ದರು. ಅದರಂತೆ ಮನವಿಯನ್ನು ಪುರಸ್ಕರಿಸಿ, ಗೆದ್ದ ಪ್ರತಿಯೊಬ್ಬ ಪದಕ ವಿಜೇತರಿಗೂ ನಗದು ಪುರಸ್ಕಾರವನ್ನು ನೀಡಲು ತೀರ್ಮಾನಿಸಿದ್ದೇನೆ.

ಕ್ರೀಡಾಪಟುಗಳು ಪದಕ ಗೆಲ್ಲಲು ಸಹಕರಿಸುವ ಮ್ಯಾನೇಜರ್ ಹಾಗೂ ತರಬೇತುದಾರರಿಗೂ ನಗದು ಪುರಸ್ಕಾರವನ್ನು ನೀಡಲಾಗುವುದು ಎಂದು ಮುಖ್ಯಮಂತ್ರಿಗಳು ತಿಳಿಸಿದರು.

# ಗಣೇಶ, ಈದ್‌ಮಿಲಾದ್ ಹಬ್ಬ: ನಿಯಮ ಉಲ್ಲಂಘಿಸಿದರೆ ಕ್ರಮ

• ಪ್ರಜೋದಯ ವರದಿ

**ಬೇಲೂರು:** ಈಗಾಗಲೇ ಗೌರಿ- ಗಣೇಶ ಹಬ್ಬದ ಪ್ರಯುಕ್ತ ಗಣೇಶ ವಿಸರ್ಜನೆ ಮಹೋತ್ಸವ ನಡೆಯುತ್ತಿದ್ದು, ಸೆ.5 ರಂದು ಮುಸಲ್ಮಾನರ ಈದ್ ಮಿಲಾದ್ ಹಬ್ಬವಿರುವ ಕಾರಣ ಪೊಲೀಸ್ ಇಲಾಖೆ ಅಗತ್ಯ ಮುನ್ನೆಚ್ಚರಿಕೆ ವಹಿಸಬೇಕು. ಸಾರ್ವಜನಿಕರು ನೀತಿ, ನಿಯಮಗಳನ್ನು ಉಲ್ಲಂಘನೆ ಮಾಡಿದರೆ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತಾ ಅವರು ಎಚ್ಚರಿಕೆ ನೀಡಿದರು.

ಪಟ್ಟಣದ ಹೊರ ವಲಯದಲ್ಲಿ ಭರತ್ ಕನ್ವೆನ್ಷನ್ ಸಭಾಂಗಣದಲ್ಲಿ ಈದ್ ಮಿಲಾದ್ ಹಬ್ಬದ ಪ್ರಯುಕ್ತ ಬೇಲೂರು ಪೊಲೀಸ್ ಠಾಣೆ ವತಿಯಿಂದ ಕರೆಯಲಾದ ಸಭೆಯಲ್ಲಿ ಮಾತನಾಡಿದ ಅವರು, ಸೆಪ್ಟಂಬರ್ 5 ರಂದು ಈದ್ ಮಿಲಾದ್ ಹಬ್ಬವಿದೆ ಶಾಂತಿ ಮತ್ತು ಸಾಮರಸ್ಯವನ್ನು ಪ್ರತಿಯೊಬ್ಬರು ಕೂಡ




ಬಯಸುತ್ತಾರೆ. ಚಿಕ್ಕ ಮಕ್ಕಳಿಗೆ ದೊಡ್ಡ ಬಾವುಟಗಳನ್ನು ಕೊಡುವುದು ಮತ್ತು ಇನ್ನಿತರ ಪ್ರಚೋದನಕಾರಿ ಹೇಳಿಕೆಯನ್ನು ನೀಡುವುದು ಅಕ್ಷಮ್ಯವಾಗಿದೆ. ಈ ಬಗ್ಗೆ ಪೊಲೀಸ್ ಇಲಾಖೆ ಅತ್ಯಂತ ಜಾಗರೂಕತೆಯಿಂದ ಕೆಲಸ ಮಾಡುತ್ತಿರುವ ಹಿನ್ನೆಲೆಯಲ್ಲಿ ಆಯೋಜಕರುಗಳು ಪ್ರಚೋದನಾಕಾರಿ ಹೇಳಿಕೆಗೆ ಅವಕಾಶ ನೀಡಬಾರದು ಎಂದರು.

ಸ್ಥಳೀಯರಲ್ಲದೆ ಹೊರಗಿನಿಂದ ಬಂದು ಇಲ್ಲಿನ ಸಾಮರಸ್ಯವನ್ನು ಕೆಡಿಸುವಂತಹ ವ್ಯಕ್ತಿಗಳ ವಿರುದ್ಧ ಪೊಲೀಸ ಇಲಾಖೆ ಕಠಿಣ ಕ್ರಮವನ್ನು ಕೈಗೊಳ್ಳುತ್ತದೆ ಎಂದ ಅವರು, ಬೇಲೂರು ತಾಲ್ಲೂಕಿನಲ್ಲಿ ಈ ಹಿಂದಿನಿಂದಲೂ ಪ್ರತಿಯೊಂದು ಹಬ್ಬಗಳು ಸಾಮರಸ್ಯದಿಂದ ನಡೆಯುತ್ತಿರುವುದು ನಿಜಕ್ಕೂ ಸಂತೋಷದ ವಿಚಾರ. ವಿಶೇಷವಾಗಿ ನಾನು ಹಾಸನದಲ್ಲಿ ಎಸ್ಪಿ ಆಗಿ ಅಧಿಕಾರ ವಹಿಸಿಕೊಂಡ ದಿನಗಳಿಂದಲೂ ಕೂಡ ಬೇಲೂರಿನಲ್ಲಿ ನಡೆಯುವಂತಹ ದೊಡ್ಡ ದೊಡ್ಡ ಕಾರ್ಯಕ್ರಮಗಳು ಕೂಡ ಯಾವುದೇ ಅವಘಡಗಳು ಸಂಭವಿಸದೆ ಅತ್ಯಂತ ಸೌಹಾರ್ದತೆಯಿಂದ ನಡೆದಿದೆ. ಈ ಹಿನ್ನೆಲೆಯಲ್ಲಿ ಮುಂದಿನ ದಿನಗಳಲ್ಲಿ ನಡೆಯುವಂತಹ ಕಾರ್ಯಕ್ರಮಗಳು ಕೂಡ ಸುಸೂತ್ರವಾಗಿ ನಡೆಯಲಿ ಎಂಬುದು ನಮ್ಮ ಆಶಯವಾಗಿದೆ ಎಂದರು.

ಅರಸೀಕೆರೆ ಡಿವೈಎಸ್ಪಿ ಗೋಪಿ ಮಾತನಾಡಿ, ಈಗಾಗಲೇ ಗಣೇಶ ವಿಸರ್ಜನ ಮಹೋತ್ಸವ ನಡೆಯುತ್ತಿದ್ದು, ಪೊಲೀಸ್ ಇಲಾಖೆ ನೀಡಿದ ಮುನ್ಸೂಚನೆಗಳಂತೆ ಆಯೋಜಕರು ಗಣೇಶ ವಿಸರ್ಜನೆ ನಡೆಸಬೇಕು. ವಿಶೇಷವಾಗಿ ಸೆ.5 ರಂದು ಈದ್ ಮಿಲಾದ್ ಹಬ್ಬ ಇರುವ ಕಾರಣದಿಂದ ಪಟ್ಟಣದಲ್ಲಿ ಸಂಪೂರ್ಣ ಗಣೇಶ ವಿಸರ್ಜನೆಯನ್ನು ಮುಂದೂಡಬೇಕು. ಕಾರಣ ಪೊಲೀಸ್ ಬಂದೋಬಸ್ ಎಲ್ಲರಿಗೂ ಕೂಡ ಅಗತ್ಯವಾಗಿ ನೀಡಬೇಕಿದೆ. ಈ ಬಗ್ಗೆ ಸಾರ್ವಜನಿಕರು ಸಹಕಾರವನ್ನು ನೀಡಬೇಕು. ಸಾಮಾಜಿಕ ಜಾಲತಾಣದಲ್ಲಿ ಹೇಳಿಕೆಗಳಿಗೆ ಪ್ರತ್ಯುತ್ತರ ಅಥವಾ ಪೋಸ್ಟ್ ಮಾಡುವುದನ್ನು ಮೊದಲು ಯುವಕರು ಕೈಬಿಡಬೇಕು. ಇಲ್ಲವಾದರೆ ಸೈಬರ್ ಅಪರಾಧದ ಹಿನ್ನೆಲೆಯಲ್ಲಿ ಪ್ರಕರಣವನ್ನು ದಾಖಲಿಸಲಾಗುತ್ತದೆ ಮತ್ತು ಡಿಜೆ ಸೌಂಡ್ ಸಂಪೂರ್ಣ ನಿಷೇಧ ಇರುವುದರಿಂದ ಸಾರ್ವಜನಿಕರು ಮುನ್ನೆಚ್ಚರಿಕೆ ವಹಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಬೇಲೂರು ವೃತ್ತ ಅರಕ್ಷಕ ನಿರೀಕ್ಷಕ ರೇವಣ್ಣ, ಅರಕ್ಷಕ ಉಪ ನಿರೀಕ್ಷಕ ಶಿವಾನಂದ ಪಾಟೀಲ್, ಜಿಲ್ಲಾ ಪಂಚಾಯತಿ ಮಾಜಿ ಸದಸ್ಯ ಸೈಯದ್ ತೌಫಿಕ್, ಪುರಸಭಾ ಸದಸ್ಯ ಜಮಾಲ್ಲುದ್ದಿನ್, ಕರವೇ ಅಧ್ಯಕ್ಷ ಚಂದ್ರಶೇಖರ, ಲಕ್ಷ್ಮೀಪುರ ವೀರಾಜಂನೇಯ ಸ್ವಾಮಿ ದೇಗುಲ ಅಧ್ಯಕ್ಷ ಮೋಹನ್ ಕುಮಾರ್, ಮಸೀದಿ ಮುಖ್ಯಸ್ಥರು ಹಾಗೂ ವಿವಿಧ ಸಂಘಟನೆಗಳ ಮುಖಂಡರು ಮತ್ತು ಪದಾಧಿಕಾರಿಗಳು ಹಾಜರಿದ್ದರು.

# ವಿಕಲಚೇತನರಿಂದ ರಾಜ್ಯ ಪ್ರಶಸ್ತಿಗೆ ಅರ್ಜಿ ಆಹ್ವಾನ



• ಪ್ರಜೋದಯ ವರದಿ

**ಹಾಸನ:** ಡಿಸೆಂಬರ್ 3 ರಂದು ವಿಶ್ವ ವಿಕಲಚೇತನರ ದಿನಾಚರಣೆಯನ್ನು ರಾಜ್ಯಮಟ್ಟದಲ್ಲಿ ಆಚರಿಸುವ ಸಂಬಂಧವಾಗಿ, ವಿಕಲಚೇತನರ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದ ಸಂಸ್ಥೆಗಳಿಗೆ, ವಿಶೇಷ ಶಿಕ್ಷಕರಿಗೆ ಮತ್ತು ವೈಯಕ್ತಿಕ ವಿಭಾಗದಡಿ ರಾಜ್ಯ ಪ್ರಶಸ್ತಿಗಾಗಿ ಅರ್ಜಿಗಳನ್ನು ಸಲ್ಲಿಸಲು ಅವಕಾಶವಿದ್ದು, ವಿಕಲಚೇತನರ ವಿವಿಧ ಕ್ಷೇತ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳು, ವಿಶೇಷ ಶಿಕ್ಷಕರು ಮತ್ತು ವೈಯಕ್ತಿಕ ವಿಭಾಗದಡಿ ಸಾಧನೆಗೈದ ವಿಕಲಚೇತನರು ಅ.10 ರೊಳಗೆ ತಮ್ಮ ಸಾಧನೆಯ ದಾಖಲಾತಿಗಳೊಂದಿಗೆ ನಿಗಧಿತ ಅರ್ಜಿಯೊಂದಿಗೆ ಪ್ರಸ್ತಾವನೆಯನ್ನು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿ ಕಾರಿಗಳು, ಹಾಸನ ಇವರಿಗೆ ಸಲ್ಲಿಸುವುದು.

ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, 9ನೇ ಕ್ರಾಸ್, ಶಂಕರಮಠ ರಸ್ತೆ, ಕೆ.ಆರ್.ಪುರಂ, ಹಾಸನ ದೂ. ಸಂ. 08172-295546 ಅವರನ್ನು ಸಂಪರ್ಕಿಸುವಂತೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಗರದಲ್ಲಿ ನಾಳೆ ಸಾಹಿತ್ಯ ಸಡಗರ

• ಪ್ರಜೋದಯ ವರದಿ

**ಹಾಸನ:** ನಗರದ ಕನ್ನಡ ಸಾಹಿತ್ಯ ಪರಿಷತ್ ಸಭಾಂಗಣದಲ್ಲಿ ಆ.31 ರಂದು ಬೆಳಿಗ್ಗೆ 9-30 ಕ್ಕೆ ಸಾಹಿತ್ಯ ಸಾಂಸ್ಕೃತಿಕ ಸಡಗರ ಕಾರ್ಯಕ್ರಮ ನಡೆಯಲಿದೆ. ಎಚ್.ಜ್ವಾಲನಯ್ಯ ಸ್ಮರಣಾರ್ಥ ಕೃತಿ ಬಿಡುಗಡೆ, ಕಾವ್ಯಗಾನ, ಕಲಾ ಕುಂಚ, ಭರತನಾಟ್ಯ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಆಯೋಜನೆಯಾಗಿದ್ದು, ಸಾಧಕರಿಗೆ ರಾಜ್ಯಮಟ್ಟದ ಸನ್ಮಾನ ಕಾರ್ಯಕ್ರಮವೂ ನಡೆಯಲಿದೆ.

ಸಕಲೇಶಪುರದ ಬರಹಗಾರ ವಿಶ್ವಾಸ್. ಡಿ.ಗೌಡರ ಆರನೇ ಕೃತಿ ಭಾವನೆಗಳ ಪ್ರತಿರೂಪವನ್ನು ಬಿಡುಗಡೆ ಮಾಡಲಾಗುತ್ತದೆ. ಕಾರ್ಯಕ್ರಮವು ಡಿಆರ್‌ಓ ಬೆಂಗಳೂರು ಸಂಸ್ಥೆಯ ಹಿರಿಯ ವಿಜ್ಞಾನಿ ಶ್ರೀ ಸ್ವಾಮಿ ನಾಯಕ್ ರವರ ಅಧ್ಯಕ್ಷತೆಯಲ್ಲಿ ನಡೆಯಲಿದೆ ಎಂದು ಬರಹಗಾರರ ಸಂಘ ಹಾಸನ ಜಿಲ್ಲಾ ಘಟಕದ ಅಧ್ಯಕ್ಷ ಸುಂದರೇಶ್.ಡಿ. ಉಡುವಾರೆ ಅವರು ತಿಳಿಸಿದ್ದಾರೆ.

# ಸ್ವಚ್ಛತೆ ಕಾಪಾಡದಿದ್ದರೆ ದಂಡ

• ಪ್ರಜೋದಯ ವರದಿ

**ಹಾಸನ:** ಡೆಂಗಿಜ್ವರವನ್ನು ಸಾಂಕ್ರಾಮಿಕ ರೋಗ ಕಾಯ್ದೆಯ ವ್ಯಾಪ್ತಿಗೆ ಒಳಪಡಿಸಲಾಗಿದ್ದು, ಡೆಂಗಿಜ್ವರ ಹರಡುವ ಈಡೀಸ್ ಸೊಳ್ಳೆಗಳ ಲಾರ್ವಾಉತ್ಪತ್ತಿ ತಾಣಗಳನ್ನು ನಾಶ ಪಡಿಸದೇ ನಿರ್ಲಕ್ಷ್ಯ ವಹಿಸಿ ಡೆಂಗೀಜ್ವರ ಹರಡಲು ಕಾರಣವಾಗುವವರಿಗೆ ಈ ಕೆಳಕಂಡಂತೆ ದಂಡವನ್ನು ವಿಧಿಸಲಾಗುವುದು.

ಸೊಳ್ಳೆಗಳ ಸಂತಾನೋತ್ಪತ್ತಿ ಕಂಡು ಬಂದ ಮನೆಗಳಿಗೆ ನಗರ ಪ್ರದೇಶದಲ್ಲಿ ರೂ.800 ಹಾಗೂ ಗ್ರಾಮಾಂತರ ಪ್ರದೇಶಗಳಲ್ಲಿ ರೂ.400, ಸೊಳ್ಳೆಗಳ ಸಂತಾನೋತ್ಪತ್ತಿ ಕಂಡು ಬಂದ ವಾಣಿಜ್ಯ ಸಂಸ್ಥೆಗಳು, ಕಚೇರಿಗಳು, ಶಾಲಾ-ಕಾಲೇಜುಗಳು, ಹೋಟೆಲ್‌ಗಳು, ಲಾಡ್ಜ್‌ಗಳು, ರೆಸಾರ್ಟ್-ಹೋಂ ಸ್ಟೇಗಳು, ಮಾಲ್‌ಗಳು, ಸಣ್ಣ ಅಂಗಡಿಗಳು, ಸೂಪರ್ ಮಾರ್ಕೆಟ್‌ಗಳು, ಎಳನೀರು ವ್ಯಾಪಾರಿಗಳು, ಕಾರ್ಖಾನೆಗಳು, ಕೈಗಾರಿಕೆಗಳು, ಪಂಚರ್ ಶಾಪ್‌ಗಳು, ಪ್ಲಾಂಟ್



ನರ್ಸರಿಗಳು, ಸಿನಿಮಾ ಥಿಯೇಟರ್‌ಗಳು, ಸಭಾಂಗಣಗಳು, ಇತ್ಯಾದಿಗಳಲ್ಲಿ.

ನಗರ ಪ್ರದೇಶಗಳಲ್ಲಿ ರೂ. 2000 ಹಾಗೂ ಗ್ರಾಮಾಂತರ ಪ್ರದೇಶಗಳಲ್ಲಿ ರೂ. 1000 ನಿರ್ಮಾಣ ಕಾರ್ಯ ಪ್ರಗತಿಯಲ್ಲಿರುವ ನಿವೇಶನಗಳು, ಪಾಳುಬಿದ್ದ ನಿರ್ಮಾಣಗಳ ನಿವೇಶನಗಳು, ಖಾಲಿ ನಿವೇಶನಗಳು, ಬಯಲು ಜಮೀನುಗಳು ಇತ್ಯಾದಿಗಳಲ್ಲಿ ನಗರ ಪ್ರದೇಶಗಳಲ್ಲಿ ರೂ. 4000 ಹಾಗೂ ಗ್ರಾಮಾಂತರ ಪ್ರದೇಶಗಳಲ್ಲಿ ರೂ. 2000 ದಂಡವನ್ನು ವಿಧಿಸಲಾಗುವುದು ಎಂದು ಜಿಲ್ಲಾ ಆರೋಗ್ಯ ಮತ್ತುಕುಟುಂಬ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

# ಜಾತಿ, ಮತ, ಪಂಥಗಳ ಎಲ್ಲೆ ಮೀರಿದ ಸಮಾಜ ನಮ್ಮದು

• ಪ್ರಜೋದಯ ವರದಿ

**ಹಾಸನ:** ಗೌರಿ-ಗಣೇಶ ಹಬ್ಬದ ಅಂಗವಾಗಿ ಜನಪ್ರಿಯ ಆಸ್ಪತ್ರೆ ಆವರಣದಲ್ಲಿ ಜನಪ್ರಿಯ ಗೆಳೆಯರ ಬಳಗದ ವತಿಯಿಂದ ಹತ್ತನೇ ವರ್ಷದ ಸೌಹಾರ್ದ ಗಣಪತಿಯನ್ನು ಪ್ರತಿಷ್ಠಾಪನೆ ಮಾಡಿ ಅದ್ದೂರಿಯಾಗಿ ವಿಸರ್ಜನೆ ಮಾಡಲಾಯಿತು. ಇದರ ಅಂಗವಾಗಿ 700ಕ್ಕೂ ಹೆಚ್ಚು ಸಾರ್ವಜನಿಕರಿಗೆ ಪ್ರಸಾದದ ರೂಪದಲ್ಲಿ ಅನ್ನ ಸಂತರ್ಪಣೆ ಕಾರ್ಯಕ್ರಮ ನಡೆಯಿತು.

ಸಂಸದ ಶ್ರೇಯಸ್ ಎಂ ಪಟೇಲ್ ಅವರು ಅನ್ನಸಂತರ್ಪಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಜಾತಿ, ಮತ, ಪಂಥಗಳ ಎಲ್ಲೆ ಮೀರಿದ ಸಮಾಜವಿದ್ದರೇ ಒಳ್ಳೆಯದು ಮತ್ತು ಅಂತಹ ಸಮಾಜ ನಮ್ಮದು ಎಂಬ ಸಂದೇಶವನ್ನು ಡಾ. ಬಶೀರ್ ನೀಡಿದ್ದಾರೆ. ಮುಂದೆಯೂ ಇದೇ ರೀತಿಯ ಸರ್ವಧರ್ಮ ಕಾರ್ಯಕ್ರಮಗಳನ್ನು ಕೈಗೊಳ್ಳಲಿ ಎಂದರು.

ಜಿಲ್ಲಾ ರೆಡ್‌ಕ್ರಾಸ್ ಸಂಸ್ಥೆಯ



ಸಭಾಪತಿ ಹೆಮ್ಮಿಗೆ ಮೋಹನ್ ಮಾತನಾಡಿ, ರಾಷ್ಟ್ರಕವಿ ಕುವೆಂಪುರವರು ಹೇಳಿದಂತೆ ಸರ್ವ ಜನಾಂಗದ ಶಾಂತಿಯ ತೋಟ ಎಂಬ ವಾಕ್ಯದಂತೆ, ಎಲ್ಲಾ ಧರ್ಮಗಳನ್ನು ಪ್ರೀತಿಸುವ ಮತ್ತು ಗೌರವಿಸುವ ಜನಪ್ರಿಯ ಆಸ್ಪತ್ರೆ ಮುಖ್ಯಸ್ಥ ಡಾ. ವಿ.ಕೆ. ಅಬ್ದುಲ್ ಬಶೀರ್ ಅವರು ಮಾದರಿಯಾಗಿದ್ದಾರೆ, ಇಂತಹ ಉತ್ತಮ ಕಾರ್ಯಕ್ರಮಗಳನ್ನು ಆಯೋಜಿಸಿರುವ ಎಲ್ಲರಿಗೂ ಧನ್ಯವಾದಗಳು ಮತ್ತು ವೈದ್ಯ ವೃತ್ತಿಯ ಜೊತೆಗೆ ಸಮಾಜಸೇವೆ ಮತ್ತು ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುತ್ತಿರುವ ಡಾಕ್ಟರ್‌ಗೆ ಅಭಿನಂದನೆ ತಿಳಿಸಿದರು.

ಸಮಾಜ ಸೇವಕ ಆರ್.ಪಿ. ವೆಂಕಟೇಶಮೂರ್ತಿ ಮಾತನಾಡಿ, ವಿವಿಧತೆಯಲ್ಲಿ ಏಕತೆ ಸಾರುವ ದೇಶ ಭಾರತ. ಇಲ್ಲಿ ಎಲ್ಲಾ ಧರ್ಮೀಯರು ವಾಸಿಸುತ್ತಿದ್ದಾರೆ. ಗೌರಿ ಮತ್ತು ಗಣೇಶ ಹಬ್ಬದಲ್ಲಿ ನಡೆದ ಅನ್ನಸಂತರ್ಪಣೆ ಕಾರ್ಯದಲ್ಲೂ ಹಿಂದೂಗಳ ಜತೆ ಮುಸ್ಲಿಂ ಮತ್ತು ಕ್ರಿಶ್ಚಿಯನ್ ಸಿಬ್ಬಂದಿಗಳು ಪಾಲ್ಗೊಂಡು ಸಾಮೂಹಿಕವಾಗಿ ಊಟ ಬಡಿಸಿ, ಸಾಮರಸ್ಯ ಮೆರೆದಿದ್ದನ್ನು ಕೊಂಡಾಡಿದರು.

ಜನಪ್ರಿಯ ಫೌಂಡೇಶನ್ ಮುಖ್ಯಸ್ಥ ಡಾ.ವಿ.ಕೆ ಅಬ್ದುಲ್ ಬಷೀರ್ ಮಾತನಾಡಿ, ನಮ್ಮ ಜನಪ್ರಿಯ ಆಸ್ಪತ್ರೆ ಆವರಣದಲ್ಲಿ ಜನಪ್ರಿಯ ಗೆಳೆಯರ ಬಳಗದ ವತಿಯಿಂದ ಹತ್ತು ವರ್ಷಗಳಿಂದ ಗಣಪತಿಯನ್ನು ಪ್ರತಿಷ್ಠಾಪಿಸಿ ಪೂಜೆ ಮತ್ತು ಅನ್ನ ಸಂತರ್ಪಣ ಕಾರ್ಯಕ್ರಮಗಳನ್ನು ಪ್ರತಿ ವರ್ಷ ಆಚರಿಸಿ ಸಮಾಜದಲ್ಲಿ ಶಾಂತಿಯ ಸಂದೇಶ ನೀಡಲು ಈ ಕಾರ್ಯಕ್ರಮವನ್ನು ಆಯೋಜಿಸಿದ್ದೇವೆ ಎಂದರು.

ಸ್ವಾತಂತ್ರ್ಯ ಪೂರ್ವದಲ್ಲಿ ಖಾಸಗಿಯಾಗಿ ನಡೆಯುತ್ತಿದ್ದ ಚೌತಿ ಸಂಭ್ರಮಕ್ಕೆ ಅಂದು ಬ್ರಿಟಿಷ್ ಆಡಳಿತದ ವಿರುದ್ಧ ದೇಶಪ್ರೇಮಿಗಳಲ್ಲಿ ಸ್ವಾತಂತ್ರ್ಯದ ಕಿಡಿಯನ್ನು ಹೊತ್ತಿಸಲು 1893ರಲ್ಲಿ ಬಾಲಗಂಗಾಧರ್ ತಿಲಕ್ ಅವರು ಮಹಾರಾಷ್ಟ್ರದಲ್ಲಿ ಅದಕ್ಕೊಂದು ನೂತನ ಸ್ವರೂಪ ನೀಡಿದರು ಎಂದು ಪ್ರಶಂಸೆ ವ್ಯಕ್ತಪಡಿಸಿದರು.

ಬಿಜೆಪಿ ಯುವ ಮುಖಂಡ ಅಗರ್ವಾಲ್, ಜನಪ್ರಿಯ ಆಸ್ಪತ್ರೆ ವೈದ್ಯರಾದ ಡಾ. ಪ್ರವೀಣ್, ಡಾ. ಮನೋಜ್ ಕುಮಾರ್, ಡಾ. ಸುಹಾಸ್, ಡಾ. ಮುರುಳಿಧರ, ಡಾ. ಲೋಹಿತ್, ಡಾ. ಫೈಸಲ್, ರೆಡ್ ಕ್ರಾಸ್ ಸಂಸ್ಥೆ ನಿರ್ದೇಶಕರಾದ ಎಚ್.ಡಿ.ಕುಮಾರ್, ಎಸ್.ಎಸ್. ಪಾಷಾ, ಸುಬ್ಬುಸ್ವಾಮಿ, ಬಿ.ಆರ್.ಉದಯ ಕುಮಾರ್, ಜಯಶ್ರೀ ಕೆ.ಟಿ, ಡಾ. ಕಾವ್ಯಶ್ರೀ, ಗಿರೀಶ್, ಜಯಪ್ರಕಾಶ್, ಗಿರಿಗೌಡ, ಭೀಮರಾಜ್, ಜನಪ್ರಿಯ ಆಡಳಿತ ಅಧಿಕಾರಿ ಮಹಮ್ಮದ್ ಕಿಸಾರ್, ಸಿಬ್ಬಂದಿ ವರ್ಗ ಇನ್ನಿತರರು ಭಾಗವಹಿಸಿದ್ದರು.

## ಎಲ್ಲಾ ಪ್ರಜೆಗಳು ಬಿಜೆಪಿ ಸದಸ್ಯತ್ವ ಸ್ವೀಕರಿಸಬೇಕು: ಅಭಿಯಾನದಲ್ಲಿ ಶಾಸಕ ಹೆಚ್.ಕೆ.ಸುರೇಶ್

# ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ದೇಶ ಸುರಕ್ಷಿತ

• ಪ್ರಜೋದಯ ವರದಿ

**ಹಳೇಬೀಡು:** ಭಾರತ ದೇಶ ಉಳಿಯಬೇಕೆಂದರೆ ದೇಶದ ಎಲ್ಲಾ ಪ್ರಜೆಗಳು ಬಿ.ಜೆ.ಪಿ ಸದಸ್ಯತ್ವ ಸ್ವೀಕರಿಸಬೇಕೆಂದು ಶಾಸಕ ಹೆಚ್.ಕೆ. ಸುರೇಶ್ ಅವರು ತಿಳಿಸಿದರು.

ಇಲ್ಲಿನ ಗ್ರಾಮ ದೇವತೆ ಉಡುಸಲಮ್ಮ ದೇವಾಲಯದ ಆವರಣದಲ್ಲಿ ತಾಲ್ಲೂಕು ಬಿಜೆಪಿ ಅಭಿಯಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಇಂದು ಭಾರತ ಸರ್ಕಾರ ಸುಭದ್ರ ದೇಶವಾಗಿದೆ. ಕಾರಣ ನಮ್ಮ ದೇಶದ ಪ್ರಧಾನಮಂತ್ರಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ದೇಶ ಸುರಕ್ಷಿತವಾಗಿದೆ. ರಾಜ್ಯ ಮತ್ತು ದೇಶ ಅಭಿಯಾನ ಕಾರ್ಯಕ್ರಮದಲ್ಲಿ ಜಿಲ್ಲೆಯ ಎಲ್ಲಾ ಪಕ್ಷದ ಸದಸ್ಯರು ಕನಿಷ್ಠ ಬೂತ್‌ನಲ್ಲಿ 300 ಸದಸ್ಯತ್ವವನ್ನು ಮಾಡಬೇಕು ಎಂದರು.

ರಾಜ್ಯದಲ್ಲಿ 10 ಕೋಟಿ ಸದಸ್ಯತಾ ಅಭಿಯಾನ ಆಗಬೇಕು. ಮುಂದೆ ಬರುವ ಚುನಾವಣೆಯಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿಯಲ್ಲಿ ರಾಜ್ಯಾದ್ಯಂತ ಬಿ.ಜೆ.ಪಿ. ಪಕ್ಷ ಬರಬೇಕು. ಇದಕ್ಕೆಲ್ಲಾ ಸಹಕಾರ ಕಾರ್ಯಕರ್ತರು ಶಿಸ್ತಿನ ಕೆಲಸ ಮಾಡಿದರೆ ಬಿ.ಜೆ.ಪಿ. ಸರ್ಕಾರ ಖಂಡಿತ ಬರುತ್ತದೆ ಹಾಗೂ ಈ ಬಿ.ಜೆ.ಪಿ. ಅಭಿಯಾನಕ್ಕೆ ಒಂದು ಅರ್ಥ ಬರುತ್ತದೆ ಎಂದು ತಿಳಿಸಿದರು.

ಪ್ರತಿಯೊಬ್ಬರೂ ಬಿಜೆಪಿ ಹಾಗೂ ನರೇಂದ್ರ ಮೋದಿ ಮೇಲೆ ನಂಬಿಕೆ ಇಡಬೇಕೆಂದರು.

ಬೇಲೂರು ತಾಲ್ಲೂಕು ಸಂಚಾಲಕ ಗಂಗೂರು ಶಿವಕುಮಾರ್ ಮಾತನಾಡಿ, ಬಿ.ಜೆ.ಪಿ. ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡ ಹಾಗೂ ಪ್ರಧಾನಿ ನರೇಂದ್ರಮೋದಿ ಅವರ ನೇತೃತ್ವದಲ್ಲಿ ಅಭಿಯಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ನಾವುಗಳು ಪ್ರತಿ ಹಂತದಲ್ಲೂ 300 ಜನರನ್ನು ಬೂತ್ ಮಟ್ಟದಲ್ಲಿ ಸದಸ್ಯತ್ವವನ್ನು



ಮಾಡಬೇಕು ನಂತರ ನಾವು ಎರಡನೇ ಹಂತವಾಗಿ ಎಸ್.ಎಂ.ಎಸ್. ಮೂಲಕವೇ ಸ್ವೀಕರಿಸಿ ಲಿಂಕ್ ಬಳಸಿ ವಿವರವನ್ನು ಭರ್ತಿ ಮಾಡಬೇಕು. ನಂತರ ಸದಸ್ಯತ್ವದ ಕಾರ್ಡ್ ಪಡೆಯಬೇಕು ಎಂದರು.


ಪ್ರತಿಯೊಬ್ಬರೂ ಪಕ್ಷದ ನಿಷ್ಠೆಯಿಂದ ಕೆಲಸ ಮಾಡಿದರೆ ಈ ಅಭಿಯಾನಕ್ಕೆ ಅರ್ಥ ಬರುವುದು. ಅದೇ ರೀತಿ ಮುಂದಿನ ದಿನಗಳಲ್ಲಿ ನಾವು ಮನೆ ಮನೆಗೆ ಹೋಗಿ ದೇಶದ, ಪಕ್ಷದ, ನಾಯಕರ ಬಗ್ಗೆ ವಿಚಾರವನ್ನು ತಿಳಿಸಿ ಅಭಿಯಾನ ಕಾರ್ಯಕ್ರಮವನ್ನು ಯಶಸ್ವಿಯಾಗಿ ಮಾಡಬೇಕು. ಸಪ್ಟೆಂಬರ್ 1ರಿಂದ ಈ ಸದಸ್ಯತ್ವ ಚಾಲನೆ ಪ್ರಾರಂಭವಾಗುವುದು. ಎಲ್ಲಾ ಹಂತಗಳಲ್ಲೂ ಬಿಜೆಪಿ ಸದಸ್ಯತ್ವಕ್ಕಾಗಿ ಹೋರಾಟ ನಡೆಸುತ್ತೇವೆ ಎಂದು ತಿಳಿಸಿದರು.

ರಾಷ್ಟ್ರೀಯ ತೆಂಗು ಬೆಳೆಗಾರರ ಉಪಾಧ್ಯಕ್ಷ ರೇಣು ಕುಮಾರ್ ಮಾತನಾಡಿ, 15 ವರ್ಷಗಳ ಹಿಂದೆ ಹಾಸನ ಜಿಲ್ಲೆಯಲ್ಲಿ ಐದು ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿಗಳನ್ನು ಗೆದ್ದು ಸಾಧನೆ ಮಾಡಿದ್ದು ನಮ್ಮ ಜಿಲ್ಲೆ. ಬಿಜೆಪಿ ಅಭಿಯಾನ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳ ಸಂಘಟನೆಯಿಂದ ಶಕ್ತಿಯನ್ನು ತುಂಬಬೇಕು. ಅಭಿಯಾನ ಕಾರ್ಯಕ್ರಮಕ್ಕೆ ಯಶಸ್ವಿಯಾಗುತ್ತದೆ. ಈ ಬಾರಿ ಲೋಕಸಭೆಯಲ್ಲಿ ನಾವು ಎಲ್ಲೋ ಸಣ್ಣ ಪುಟ್ಟ ತಪ್ಪುಗಳು ಕಂಡು ಬಂದಿದೆ ಅದರಿಂದ ಸ್ವಲ್ಪ ನಮಗೆ ಹಿನ್ನಡೆಯಾಯಿತು. ಈ ಬಾರಿ ಪಕ್ಷ ಎಲ್ಲರು ಸಹಕಾರ ಒಗ್ಗಟಿನ ಕೆಲಸ ಮಾಡುತಿದೆ ಎಂದು ತಿಳಿಸಿದರು.

ಬಿ.ಜೆ.ಪಿ ಮಾಜಿ ತಾಲ್ಲೂಕು ಅಧ್ಯಕ್ಷ ಎ. ಎಸ್.ಬಸವರಾಜ್ ಮಾತನಾಡಿ, ಅಭಿಯಾನ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳ ಸಂಘಟನೆಯನ್ನು ಮಾಡಬೇಕು. 18 ವರ್ಷ ಆಗಿರಬೇಕು ಅಂತ ಅಭಿಯಾನ ಕಾರ್ಯಕ್ರಮವನ್ನು ಬೀದಿ ಬೀದಿಗಳಲ್ಲಿ ವಾದ್ಯದ ಮೂಲಕ ಅಭಿಯಾನ ಮಾಡಿದರೆ ವಿಶೇಷವಾದ ಅಭಿಯಾನವಾಗುತ್ತದೆ. ರಾಜ್ಯದಲ್ಲಿ ಎಲ್ಲಾ ಪತ್ರಿಕೆಯಲ್ಲಿ ಸುದ್ದಿ, ಆದರೆ, ಹಾಸನ ಜಿಲ್ಲೆಗೆ ಒಂದು ಅರ್ಥ ಬರುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಂಡಲದ ಅಧ್ಯಕ್ಷ ರಮೇಶ್, ಗ್ರಾಮ ಪಂಚಾಯಿತಿ ಅಧ್ಯಕ್ಷ ನಿತ್ಯಾನಂದ, ಧರ್ಮಪ್ಪ, ಗಂಡೇಹಳ್ಳಿ ಕುಮಾರ್, ಸೋಮಶೇಖರ್, ಶಶಿ, ಪ್ರಸನ್ನ, ಪರಮೇಶ್ ಹಾಗೂ ಇನ್ನಿತರರು ಹಾಜರಿದ್ದರು.

# ಸ್ಮಾರ್ಟ್ ಟಿವಿ, ಎಲ್‌ಇಡಿ ಸ್ಲೇಟ್ ವಿತರಣೆ



• ಪ್ರಜೋದಯ ವರದಿ

**ಅರಕಲಗೂಡು:** ತಾಲ್ಲೂಕಿನ ಹೊನ್ನೇನಹಳ್ಳಿ ಗ್ರಾಮದ ಸರ್ಕಾರಿ ಶಾಲೆ ಮತ್ತು ಅಂಗನವಾಡಿ ಕೇಂದ್ರಕ್ಕೆ ಸ್ಪರ್ಧಾತ್ಮಕ ಶಿಕ್ಷಣಕ್ಕೆ ಪೂರಕವಾದ ತಾಂತ್ರಿಕ ಪರಿಕರಗಳನ್ನು ಗ್ರಾಮದ ಹಿರಿಯ ದಾನಿಗಳು ನೀಡುವ ಮೂಲಕ ಸರ್ಕಾರಿ ಶಾಲೆ ಪ್ರಗತಿಗೆ ನೆರವಾಗಿದ್ದಾರೆ.

ಗ್ರಾಮದ ವಿಷಕಂಠಾಚಾರ್ ಅವರ ಮೊಮ್ಮಕ್ಕಳಾದ ಪದ್ಮಾವತಿ ಜಯಕುಮಾರ್ ಹಾಸನದಲ್ಲಿ ನೆಲಸಿದ್ದು, ಹುಟ್ಟಿಬೆಳೆದು ಪ್ರಾಥಮಿಕ ಶಿಕ್ಷಣ ಕಲಿಸಿ ಸಮಾಜದಲ್ಲಿ ಉತ್ತಮ ಬದುಕು ಕಟ್ಟಿಕೊಟ್ಟಿರುವ ಊರಿನ ಸರ್ಕಾರಿ ಶಾಲೆಗೆ ಸ್ಮಾರ್ಟ್ ಟಿವಿ ಪ್ರೊಜೆಕ್ಟರ್ ಹಾಗೂ ಇತರೆ ಪರಿಕರಗಳನ್ನು ಕೊಡುಗೆಯಾಗಿ ನೀಡಿ ಶೈಕ್ಷಣಿಕ ಕ್ರಾಂತಿಗೆ ಉತ್ತೇಜಿಸಿದ್ದಾರೆ.

ಇತ್ತೀಚೆಗೆ ರಾಜ್ಯ ಸರ್ಕಾರದಿಂದಲೇ ಆಂಗ್ಲಮಾಧ್ಯಮದಲ್ಲಿ ಆರಂಭಗೊಂಡಿರುವ ಹೊನ್ನೇನಹಳ್ಳಿ ಅಂಗನವಾಡಿ ಕೇಂದ್ರಕ್ಕೆ ಗ್ರಾಮದ ದಿ|| ಲಕ್ಷ್ಮಮ್ಮ ಮತ್ತು ಕಾಳಮ್ಮನ ಅಣ್ಣೇಗೌಡರ ಸ್ಮರಣಾರ್ಥವಾಗಿ ಕುಟುಂಬದ ಸದಸ್ಯರು ಎಲ್‌ಇಡಿ ಸ್ಲೇಟ್, ಇತರೆ ಅಗತ್ಯ ಪರಿಕರಗಳನ್ನು ಕೊಡುಗೆಯಾಗಿ ನೀಡಿ ಸರ್ಕಾರಿ ಶಾಲೆಗಳಿಗೆ ಮಾದರಿ ಯಾಗಿದ್ದಾರೆ.

ಅತೀ ಕಡಿಮೆ ಖರ್ಚಿನಲ್ಲಿ ಶಿಕ್ಷಣ ಕಲ್ಪಿಸುತ್ತಿರುವುದು ತುಂಬಾ ಸಂತಸ ತಂದಿದೆ ಎಂದು ಹೊನ್ನೇನಹಳ್ಳಿ ಅಂಗನವಾಡಿ ಕೇಂದ್ರದ ಮಕ್ಕಳ ಪೋಷಕರಾದ ಸಾವಿತ್ರಿ, ರತ್ನ ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

# ಜಿಎಸ್‌ಟಿ ಸರಳೀಕರಣದಿಂದ ರಾಜ್ಯಗಳಿಗೆ ನಷ್ಟ


## ಕಂದಾಯ ಸಚಿವ ಕೃಷ್ಣಬೈರೇಗೌಡ ಆತಂಕ | ನಷ್ಟ ಪರಿಹಾರಕ್ಕಾಗಿ ಆಗ್ರಹ

• ಪ್ರಜೋದಯ ವರದಿ

**ಬೆಂಗಳೂರು:** ಕೇಂದ್ರ ಸರ್ಕಾರ ಪ್ರಸ್ತಾಪಿಸಿರುವ ಜಿಎಸ್‌ಟಿ ಸರಳೀಕರಣ ವ್ಯವಸ್ಥೆಯಿಂದ ರಾಜ್ಯಗಳ ಆದಾಯ 85,000 ಕೋಟಿಯಿಂದ 2.5 ಲಕ್ಷ ಕೋಟಿ ವರೆಗೆ ನಷ್ಟ ಉಂಟಾಗಲಿದ್ದು, ಜಿಎಸ್‌ಟಿ ಕೌನ್ಸಿಲ್ ನಷ್ಟ ಪರಿಹಾರ ನೀಡಲಿ ಎಂದು ಕಂದಾಯ ಸಚಿವ ಕೃಷ್ಣಬೈರೇಗೌಡ ಅವರು ಒತ್ತಾಯಿಸಿದರು.

ಜಿಎಸ್‌ಟಿ ಸರಳೀಕರಣ ಹಾಗು ರಾಜ್ಯಗಳ ಸ್ವಾಯತ್ತತೆಗೆ ಸಂಬಂಧಿಸಿ ಶುಕ್ರವಾರ ದೆಹಲಿಯ ಕರ್ನಾಟಕ ಭವನದಲ್ಲಿ ಸಮಾನ ಮನಸ್ಕ ಎಂಟು ರಾಜ್ಯಗಳ ಸಚಿವರು ಹಾಗು ಅಧಿಕಾರಿಗಳ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿ, ಜಿಎಸ್‌ಟಿ ಕೌನ್ಸಿಲ್ ನಮ್ಮ ಮುಂದಿಟ್ಟಿರುವ ಜಿಎಸ್‌ಟಿ ತೆರಿಗೆ ಸರಳೀಕರಣ ವ್ಯವಸ್ಥೆಯನ್ನು ನಾವು ಸ್ವಾಗತಿಸುತ್ತೇವೆ. ಆದರೆ, ಈ ವ್ಯವಸ್ಥೆ ರಾಜ್ಯಗಳ ತೆರಿಗೆ ಆದಾಯವನ್ನು ರಕ್ಷಿಸುವಂತಿರಬೇಕು. ಅದರ ಸಂಪೂರ್ಣ ಲಾಭ ದೇಶದ ಜನಸಾಮಾನ್ಯರಿಗೆ ಸಿಗುವಂತಿರಬೇಕೆ ಹೊರತು ಕೆಲವು ಕಂಪನಿಗಳಿಗೆ ಮಾತ್ರ ಲಾಭ ಆಗುವಂತಿರಬಾರದೆಂದು ಅಭಿಪ್ರಾಯಪಟ್ಟರು.

ಪ್ರಸ್ತಾವಿತ ಜಿಎಸ್‌ಟಿ ಸರಳೀಕರಣದಿಂದ ರಾಜ್ಯ ಸರ್ಕಾರಗಳಿಗೆ ಯಾವ ಪ್ರಮಾಣದಲ್ಲಿ



ಆದಾಯ ಖೋತಾ ಆಗಬಹುದೆಂಬ ಅಂದಾಜಿನ ಕುರಿತು ಕೇಂದ್ರ ಸರ್ಕಾರ ಈ ವರೆಗೆ ಯಾವ ಮಾಹಿತಿ ನೀಡಿಲ್ಲ. ಕೆಲವು ಸರ್ಕಾರಿ ಹಾಗು ಖಾಸಗಿ ಸಂಸ್ಥೆಗಳು ರಾಜ್ಯಗಳಿಗೆ ಭಾಗಶಃ 85 ಸಾವಿರ ಕೋಟಿಯಿಂದ 2.5 ಲಕ್ಷ ಕೋಟಿ ರೂ. ವರೆಗೆ ನಷ್ಟ ಉಂಟಾಗುವ ಸಾಧ್ಯತೆಯಿದೆ ಎಂದು ಅಂದಾಜಿಸಿವೆ. ರಾಜ್ಯ ಸರ್ಕಾರಗಳಿಗೆ ಆದಾಯ ನಷ್ಟ ಉಂಟಾದರೆ ಕೇಂದ್ರ ಸರ್ಕಾರಕ್ಕೂ ನಷ್ಟವಾಗಲಿದೆ. ಹೀಗಾಗಿ ಜಿಎಸ್‌ಟಿ ಸ್ಥಿರಗೊಳ್ಳುವ ವರೆಗೆ ಕೇಂದ್ರ ಸರ್ಕಾರ ತಮ್ಮ ಖಜಾನೆಯಿಂದ ಒಂದು ರೂಪಾಯಿಯನ್ನೂ ನೀಡುವ ಅಗತ್ಯವಿಲ್ಲ. ಬದಲಿಗೆ ಜಿಎಸ್‌ಟಿ ಕೌನ್ಸಿಲ್ ಪರಿಧಿಯಲ್ಲೇ ಪ್ರತಿ ರಾಜ್ಯಗಳಿಗೂ ಪರಿಹಾರ ನೀಡಲಿಯೆಂದು ಒತ್ತಾಯಿಸಿದರು.

ಕೇಂದ್ರದ ಆದಾಯದಲ್ಲಿ ಜಿಎಸ್‌ಟಿ ಪಾಲು ಕೇವಲ ಶೇ.28ರಷ್ಟು ಮಾತ್ರ. ಉಳಿದ ಶೇ. 72ರಷ್ಟು ಆದಾಯವನ್ನು ಕೇಂದ್ರ ವಿವಿಧ ಮೂಲಗಳಿಂದ ಗಳಿಸುತ್ತದೆ. ನೇರ ತೆರಿಗೆ, ಆದಾಯ ತೆರಿಗೆ, ಕಸ್ಟಮ್ಸ್, ಡೆವಿಡೆಂಟ್ ಹಾಗು ವಿವಿಧ ಸೆಸ್‌ಗಳು ಕೇಂದ್ರದ ಆದಾಯದ ಮೂಲ. ಸೆಸ್ ಮೂಲಕವೇ ಕೇಂದ್ರ ಸರ್ಕಾರ ಶೇ.17 ರಿಂದ ಶೇ.20 ರಷ್ಟು ಆದಾಯ ಗಳಿಸುತ್ತದೆ. ಸೆಸ್ ಆದಾಯದಲ್ಲಿ ಒಂದು ರೂಪಾಯಿಯನ್ನೂ ಸಹ ಕೇಂದ್ರ ಸರ್ಕಾರ ರಾಜ್ಯಗಳ ಜೊತೆ ಹಂಚಿ ಕೊಳ್ಳುವುದಿಲ್ಲ. ಆದರೆ, ರಾಜ್ಯಗಳ ಆದಾಯದಲ್ಲಿ ಜಿಎಸ್‌ಟಿ ಪಾಲು ಶೇ.50 ರಷ್ಟಿದೆ. ಹೀಗಾಗಿ ಅಭಿವೃದ್ಧಿ ಹಾಗು ಆದಾಯ ಸಂಗ್ರಹಣೆಗೆ ರಾಜ್ಯಗಳು ಜಿಎಸ್‌ಟಿಯನ್ನೇ ನೆಚ್ಚಿಕೊಂಡಿವೆ. ಇಂತಹ ಸಂದರ್ಭದಲ್ಲಿ ರಾಜ್ಯಗಳ ಆದಾಯದ ಶೇ.20ರಷ್ಟು ಆದಾಯ ನಷ್ಟವಾದರೆ ರಾಜ್ಯಗಳ ಆರ್ಥಿಕ ಸ್ವಾಯತ್ತತೆ ಪ್ರಶ್ನಾರ್ಥಕವಾಗುತ್ತದೆಂದು ಕಳವಳ ವ್ಯಕ್ತಪಡಿಸಿದರು.

ಜಿಎಸ್‌ಟಿ ತೆರಿಗೆ ವ್ಯವಸ್ಥೆಯನ್ನು 2017ರಲ್ಲಿ ಪರಿಚಯಿಸುವಾಗ ಕೇಂದ್ರ ಸರ್ಕಾರ ಸ್ಥಿರಗೊಳ್ಳುವವರೆಗೆ ರಾಜ್ಯಗಳಿಗೆ ತೆರಿಗೆ ನಷ್ಟ ಪರಿಹಾರ ನೀಡಬೇಕೆಂದು ಹೇಳಿತ್ತು. ಆದರೆ, ಪರಿಹಾರ ವ್ಯವ ಸ್ಥೆಯನ್ನು 2022ಕ್ಕೆ ತೆಗೆದು ಹಾಕಲಾಗಿತ್ತು. ಪರಿಣಾಮ ಬಹುಪಾಲು ರಾಜ್ಯಗಳು ಶೇ.25 ರಷ್ಟು ಆದಾಯ ನಷ್ಟ ಎದುರಿಸಿದ್ದವು. ರಾಜ್ಯಗಳ ಆದಾಯ ಶೇ.25 ರಷ್ಟು ಕುಸಿಯುತ್ತಿದ್ದ ಸಂದರ್ಭದಲ್ಲಿ ಜಿಎಸ್ಟಿ ಸ್ಥಿರಗೊಂಡಿದೆ ಎಂದು ನೀವು ಹೇಗೆ ಹೇಳುತ್ತೀರಿ ಎಂದು ಪ್ರಶ್ನಿಸಿದರು.

ನಾವು ತೆರಿಗೆ ಸರಳೀಕರಣದ ಪರ ಇದ್ದೇವೆ. ಆದರೆ, ರಾಜ್ಯದ ಆದಾಯವನ್ನೂ ಕಾಪಾಡಬೇಕು. ಸಂವಿಧಾನ 2/3 ಜನರ ಯೋಗಕ್ಷೇಮ ಹಾಗು ಅಭಿವೃದ್ಧಿ ಕರ್ತವ್ಯವನ್ನು ರಾಜ್ಯಕ್ಕೆ ನೀಡಿದೆ. ಆದರೆ, 2/3 ರಷ್ಟು ಆದಾಯವನ್ನು ಕೇಂದ್ರಕ್ಕೆ ನೀಡಿದೆ. ಈ ನಿಯಮ ರಾಜ್ಯಗಳ ಸುಸ್ಥಿರ ಅಭಿವೃದ್ಧಿಗೆ ಮಾರಕ. ಹೆಚ್ಚಿನ ಪ್ರಮಾಣದ ಅಭಿವೃದ್ಧಿ ಕೆಲಸಗಳನ್ನು ರಾಜ್ಯಗಳೇ ಮಾಡ ಬೇಕು. ಆದಾಯ ಮಾತ್ರ ಕೇಂದ್ರದ ಪಾಲಾದರೆ ರಾಜ್ಯದ ಅಭಿವೃದ್ಧಿ ಹೇಗೆ ಸಾಧ್ಯವೆಂದು ಪ್ರಶ್ನಿಸಿದ ಅವರು, ಸಾರ್ವಜನಿಕರೂ ಸಹ ಅವರ ಯೋಗ ಕ್ಷೇಮದ ಬೇಡಿಕೆ ಹಾಗು ಅಭಿವೃದ್ಧಿ ಅಗತ್ಯತೆಗಳಿಗೆ ರಾಜ್ಯ ಸರ್ಕಾರಗಳನ್ನೇ ಅವಲಂಬಿಸಿದ್ದಾರೆ. ಕೇಂದ್ರಗಳ ಕೊಡುಗೆಯೂ ಇದೆ. ರಾಜ್ಯ ಸರ್ಕಾರಗಳ ಕಾರ್ಯಕ್ರಮಗಳೇ ಅಧಿಕ ಎಂದರು.

## ಮೂರನೇ ಬಾರಿಗೆ ಹೆಚ್ ಡಿಸಿಸಿ ಬ್ಯಾಂಕ್ ಅಧ್ಯಕ್ಷರಾದ ಸೋಮನಹಳ್ಳಿ ನಾಗರಾಜ್

» ಮೊದಲನೇ ಪುಟದಿಂದ

ಎಲ್ಲಾ 13 ಸ್ಥಾನಗಳನ್ನು ಜೆಡಿಎಸ್ ಅಭ್ಯರ್ಥಿಗಳು ಗೆಲ್ಲಲು, ಬ್ಯಾಂಕ್ ಉತ್ತಮ ರೀತಿಯಲ್ಲಿ ಬೆಳೆಯಲು ರೇವಣ್ಣ ಅವರು ಕಾರಣವೆಂದರು. ಮೂರನೇ ಬಾರಿಗೆ ನನ್ನನ್ನು ಅಧ್ಯಕ್ಷನನ್ನಾಗಿ ಮಾಡಿರುವುದರಿಂದ ಜವಾಬ್ದಾರಿ ಇನ್ನೂ ಹೆಚ್ಚಿದೆ. ಇದು ಸುಖದ ಸುಪ್ಪತ್ತಿಗೆ ಅಲ್ಲ, ಮುಳ್ಳಿನ ಹಾಸಿಗೆ. ಹಿಂದೆ ನಬಾರ್ಡ್‌ನಿಂದ ಆರ್ಥಿಕ ನೆರವು, ಪುನರ್‌ಧನ ಶೇ.90 ರಷ್ಟು ಸಿಗುತ್ತಿತ್ತು. ಈಗ ಶೇ.10 ಕ್ಕೆ ಇಳಿದಿದೆ. ಎಲ್ಲರ ವಿಶ್ವಾಸ ಪಡೆದು ಬ್ಯಾಂಕ್‌ನ ಶ್ರೇಯೋಭಿವೃದ್ಧಿಗೆ ಶ್ರಮಿಸು ತ್ತೇನೆಂದರು.

ನೂತನ ಉಪಾಧ್ಯಕ್ಷ ಶೇಖರಪ್ಪ ಅವರು ಮಾತನಾಡಿ, ಮೊದಲ ಬಾರಿಗೆ ನಿರ್ದೇಶಕನಾದ ನನಗೆ ಉಪಾಧ್ಯಕ್ಷ ಸ್ಥಾನ ಸಿಕ್ಕಿರುವುದು ಅತೀವ ಸಂತಸ ತಂದಿದೆ. ಅದಕ್ಕೆ ಕಾರಣರಾದ ಮಾಜಿ ಸಚಿವ ಹೆಚ್.ಡಿ.ರೇವಣ್ಣ ಸೇರಿ ಎಲ್ಲರಿಗೂ ಧನ್ಯವಾದ ಸಲ್ಲಿಸುತ್ತೇನೆಂದರು.

ಜಿಲ್ಲಾ ಸಹಕಾರ ಇಲಾಖೆ ಉಪ ನಿಬಂಧಕ ಕಿರಣ್ ಕುಮಾರ್, ಹಾಸನ ಉಪ ವಿಭಾಗದ ಸಹಾಯಕ ನಿಬಂಧಕ ಬಾಲಚಂದ್ರ ಹಾಗು ನಿರ್ದೇಶಕರಾದ ಕಬ್ಬಿನಹಳ್ಳಿ ಜಗದೀಶ್, ಬಿದರಿಕೆರೆ ಜಯರಾಮ್, ಕೆ.ಎಸ್.ಮಂಜೇಗೌಡ, ಗಂಡಸಿ ಗಂಗಾಧರ್ ಹಾಜರಿದ್ದರು. 13 ನೂತನ ನಿರ್ದೇಶಕರಿಗೆ ಪ್ರಮಾಣ ಪತ್ರ ವಿತರಿಸಲಾಯಿತು. ಅಧ್ಯಕ್ಷ ಹಾಗು ಉಪಾಧ್ಯಕ್ಷರಿಗೆ ಹಾರ ಹಾಕಿ ಅಭಿನಂದಿಸಲಾಯಿತು.

## ಜೆಡಿಎಸ್ ವತಿಯಿಂದ ಭಾನುವಾರ ಧರ್ಮಸ್ಥಳ ಚಲೋ



• ಪ್ರಜೋದಯ ವರದಿ

**ಅರಕಲಗೂಡು:** ಧಾರ್ಮಿಕ ಕ್ಷೇತ್ರ ಧರ್ಮಸ್ಥಳದ ಬಗ್ಗೆ ಕೆಲ ವರು ಮಾಡುತ್ತಿರುವ ಅಪ ಪ್ರಚಾರ ತರಲು ನಡೆಸುತ್ತಿರುವ ಕುತಂತ್ರಗಳನ್ನು ಖಂಡಿಸಿ, ತಾಲ್ಲೂಕು ಜೆಡಿಎಸ್ ಆ.31 ರಂದು ಭಾನುವಾರ ಬೆಳಿಗ್ಗೆ ಶಾಸಕ ಎ. ಮಂಜು ನೇತೃತ್ವದಲ್ಲಿ ಧರ್ಮಸ್ಥಳ ಚಲೋ ಕಾರ್ಯಕ್ರಮ ಹಮ್ಮಿಕೊಂಡಿದೆ ಎಂದು ತಾಪಂ ಮಾಜಿ ಅಧ್ಯಕ್ಷ ನರಸೇಗೌಡ ತಿಳಿಸಿದರು.

ಶುಕ್ರವಾರ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿ, ಧರ್ಮಸ್ಥಳವು ರಾಜ್ಯದವಲ್ಲದೆ ದೇಶದ ಪ್ರಮುಖ ಧಾರ್ಮಿಕ ಕ್ಷೇತ್ರವಾಗಿದ್ದು, ಅಪಾರ ಭಕ್ತರ ನಂಬಿಕೆಯ ಕ್ಷೇತ್ರವಾಗಿದೆ. ಇಂತಹ ಪವಿತ್ರ ಕ್ಷೇತ್ರದ ಬಗ್ಗೆ ಕೆಲವರು ಅಸತ್ಯ ಹಾಗೂ ದ್ವೇಷಪೂರ್ಣ ಪ್ರಚಾರ ನಡೆಸುತ್ತಿರುವುದು ಅತ್ಯಂತ ಖಂಡನೀಯ. ಹಿಂದೂ ಧರ್ಮದ ಅವಹೇಳನ ಮಾಡಲು ರೂಪಿಸಿರುವ ಈ ಸಂಚನ್ನು ಖಂಡಿಸಲು ಜೆಡಿಎಸ್ ಈ ಕಾರ್ಯಕ್ರಮ ಹಮ್ಮಿಕೊಂಡಿದೆ ಎಂದರು.

ಭಾನುವಾರ ಬೆಳಿಗ್ಗೆ ಪಟ್ಟಣದ ಚಿಲುಮೆ ಮಠದ ಬಳಿಯಿಂದ ಹೊರಟು ಗ್ರಾಮ ದೇವತೆ ದೊಡ್ಡಮ್ಮ ದೊಡ್ಡಮ್ಮ ದೇವಾಲಯದಲ್ಲಿ ಪೂಜೆ ಸಲ್ಲಿಸಿ ವಾಹನಗಳ ಮೂಲಕ ಧರ್ಮಸ್ಥಳಕ್ಕೆ ತೆರಳಲಾಗುವುದು. ಇದು ಕೇವಲ ರಾಜಕೀಯ ಕಾರ್ಯಕ್ರಮವಲ್ಲ, ನಮ್ಮ ಧರ್ಮ, ಸಂಸ್ಕೃತಿ ಹಾಗೂ ನಂಬಿಕೆಯನ್ನು ಕಾಪಾಡಿಕೊಳ್ಳುವ ಸಮೂಹ ಚಳುವಳಿಯಾಗಿದ್ದು ಎಲ್ಲಾ ವರ್ಗದ ಜನರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಮನವಿ ಮಾಡಿದರು. ಮುಖಂಡರಾದ ಎ.ಎಂ. ರಘು, ರವಿ ಕುಮಾರ್, ಜಬೀಉಲ್ಲಾ, ಮಂಜು ಕಾಕೋಡನಹಳ್ಳಿ ಹಾಜರಿದ್ದರು.

## ಕುಡಿದ ಅಮಲಿನಲ್ಲಿ ಗಲಾಟೆ: ಮಹಿಳೆ ಕೊಲೆ

• ಪ್ರಜೋದಯ ವರದಿ

**ಅರಕಲಗೂಡು:** ತಾಲ್ಲೂಕಿನ ಗಂಗೂರು ಸರ್ಕಾರಿ ಆಸ್ಪತ್ರೆಯ ಕಾರ್ ಶೆಡ್‌ನಲ್ಲಿ ವಿವಾಹಿತ ಮಹಿಳೆಯ ಶವ ಪತ್ತೆಯಾಗಿದ್ದು ಆಕೆಯೊಂದಿಗೆ ಅನೈತಿಕ ಸಂಬಂಧ ಹೊಂದಿದ್ದ ವ್ಯಕ್ತಿಯೇ ತಲೆ ಮೇಲೆ ಕಲ್ಲು ಎತ್ತಿಹಾಕಿ ಹತ್ಯೆಗೈದಿರುವುದು ಬೆಳಕಿಗೆ ಬಂದಿದೆ.

ತಾಲ್ಲೂಕಿನ ಸೋಂಪುರ ಗ್ರಾಮದ ಜಯಮ್ಮ (40) ಮೃತರು. ಮೈಸೂರು ಜಿಲ್ಲೆ ಹಲಗನಹಳ್ಳಿ ಗ್ರಾಮದ ಸುರೇಶ ಆರೋಪಿ. ಜಯಮ್ಮ ಅವರ ಪತಿ ಅನಾರೋಗ್ಯದಿಂದ ಎರಡು ವರ್ಷಗಳ ಹಿಂದೆ ಮೃತಪಟ್ಟಿದ್ದಾರೆ. ಅವರಿಗೆ ಇಬ್ಬರು ಮಕ್ಕಳಿದ್ದು ಜಯಮ್ಮ ಕೂಲಿ ಕೆಲಸ ಮಾಡಿಕೊಂಡು ಊರಿನಲ್ಲೇ ಇದ್ದರು.

ಸುರೇಶನೊಂದಿಗೆ ಅನೈತಿಕ ಸಂಬಂಧ ಬೆಳೆಸಿಕೊಂಡಿದ್ದ ಜಯಮ್ಮ ಆತನೊಂದಿಗೆ ಇರುತ್ತಿದ್ದಳು. ಸುರೇಶ ಸಹ ಆಗಾಗ ಮನೆಗೆ ಬರುತ್ತಿದ್ದ. ಆ.24 ರಂದು ಗ್ರಾಮದ ಸವಿತಾ ಎಂಬುವವರೊಂದಿಗೆ ಕೂಲಿ ಕೆಲಸಕ್ಕೆ ಹೋಗಿದ್ದ ಜಯಮ್ಮ ಸಂಜೆ 6 ಗಂಟೆಗೆ ಮನೆಗೆ ಬಂದಿದ್ದರು. ಆದರೆ ರಾತ್ರಿ 7 ಗಂಟೆಗೆ ಬಸ್ ಹತ್ತಿ ತೆರಳಿದ್ದರು. ಮಾರನೇ ದಿನ ಗಂಗೂರು ಸರ್ಕಾರಿ ಆಸ್ಪತ್ರೆ ಕಾರಿನ ಶೆಡ್‌ನಲ್ಲಿ ಶವ ಪತ್ತೆಯಾಗಿದೆ. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದ ಕೊಣನೂರು ಠಾಣೆ ಪೊಲೀಸರು ವಿಚಾರಣೆ ನಡೆಸಿದಾಗ ಅಕ್ರಮ ಸಂಬಂಧ ಹೊಂದಿದ್ದ ಸುರೇಶ್ ಕೊಲೆ ಮಾಡಿರು ವುದು ತಿಳಿದಿದೆ.

ಸುರೇಶ ಹಾಗು ಜಯಮ್ಮ ಒಟ್ಟಿಗೆ ಕೂಲಿ ಕೆಲಸ ಮಾಡಿಕೊಂಡು ಎಲ್ಲಿ ಬೇಕೆಂದರಲ್ಲಿ ಇರುತ್ತಿ ದ್ದರು. ಆ.24ರ ರಾತ್ರಿ ಆಸ್ಪತ್ರೆಯ ಶೆಡ್‌ನಲ್ಲಿ ಮಲಗಿದ್ದಾಗ ಇಬ್ಬರ ನಡುವೆ ಗಲಾಟೆ ನಡೆದಿದ್ದು ಆಕ್ರೋಶದಲ್ಲಿ ಸುರೇಶನು ತಲೆ ಮೇಲೆ ಕಲ್ಲು ಎತ್ತಿ ಹಾಕಿ ಕೊಲೆ ಮಾಡಿದ್ದಾನೆ. ಸುರೇಶ ಮದ್ಯವ್ಯಸನಿಯಾಗಿದ್ದು ಅಮಲಿನಲ್ಲಿ ಕೃತ್ಯ ಎಸಗಿದ್ದಾನೆ. ಆರೋಪಿಯನ್ನು ಬಂಧಿಸಿರುವ ಪೊಲೀಸರು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

## ಶಾಲೆ ಬೀಗ ಮುರಿದು ಕಳ್ಳತನ

• ಪ್ರಜೋದಯ ವರದಿ

**ಆಲೂರು:** ಸರ್ಕಾರಿ ಶಾಲೆಯ ಬೀಗ ಮುರಿದು ಒಳನುಗ್ಗಿರುವ ಕಳ್ಳರು ಸಿಸಿಟಿವಿ ಕ್ಯಾಮರಾ ಟಿವಿ ಸೇರಿ 27 ಸಾವಿರ ರೂ. ಮೌಲ್ಯದ ಸಾಮಾಗ್ರಿ ಕಳವು ಮಾಡಿರುವ ಘಟನೆ ತಾಲ್ಲೂಕಿನ ಹೊಸಕೋಟೆ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ನಡೆದಿದೆ.

ಆ.25 ರಿಂದ 27ರ ಅವಧಿಯಲ್ಲಿ ಕಳ್ಳತನ ನಡೆದಿದೆ. ಕಚೇರಿಯ ಬೀಗ ಮುರಿದು 20 ಸಾವಿರ ರೂ. ಬೆಲೆಯ ಸಿಸಿ ಕ್ಯಾಮರಾಗಳಿಗೆ ಬಳಸಿದ್ದ ಟಿವಿ, 10 ಹಾಲಿನ ಪುಡಿ ಪ್ಯಾಕೆಟ್, 6 ಪ್ಯಾಕ್ ರಾಗಿ ಮಾಲ್ಟ್ ಹಾಗು 10 ಪ್ಯಾಕೆಟ್ ಅಡುಗೆ ಎಣ್ಣೆಯನ್ನು ಕಳವು ಮಾಡಿದ್ದಾರೆ. ಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಮೋದಿ ಸರ್ಕಾರದ ವೈಫಲ್ಯ ಒಪ್ಪಿದ ಆರ್‌ಎಸ್‌ಎಸ್

• ಪ್ರಜೋದಯ ವರದಿ

**ಬೆಂಗಳೂರು:** ಪ್ರಧಾನಿ ನರೇಂದ್ರ ಮೋದಿ ಸರ್ಕಾರದ ವೈಫಲ್ಯವನ್ನು ಆರ್‌ಎಸ್‌ಎಸ್ ಬಹಿರಂಗವಾಗಿ ಒಪ್ಪಿಕೊಂಡಿದೆ ಎಂದು ಐಟಿ-ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಹೇಳಿದರು.

ಶಿಕ್ಷಣ ಮತ್ತು ಆರೋಗ್ಯ ಸೇವೆಗಳು ಜನ ಸಾಮಾನ್ಯರ ಕೈಗೆಟುಕುತ್ತಿಲ್ಲವೆಂಬ ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಅವರ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಮೋದಿ ಸರ್ಕಾರವು ಸಾರ್ವಜನಿಕ ಸಂಪರ್ಕ ಮತ್ತು ಫೋಟೊ ತೆಗೆಸಿಕೊಳ್ಳುವುದರಲ್ಲಿಯೇ 11 ವರ್ಷ ವ್ಯರ್ಥ ಮಾಡಿದೆ. ಮೋದಿ ಸಂಪುಟದ ಸಚಿವರು ಭಾಗವತ್ ಅವರ ಹೇಳಿಕೆಗಳಿಗೆ ಪ್ರತಿಕ್ರಿಯಿಸು ವಂತೆ ಸವಾಲು ಎಸೆದಿದ್ದಾರೆ. ಶಿಕ್ಷಣ ಮತ್ತು ಉತ್ತಮ ಆರೋಗ್ಯ ಸೇವೆ ಈಗ ಕೈಗೆಟುಕುವಂತಿಲ್ಲ ಮತ್ತು ನಾಗರಿಕರಿಗೆ ಲಭ್ಯವಾಗುತ್ತಿಲ್ಲವೆಂದು ಮೋಹನ್ ಭಾಗವತ್ ಹೇಳಿದ್ದಾರೆ. ಈ ವಿಚಾರ ದಲ್ಲಿ ಮೋದಿ ವಿಫಲವಾಗಿದ್ದು, ಆರೋಗ್ಯ ಮತ್ತು ಶಿಕ್ಷಣದಂತಹ ಮೂಲಭೂತ ಅವಶ್ಯಕತೆಗಳನ್ನು ನಿರ್ಲಕ್ಷಿಸಿ ಪಿಆರ್ ಮತ್ತು ಫೋಟೋ-ಆಪ್‌ಗಳಲ್ಲಿ 11 ವರ್ಷಗಳನ್ನು ವ್ಯರ್ಥ ಮಾಡಿದ್ದಾರೆ ಎಂದು ಭಾಗವತ್ ಬಹಿರಂಗವಾಗಿ ಒಪ್ಪಿಕೊಂಡಿ ದ್ದಾರೆ. ಮೋದಿ ಸಂಪುಟದ ಯಾವ ಸಚಿವರು ಆರ್‌ಎಸ್‌ಎಸ್ ಮುಖ್ಯಸ್ಥ ಭಾಗವತ್ ಅವರ ಹೇಳಿಕೆಗಳಿಗೆ ಪ್ರತಿಕ್ರಿಯಿಸಿಲಿ ಎಂದು ಸವಾಲೆ ಸೆಯುತ್ತೇನೆಂದು ಪ್ರಿಯಾಂಕ್ ಖರ್ಗೆ ಟ್ವೀಟ್ ಮಾಡಿದ್ದಾರೆ.



ಮೋದಿ ಸರ್ಕಾರದ ವೈಫಲ್ಯಗಳನ್ನು ಬಹಿರಂಗವಾಗಿ ಹೇಳಿದ್ದಕ್ಕಾಗಿ 2 ರೂ. ಐಟಿ ಸೆಲ್ ಮುಖ್ಯಸ್ಥ ಮತ್ತು ಟ್ರೋಲ್‌ಗಳ ಮೂಲಕ ಅವರನ್ನು ಎದುರಿಸಲು ಧೈರ್ಯ ಮಾಡುವಿರಾ. ತಮ್ಮದೇ ಸರ್ಕಾರದ ಸಮಸ್ಯೆಯನ್ನು ಪರಿಹರಿಸಲು ವಿಶ್ವದ ಅತಿದೊಡ್ಡ ಎನ್‌ಜಿಒ ಏನು ಮಾಡುತ್ತದೆ ಎಂದು ಪ್ರಶ್ನಿಸಿದ್ದಾರೆ.

ಭಾರತದ ಪ್ರತಿಯೊಂದು ಕುಟುಂಬವೂ ಮೂವರು ಮಕ್ಕಳನ್ನು ಹೊಂದುವುದು ಅಗತ್ಯವಾಗಿದೆ. ದೇಶದಲ್ಲಿ 2.1ರ ಫಲವತ್ತತೆ ಹೊಂದಿರುವ ಸಮುದಾಯಗಳು ನಿಧಾನವಾಗಿ ನಶಿಸುತ್ತಿವೆ. ಜನಸಂಖ್ಯಾ ಕುಸಿತ ತಡೆಯಲು ಹಾಗು ಸ್ಥಿರತೆ ತರಲು ಪ್ರತಿ ಕುಟುಂಬವು ಮೂರು ಮಕ್ಕಳನ್ನು ಹೊಂದುವುದನ್ನು ಪರಿಗಣಿಸಬೇಕೆಂದು ಮೋಹನ್ ಭಾಗವತ್ ಗುರುವಾರ ನವದೆಹಲಿ ಯಲ್ಲಿ ನಡೆದ ಆರ್‌ಎಸ್‌ಎಸ್ ಶತಮಾನೋತ್ಸವದಲ್ಲಿ ಹೇಳಿದ್ದರು.

## ಹಿಂದೂ ಸಂಪ್ರದಾಯದಂತೆ ಶ್ರದ್ಧಾ ಭಕ್ತಿಯಿಂದ ದಸರಾ ಉದ್ಘಾಟಿಸಲಿ

» ಮೊದಲನೇ ಪುಟದಿಂದ

ಕೈ ಜೋಡಿಸಬೇಕು. ಧರ್ಮಸ್ಥಳದಲ್ಲಿ ನೂರಾರು ಶವಗಳ ಹೂತು ಹಾಕಲಾಗಿದೆ ಎಂಬ ಸುಳ್ಳು ಆರೋಪ ನಂಬಿ ಎಸ್‌ಐಟಿ ರಚನೆ ಮಾಡಿದ್ದರಿಂದ ಮಂಜುನಾಥನ ಭಕ್ತರಿಗೆ ಆಘಾತವಾಗಿದೆ. ತನಿಖೆ ದಿಕ್ಕು ತಪ್ಪಬಾರದು, ಸತ್ಯ ಹೊರ ಬರಲಿ. ಆದರೆ, ಹಿಂದೂ ಭಾವನೆಗೆ ಧಕ್ಕೆ, ಧರ್ಮಸ್ಥಳಕ್ಕೆ ಕೆಟ್ಟ ಹೆಸರು ಪ್ರಯತ್ನ ಮಾಡುತ್ತಿರುವುದರ ವಿರುದ್ಧ ನಮ್ಮ ಹೋರಾಟ ನಿರಂತರವಾಗಿರಲಿದೆ ಎಂದರು.

ನಮ್ಮ ಹೋರಾಟ ಷಡ್ಯಂತ್ರದ ವಿರುದ್ಧ, ಕಾಣದ ಕೈಗಳು ಹಿಂದೂ ಅಸ್ಮಿತೆ ಬಗ್ಗೆ ತಕರಾರು ತೆಗೆದಿರುವಾಗ ನಾವು ಸುಮ್ಮನಿರಲು ಆಗುವುದಿಲ್ಲ. ವೈಚಾರಿಕ ಸಂಘರ್ಷದ ವಿರುದ್ಧ ದನಿ ಎತ್ತಲು ನಿರ್ಧರಿಸಿದ್ದೇವೆ. ಪಿತೂರಿ ಮಾಡಿರುವ ಯೂಟ್ಯೂಬರ್, ಮುಸುಕುಧಾರಿಯ ಮುಖವಾಡ ಕಳಚಬೇಕು. ಪ್ರಕರಣವನ್ನು ಎನ್‌ಐಎ ತನಿಖೆಗೆ ವಹಿಸಬೇಕೆಂಬುದು ಬಿಜೆಪಿ ಆಗ್ರಹ ಎಂದು ಹೇಳಿದರು.

ಶಾಸಕ ಸಿಮೆಂಟ್ ಮಂಜು, ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ, ಪ್ರಧಾನ ಕಾರ್ಯದರ್ಶಿಗಳಾದ ಅಮಿತ್ ಶೆಟ್ಟಿ, ಗಿರೀಶ್ ಇದ್ದರು.

## ಬೊಮ್ಮೇನಹಳ್ಳಿಯಲ್ಲಿ ಅಂಗನವಾಡಿ-ಸಮುದಾಯ ಭವನ ಉದ್ಘಾಟನೆ

• ಪ್ರಜೋದಯ ವರದಿ

**ಹಾಸನ:** ತಾಲ್ಲೂಕಿನ ಸಾಲಗಾಮೆ ಹೋಬಳಿ ಬೊಮ್ಮೇನಹಳ್ಳಿ ಗ್ರಾಮದಲ್ಲಿ ನಿರ್ಮಿಸಿರುವ ಸಮುದಾಯ ಭವನ ಹಾಗು ಅಂಗನವಾಡಿ ಕಟ್ಟಡವನ್ನು ಶಾಸಕ ಹೆಚ್.ಪಿ.ಸ್ವರೂಪ್ ಶುಕ್ರವಾರ ಉದ್ಘಾಟಿಸಿದರು.

ಈ ವೇಳೆ ಮಾತನಾಡಿದ ಅವರು, 30 ಲಕ್ಷ ರೂ. ವೆಚ್ಚದಲ್ಲಿ ಸಮುದಾಯ ಭವನ, 25 ಲಕ್ಷ ರೂ. ಅನುದಾನದಲ್ಲಿ ಅಂಗನವಾಡಿ ಕಟ್ಟಡ ನಿರ್ಮಾಣವಾಗಿದ್ದು, ಗ್ರಾಮಸ್ಥರು ಅದರ ಸದುಪಯೋಗ ಪಡೆಯಬೇಕು. ಶುಭ ಸಮಾರಂಭಗಳಿಗೆ ಸಮುದಾಯ ಭವನ ಬೇಕೆಂಬ ಬಹು ದಿನಗಳ ಬೇಡಿಕೆಈಡೇರಿದೆ. ಗ್ರಾಮದ ಮಕ್ಕಳಿಗೆ ಅಂಗನವಾಡಿ ಅವಶ್ಯಕತೆ ಮನಗಂಡು ಕಟ್ಟಡವನ್ನು ನಿರ್ಮಿಸಿ ಉದ್ಘಾಟನೆ ಮಾಡಲಾಗಿದೆ ಎಂದರು.

ಬಳಿಕ ತೋಟಗಾರಿಕಾ ಇಲಾಖೆ ವತಿಯಿಂದ ತೆಂಗು ಅಭಿವೃದ್ಧಿ ಮಂಡಳಿಯ ಸಹಯೋಗ ದೊಂದಿಗೆ ತೆಂಗು ಪ್ರಾತ್ಯಕ್ಷಿತೆ ಮತ್ತು ತಾಕುಗಳ ನಿರ್ವಹಣೆ ಕಾರ್ಯಕ್ರಮದ ಫಲಾ ನುಭವಿಗಳಿಗೆ ಪರಿಕರ ವಿತರಣೆ ಹಾಗು ಪ್ರಚಾರ ಮತ್ತು ಸಾಹಿತ್ಯ ಯೋಜನೆ ಯಡಿ



ತೆಂಗು ಬೆಳೆ ನಿರ್ವಹಣೆಯ ಕುರಿತು ವಿಚಾರ ಸಂಕಿರಣದಲ್ಲಿ ಭಾಗವಹಿಸಿದರು. ಶಾಸಕರನ್ನು ಗ್ರಾಮದ ಮಹಿಳೆಯರು ಆರತಿ ಬೆಳಗಿ ಸ್ವಾಗತಿಸಿದರು.

## ಪ್ರಧಾನಿ ವಿರುದ್ಧ ನಿಂದನೆ : ರಾಹುಲ್ ಕ್ಷಮೆಯಾಚಿಸಬೇಕು

• ಪ್ರಜೋದಯ ವರದಿ

**ಗುವಾಹಟಿ:** ಬಿಹಾರದಲ್ಲಿ ನಡೆಯುತ್ತಿರುವ ಮತದಾರರ ಅಧಿಕಾರ ಯಾತ್ರೆಯ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಹಾಗೂ ಅವರ ದಿವಂಗತ ತಾಯಿಯ ವಿರುದ್ಧನಿಂದನಾತ್ಮಕ ಪದಗಳನ್ನು ಬಳಕೆ ಮಾಡಿರುವ ಆರೋಪಕ್ಕೆ ಸಂಬಂಧಿಸಿ ದಂತೆ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಕ್ಷಮೆಯಾಚಿಸಬೇಕೆಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಶುಕ್ರವಾರ ಆಗ್ರಹಿಸಿದ್ದಾರೆ.



ರಾಹುಲ್ ಅವರ ಯಾತ್ರೆಯು ಅತ್ಯಂತ ಕೀಳುಮಟ್ಟದ್ದಾಗಿದ್ದು, ನುಸುಳು ಕೋರರನ್ನು ರಕ್ಷಿಸಿ ಯಾತ್ರೆಯಾಗಿ ಬದಲಾಗಿದೆ ಎಂದು ಶಾ ಆರೋಪಿಸಿದ್ದಾರೆ.

ರಾಹುಲ್ ಗಾಂಧಿಗೆ ಸ್ವಲ್ಪವಾದರೂ ನಾಚಿಕೆ ಇದ್ದರೆ ಕೂಡಲೇ ಕ್ಷಮೆಯಾಚಿಸಬೇಕು. ಇಡೀ ದೇಶವೇ ರಾಹುಲ್ ಹಾಗೂ ಅವರ ಪಕ್ಷದ ಬಗ್ಗೆ ಅಸಹ್ಯ ಪಟ್ಟುಕೊಳ್ಳುತ್ತಿದೆ ಎಂದು ಹೇಳಿದ್ದಾರೆ.

ನುಸುಳುಕೋರರನ್ನು ರಕ್ಷಿಸುವ ಯಾತ್ರೆಯು ಕಾಂಗ್ರೆಸ್‌ನ ವೋಟ್ ಬ್ಯಾಂಕ್ ಅನ್ನು ರಕ್ಷಿಸುವ ಉದ್ದೇಶವನ್ನು ಹೊಂದಿದೆ. ಆದರೆ ಪ್ರಜಾಪ್ರಭುತ್ವದಲ್ಲಿ ಚುನಾವಣೆಯು ಅದರ ಆತ್ಮವಾಗಿದೆ. ವ್ಯವಸ್ಥೆಯನ್ನು ಕಲುಷಿತಗೊಳಿಸಲು ನುಸುಳುಕೋರರಿಗೆ ಅವಕಾಶ ನೀಡಿದರೆ ರಾಷ್ಟ್ರವು ಭದ್ರವಾಗಿರಲು ಹೇಗೆ ಸಾಧ್ಯ ಎಂದು ಅವರು ಪ್ರಶ್ನಿಸಿದ್ದಾರೆ.

ಕಾಂಗ್ರೆಸ್‌ನ ಈ ಯಾತ್ರೆಯು ಎಲ್ಲಾ ಎಲ್ಲೆಗಳನ್ನು ಮೀರಿದೆ ಎಂದು ಅಮಿತ್ ಶಾ ಆರೋಪಿಸಿದ್ದಾರೆ. ಮತದಾರರ ಅಧಿಕಾರ ಯಾತ್ರೆಯಲ್ಲಿ ಪ್ರಧಾನಿ ವಿರುದ್ಧ ನಿಂದನಾತ್ಮಕ ಪದ ಬಳಕೆಗೆ ಸಂಬಂಧಿಸಿದಂತೆ ಓರ್ವ ವ್ಯಕ್ತಿಯನ್ನು ಪೊಲೀಸರು ಬಂಧಿಸಿದ್ದಾರೆ.

## ಕ್ರೀಡೆ-ನೃತ್ಯ ಸ್ಪರ್ಧೆ: ಸ್ಕಾಲರ್ಸ್ ವಿದ್ಯಾರ್ಥಿಗಳ ಸಾಧನೆ

• ಪ್ರಜೋದಯ ವರದಿ

**ಹಾಸನ:** ಹಾಸನ ವಲಯ-8 ಮತ್ತು ರಾಜ್ಯ ಮಟ್ಟದ ಕ್ರೀಡಾ ಕೂಟ ಮತ್ತು ನೃತ್ಯ ಸ್ಪರ್ಧೆಯಲ್ಲಿ ಸ್ಕಾಲರ್ಸ್ ಇಂಟರ್ ನ್ಯಾಷನಲ್ ಸ್ಕೂಲ್‌ನ ವಿದ್ಯಾರ್ಥಿಗಳು ಉತ್ತಮ ಪ್ರದರ್ಶನ ನೀಡಿ ವಿಜೇತರಾಗಿ ಶಾಲೆಗೆ ಕೀರ್ತಿ ತಂದುಕೊಟ್ಟಿದ್ದಾರೆ.

ಈ ಸಾಧನೆಯನ್ನು ಗುರುತಿಸಿ, ಶಾಲೆಯ ಬೆಳಗಿನ ಪ್ರಾರ್ಥನಾ ಸಮಾ ರಂಭದಲ್ಲಿ ವಿಜೇತ ವಿದ್ಯಾರ್ಥಿಗಳನ್ನು ಗೌರವಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಆಡಳಿತಾಧಿಕಾರಿ ಡಾ. ಹೆಚ್.ಎನ್.ಚಂದ್ರಶೇಖರ್ ಅವರು, ನಮ್ಮ ವಿದ್ಯಾರ್ಥಿಗಳು ಶ್ರಮ, ಶಿಸ್ತು ಮತ್ತು ಆತ್ಮವಿಶ್ವಾಸದಿಂದ ಶಾಲೆಯ ಹೆಸರನ್ನು ರಾಜ್ಯ ಮಟ್ಟದಲ್ಲಿ ಎತ್ತಿ ಹಿಡಿದಿದ್ದಾರೆ. ಇದು ಅವರ ವ್ಯಕ್ತಿತ್ವ ವಿಕಾಸದ ದಿಶೆಯಲ್ಲಿ ಒಂದು ಮಹತ್ವದ ಮೆಟ್ಟಿಲು ಎಂದು ಸಂತೋಷ ವ್ಯಕ್ತಪಡಿಸಿದರು.

ಶಾಲೆಯ ಆಡಳಿತ ಮಂಡಳಿ ಕಾರ್ಯದರ್ಶಿ ಮಮತಾ ಚಂದ್ರಶೇಖರ್ ಅವರು, ಈ ಯಶಸ್ಸಿಗೆ ವಿದ್ಯಾರ್ಥಿಗಳ ಪರಿಶ್ರಮ, ಪೋಷಕರ ನಿರಂತರ ಬೆಂಬಲ ಮತ್ತು ಶಿಕ್ಷಕರ ಸರಿಯಾದ ಮಾರ್ಗದರ್ಶನವೇ ಕಾರಣವೆಂದು ಶ್ಲಾಘಿಸಿದರು.

ಪ್ರಾಂಶುಪಾಲ ಆಂಟೋನಿ ಮಾತನಾಡಿ, ಇಂತಹ ಸ್ಪರ್ಧಾತ್ಮಕ ಕಾರ್ಯ ಕ್ರಮಗಳು ವಿದ್ಯಾರ್ಥಿಗಳಲ್ಲಿ ಶಿಸ್ತು, ಒಂದು ತಂಡ ಎಂಬ ಭಾವನೆ ಮತ್ತು ಉನ್ನತ ಧ್ಯೇಯಗಳನ್ನು ಬೆಳೆಸುವಲ್ಲಿ ನೆರವಾಗುತ್ತವೆ. ಈ ಸಾಧನೆ ಅದಕ್ಕೆ ಉತ್ತಮ ಉದಾಹರಣೆ ಎಂದು ಅಭಿಪ್ರಾಯಪಟ್ಟರು.

ದೈಹಿಕ ಶಿಕ್ಷಣ ಶಿಕ್ಷಕಿ ಸಹನಾ ಅವರು ವಿದ್ಯಾರ್ಥಿಗಳು ಕ್ರೀಡಾ ಮೈದಾನದಲ್ಲಿ ಮತ್ತು ನೃತ್ಯದ ಮಂಚದ ಮೇಲೆ ತೋರಿದ ತಾಳ್ಮೆ, ಸಹನೆ ಮತ್ತು ಆತ್ಮ ವಿಶ್ವಾಸವು ಶ್ಲಾಘನೀಯವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಶಿಕ್ಷಕರು ಮತ್ತು ಪೋಷಕರು ವಿದ್ಯಾರ್ಥಿಗಳ ಸಾಧನೆಯನ್ನು ಅಭಿನಂದಿಸಿದ್ದಾರೆ. ಪ್ರತಿ ವಿದ್ಯಾರ್ಥಿಯ ಯಶಸ್ಸಿನ ಹಿಂದೆ ಅವರ ಸ್ವಂತ ಪರಿಶ್ರಮದ ಜೊತೆಗೆ ಶಿಕ್ಷಕರ ಪ್ರೋತ್ಸಾಹ ಮತ್ತು ಪೋಷಕರ ಅಚಲ ಬೆಂಬಲವೂ ಪ್ರಮುಖ ಪಾತ್ರ ವಹಿಸಿದೆ ಎಂದು ಅವರು ಹೇಳಿದರು.



## ಪಠ್ಯೇತರ ಚಟುವಟಿಕೆಯಲ್ಲಿ ಪಾಲ್ಗೊಳ್ಳಲು ಸಲಹೆ



• ಪ್ರಜೋದಯ ವರದಿ

**ಹಾಸನ:** ಶೈಕ್ಷಣಿಕ ಪ್ರಗತಿಯ ಜೊತೆಗೆ ವಿದ್ಯಾರ್ಥಿ ಗಳು ಕ್ರೀಡಾ ಮನೋಭಾವ ಬೆಳೆಸಿಕೊಳ್ಳಬೇಕೆಂದು ಶಾಸಕ ಸಿಮೆಂಟ್ ಮಂಜು ಅವರು ಸಲಹೆ ನೀಡಿದರು.

ಕಟ್ಟಾಯ ಹೋಬಳಿಯ ಪ್ರೌಢ ಶಾಲಾ ಆವರ ಣದಲ್ಲಿ ಪಿ.ಎಂ.ಶ್ರೀ. ಹಾಗು ಹನುಮಂತಪುರ ಸರ್ಕಾರಿ ಪ್ರೌಢಶಾಲೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಹೋಬಳಿ ಮಟ್ಟದ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿ, ವಿದ್ಯಾರ್ಥಿ ಜೀವನದಲ್ಲಿ ಕ್ರೀಡೆ ಅತ್ಯಂತ ಮುಖ್ಯವಾಗಿದೆ. ದೈಹಿಕ ಹಾಗು ಮಾನಸಿಕವಾಗಿ ಸದೃಢರಾಗಲು ಕ್ರೀಡೆ ಅವಶ್ಯ ಕವಾಗಿದೆ. ಸೋಲು-ಗೆಲುವನ್ನು ಸಮ ಚಿತ್ತದಿಂದ ಸ್ವೀಕರಿಸುವ ಭಾವನೆಯೂ ಕ್ರೀಡೆಯಿಂದ ದೊರೆಯುತ್ತದೆ. ಸತತ ಪ್ರಯತ್ನ ಮತ್ತು ಪರಿಶ್ರಮದ ಮೂಲಕ ಕ್ರೀಡಾ ಚಟುವಟಿಕೆಗಳಲ್ಲಿ ವಿದ್ಯಾರ್ಥಿಗಳು ಆಸಕ್ತಿಯಿಂದ ಭಾಗವಹಿಸಿ ತಮ್ಮ ಗುರಿ ಸಾಧಿಸಬೇಕೆಂದು ಹೇಳಿದರು.

ಪ್ರತಿಯೊಬ್ಬರೂ ಶ್ರದ್ಧೆಯಿಂದ ಆಟಗಳಲ್ಲಿ ಭಾಗವಹಿಸಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಮುಂದಾಗಬೇಕಿದೆ. ಮೊಬೈಲ್, ಇಂಟರ್‌ನೆಟ್ ಅಬ್ಬರಕ್ಕೆ ಮಾರುಹೋಗಿರುವ ಇಂದಿನ ಯುವ ಜನತೆ ನಮ್ಮ ಮೂಲ ಕ್ರೀಡೆಗಳನ್ನು ಕಡೆಗ ಣಿಸುತ್ತಿದೆ. ಕೇವಲ ವಿಡಿಯೋ ಗೇಮ್‌ನಂತಹ ಇತರೆ ಅಂಶಗಳಿಂದಾಗಿ ಕ್ರೀಡಾ ಮನೋಭಾವ ಕಳೆಗುಂದುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ ಎಂದು ಹೇಳಿದರು. ವಕೀಲ ಚನ್ನಂಗಿಹಳ್ಳಿ ಶ್ರೀಕಾಂತ್, ಬಿಜೆಪಿ ಯುವ ಮುಖಂಡ ಅಮೃತ್, ಶಿಕ್ಷಕರಾದ ಸುಕುಮಾರ್, ಯೋಗೇಶ್, ಶಾಂತರಾವ್, ಚೂಡಾ ಮಣಿ ಇದ್ದರು.

## ಡೈಮಂಡ್ ಲೀಗ್ : ನೀರಜ್ ಚೋಪ್ರಾಗೆ ಬೆಳ್ಳಿ

• ಪ್ರಜೋದಯ ವರದಿ

**ಜೂರಿಚ್:** ಭಾರತದ ಜಾವೆಲಿನ್ ಥ್ರೋ ತಾರೆ ನೀರಜ್ ಚೋಪ್ರಾ ಅವರು ಗುರುವಾರ ರಾತ್ರಿ ಇಲ್ಲಿ ನಡೆದ ಡೈಮಂಡ್ ಲೀಗ್‌ನಲ್ಲಿ ಬೆಳ್ಳಿ ಪದಕ ಗೆದ್ದರು. ಲೀಗ್‌ನಲ್ಲಿ ಇದು ನಾಲ್ಕನೇ ಪದಕ ಮತ್ತು ಹ್ಯಾಟ್ರಿಕ್ ಬೆಳ್ಳಿ ಆಗಿದೆ.



2022ರಲ್ಲಿ ಚಿನ್ನ ಗೆದ್ದರೆ, 2023 ಮತ್ತು 24ರಲ್ಲಿ ತಲಾ ಬೆಳ್ಳಿ ಪದಕ ಜಯಿಸಿದ್ದರು. ಮೇ ತಿಂಗಳಿನಲ್ಲಿ ನಡೆದ ದೋಹಾ ಡೈಮಂಡ್ ಲೀಗ್ ಕೂಟದಲ್ಲಿ ಜೀವನಶ್ರೇಷ್ಠ 90.30 ಮೀಟರ್ ಸಾಧನೆ ಮೆರೆದಿದ್ದ ನೀರಜ್, ಇಲ್ಲಿ 85 ಮೀ. ಗಡಿ ದಾಟಲು ಪ್ರಯಾಸಪಟ್ಟರು.

ಹಾಲಿ ವಿಶ್ವ ಚಾಂಪಿಯನ್ ಆಗಿರುವ 27 ವರ್ಷದ ನೀರಜ್ ಮೊದಲೆರಡು ಪ್ರಯತ್ನದಲ್ಲಿ 84.35 ಮೀ, 82 ಮೀ. ದೂರ ಈಟಿ ಎಸೆದರು. ನಂತರದ ಮೂರು ಪ್ರಯತ್ನಗಳು ಫೌಲ್ ಆದವು. ಕೊನೆಯ ಪ್ರಯತ್ನದಲ್ಲಿ 85.01 ಮೀ. ಸಾಧನೆಯೊಂದಿಗೆ ಬೆಳ್ಳಿ ಖಚಿತ ಪಡಿಸಿಕೊಂಡರು.

ಜರ್ಮನಿಯ ತಾರೆ ಜೂನಿಯನ್ ವೆಬರ್ ವೈಯಕ್ತಿಕ ಶ್ರೇಷ್ಠ ಸಾಧನೆಯೊಂದಿಗೆ ಚಿನ್ನದ ಪದಕ ಕೊರಳಿಗೇರಿಸಿಕೊಂಡರು. ಅವರು ಮೊದಲೆರಡು ಪ್ರಯತ್ನದಲ್ಲಿ ಕ್ರಮವಾಗಿ 91.37 ಮೀ, 91.51 ಮೀ. ಸಾಧನೆ ಮಾಡಿ, ಆರಂಭದಲ್ಲೇ ಅಗ್ರಸ್ಥಾನಿಯಾ ದರು. ಮೊದಲ ಪ್ರಯತ್ನ ದಲ್ಲಿ 84.95 ಮೀ. ಈಟಿ ಎಸೆದ ಟ್ರಿನಿಡಾಡ ಕೆಶಾರ್ನ್ ವಾಲ್ಕಾಟ್ ಬೆಳ್ಳಿ ತಮ್ಮದಾಗಿಸಿಕೊಂಡರು.

## ಕಾಂಗ್ರೆಸ್‌ನ ಮತಗಳ್ಳತನ ಒಪ್ಪಿಕೊಂಡ ಸಿಎಂ: ಆರ್.ಅಶೋಕ್

• ಪ್ರಜೋದಯ ವರದಿ

**ಬೆಂಗಳೂರು:** ಕಾಂಗ್ರೆಸ್ ಪಕ್ಷದ ಮತ ಕಳ್ಳತನವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಬಯಲು ಮಾಡಿದ್ದಾರೆಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಅವರು ಆರೋಪಿಸಿದ್ದಾರೆ.

1991ರ ಲೋಕಸಭೆ ಚುನಾವಣೆಯಲ್ಲಿ ನನ್ನನ್ನು ಮೋಸದಿಂದ ಸೋಲಿಸಲಾಯಿತು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿಕೆ ನೀಡಿದ್ದರು. ಈ ಕುರಿತು ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅಶೋಕ್, ಮತ ಕಳ್ಳತನ ಎಂಬ ಕಪೋಲಕಲ್ಪಿತ ನಾಟಕದ ಬಗ್ಗೆ ಸತ್ಯ ನುಡಿದಿದ್ದ ಮಾಜಿ ಸಚಿವ ಕೆ.ಎನ್.ರಾಜಣ್ಣ ಅವರನ್ನು ಅತ್ಯಂತ ಅಗೌರವವಾಗಿ ಸಂಪುಟದಿಂದ ವಜಾ ಮಾಡಿದ್ದ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರಿಗೆ, ಈಗ ಕಾಂಗ್ರೆಸ್ ಪಕ್ಷದ ಮೋಸವನ್ನು ಬಯಲು ಮಾಡಿರುವ ಸಿದ್ದರಾಮಯ್ಯ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ, ಕಾಂಗ್ರೆಸ್ ಪಕ್ಷದಿಂದ ವಜಾ ಮಾಡುವ ಧೈರ್ಯ ಇದೆಯಾ ಎಂದು ಪ್ರಶ್ನಿಸಿದ್ದಾರೆ.

ಕಾಂಗ್ರೆಸ್ ಪಕ್ಷದ ಪ್ರತಾಪ, ಶಿಸ್ತು ಕ್ರಮ ಏನಿದ್ದರೂ ದಲಿತ ನಾಯಕರ ಮೇಲೆ ಪ್ರಯೋಗ ಮಾಡಲು ಮಾತ್ರ ಸೀಮಿತವೇ. 2018ರಲ್ಲಿ ಸಿದ್ದ ರಾಮಯ್ಯ



ಬಾದಾಮಿಯಲ್ಲಿ ಹೇಗೆ ಮತ ಖರೀದಿ ಮೂಲಕ ಗೆದ್ದರೆಂದು ಮಾಜಿ ಕೇಂದ್ರ ಸಚಿವ ಸಿ.ಎಂ.ಇಬ್ರಾಹಿಂ ಅವರು ಈಗಾಗಲೇ ಬಯಲು ಮಾಡಿದ್ದಾರೆಂದು ಅಶೋಕ್ ಉಲ್ಲೇಖಿಸಿದ್ದಾರೆ.

ಪಂಚಾಯತ್‌ನಿಂದ ಪಾರ್ಲಿಮೆಂಟ್ ವರೆಗೆ ಕಾಂಗ್ರೆಸ್ ಪಕ್ಷದ ಏಕಚಕ್ರಾಧಿಪತ್ಯ ಇದ್ದ ಕಾಲ ದಲ್ಲಿ, ಆಗೆಲ್ಲಾ ಇವಿಎಂ ಇರಲಿಲ್ಲ, ಒಬ್ರೋ ಇಬ್ರೋ ಕೂತ್ಕೊಂಡು ಒತ್ತು ಬುಡ್ರೋ ಅನ್ನೋರು ಎಂದು ಕಾಂಗ್ರೆಸ್ ಪಕ್ಷ 60 ವರ್ಷ ಹೇಗೆ ಚುನಾವಣೆ ಗೆಲ್ಲುತ್ತಿತ್ತು ಎನ್ನುವುದನ್ನು ಗೃಹ ಸಚಿವ ಡಾ.ಪರಮೇಶ್ವರ ಅವರು ಲೀಲಾಜಾಲವಾಗಿ ವಿವರಿಸಿದ್ದಾರೆಂದು ಅವರು ತಿಳಿಸಿದ್ದಾರೆ.

ದೇಶದಲ್ಲಿ ಮತಗಳ್ಳತನ, ಚುನಾವಣಾ ಅಕ್ರಮದ ಪಿತಾಮಹ ಯಾರಾದರೂ ಇದ್ದರೆ ಅದು ಕಾಂಗ್ರೆಸ್ ಪಕ್ಷ ಮತ್ತು ನೆಹರೂ-ಗಾಂಧಿ ಕುಟುಂಬ. ಮತಗಳ್ಳತನದ ಬಗ್ಗೆ ರಾಹುಲ್ ಗಾಂಧಿ ಅವರು ಮಾತನಾಡಿದರೆ ಅದು ಭೂತದ ಬಾಯಲ್ಲಿ ಭಗವದ್ಗೀತೆ ನುಡಿದಂತೆಯೆಂದು ವಾಗ್ದಾಳಿ ನಡೆಸಿದ್ದಾರೆ.

# ಮೇಜರ್ ಧ್ಯಾನ್ ಚಂದ್ ಶ್ರೇಷ್ಠ ಹಾಕಿ ಆಟಗಾರ

• ಪ್ರಜೋದಯ ವರದಿ

**ಹಾಸನ:** ಕ್ರೀಡಾ ಲೋಕದ ಸ್ಫೂರ್ತಿದಾಯಕ ವ್ಯಕ್ತಿತ್ವದವರಾಗಿರುವ ಮೇಜರ್ ಧ್ಯಾನ್ ಚಂದ್ ಅವರ ಕ್ರೀಡಾ ಸ್ಫೂರ್ತಿ ಪ್ರತಿಯೊಬ್ಬ ಕ್ರೀಡಾಪಟುಗಳಿಗೆ ಆದರ್ಶಪ್ರಾಯವಾ ದುದು ಎಂದು ಟೈಮ್ಸ್ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಬಿ.ಕೆ.ಗಂಗಾಧರ್ ಅವರು ಅಭಿಪ್ರಾಯಪಟ್ಟರು.

ನಗರದ ವಿಜಯನಗರ ಬಡಾವಣೆಯಲ್ಲಿರುವ ಟೈಮ್ಸ್ ಅಂತರ ರಾಷ್ಟ್ರೀಯ ಶಾಲಾ ಆವರಣದಲ್ಲಿ ಶುಕ್ರವಾರ ಟೈಮ್ಸ್ ಸ್ಪೋರ್ಟ್ಸ್ ಅಕಾಡೆಮಿ ವತಿಯಿಂದ ಹಮ್ಮಿಕೊಂಡಿದ್ದ ಮೇಜರ್ ದ್ಯಾನ್ ಚಂದ್ ಅವರ ಜನ್ಮ ದಿನಾಚರಣೆ ಸ್ಮರಣಾರ್ಥ ವಿಶ್ವ ಕ್ರೀಡಾ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಧ್ಯಾನ್ ಚಂದ್ ಅವರು ಒಲಂಪಿಕ್ಸ್‌ನಲ್ಲಿ ನಮ್ಮ ದೇಶಕ್ಕೆ ಮೂರು ಬಾರಿ ಚಿನ್ನದ ಪದಕವನ್ನು ತಂದುಕೊಟ್ಟ ಒಬ್ಬ ಶ್ರೇಷ್ಠ ಆಟಗಾರ. ಹಾಕಿ ಆಟದ ಮೇಲೆ ಅವರ ಹಿಡಿತ ಹೇಗಿತ್ತು ಎಂಬುವುದಕ್ಕೆ ಅವರ ಆಟವನ್ನು ವೀಕ್ಷಿಸಿದವರಿಗೆ ಅದರ ಬಗ್ಗೆ ಅರಿವಾ ಗುತ್ತದೆ. ಹಾಕಿ ಸ್ಟಿಕ್‌ನೊಂದಿಗೆ ಚೆಂಡು ಅಂಟಿಕೊಂಡಿರುತ್ತಿತ್ತೇನೊ ಎಂಬುವಷ್ಟು ಅವರ ಆಟ ಸೊಗಸಾಗಿರುತಿತ್ತು. ರಾತ್ರಿ ವೇಳೆ ಚಂದ್ರನ ಬೆಳಕಿನಲ್ಲಿ ಆಟವನ್ನು ಆಡುತ್ತಿದ್ದ ಅವರನ್ನು ಅವರ ಗೆಳೆಯರು ಧ್ಯಾನ್ ಚಂದ್ ಎಂದು ಕರೆದರು. ಯಾವುದೇ ಒಬ್ಬ ಆಟಗಾರನಿಗೆ ತಾನು ಪ್ರತಿನಿಧಿ ಸುವ ಕ್ರೀಡೆಯ ಮೇಲೆ ಆಷ್ಟೊಂದು ಆಸಕ್ತಿ, ಶ್ರದ್ಧೆ, ಭಕ್ತಿಯೊಂದಿಗೆ ಹಾಕಿ ಕ್ರೀಡೆಯನ್ನು ಕಲಿತಿ ದ್ದರು. ಹಾಕಿ ಕ್ರೀಡೆಯಲ್ಲಿ ಅಷ್ಟೆಲ್ಲ ಸಾಧನೆ ಮಾಡಿದ್ದರು, ಅವರು ಕೊನೆಯ ದಿನಗಳಲ್ಲಿ ಬಡತನದಲ್ಲಿಯೇ ಮೃತರಾದರು. ಆದರೆ ಇಂದು ಆ ತರನಾದ ಪರಿಸ್ಥಿತಿ ಇಲ್ಲ, ಯಾವುದೇ ಒಬ್ಬ ಆಟಗಾರ ಒಂದು ಪಂದ್ಯದಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿದರೆ ಬೆಳಿಗ್ಗೆ



ಆಗುವಷ್ಟರಲ್ಲಿ ಸ್ಟಾರ್ ಆಗಿ ಹೊರಹೊಮ್ಮುತ್ತಾನೆಂದು ತಿಳಿಸಿದರು.

ಧ್ಯಾನ್ ಚಂದ್ ಅವರು ಭಾರತೀಯ ಸೇನೆಯಲ್ಲಿ ಕಾರ್ಯ ನಿರ್ವಹಣೆ ಮಾಡಿಕೊಂಡು ಹಾಕಿ ಕ್ರೀಡೆಯಲ್ಲಿ ಸಿಕ್ಕ ಅವಕಾಶಗಳನ್ನು ಬಳಸಿಕೊಂಡು ಹಾಕಿ ಕ್ರೀಡೆಯ ಬಗ್ಗೆ ಆಸಕ್ತಿ ಬೆಳೆಸಿ ಕೊಂಡರು. ಅವರ ಹಾಕಿ ಕ್ರೀಡೆಯ ಮೇಲಿನ ಆಸಕ್ತಿ ಹಾಗೂ ಕ್ರೀಡಾ ಪ್ರತಿಭೆಯನ್ನು ಕಂಡು ಅವರನ್ನು 1926ರಲ್ಲಿ ಭಾರತೀಯ ಹಾಕಿ ತಂಡಕ್ಕೆ ಆಯ್ಕೆ ಮಾಡಲಾಯಿತು. ಅಂತರರಾಷ್ಟ್ರೀಯ ಮಟ್ಟದಲ್ಲಿ ಅವರು 400ಕ್ಕೂ ಅಧಿಕ ಗೋಲುಗಳನ್ನು ಗಳಿಸುವ ಮೂಲಕ ಕ್ರೀಡೆಯಲ್ಲಿನ ಪರಿ ಶ್ರಮವನ್ನು ಪ್ರದರ್ಶಿಸಿದ್ದಾರೆ. ಹಾಕಿ ಕ್ರೀಡೆಯಲ್ಲಿನ ಅವರ ಸಾಧನೆಯನ್ನು ಮನಗಂಡು ಅನೇಕ ದೇಶಗಳು ಅವರನ್ನು ಗೌರವದಿಂದ ಕಂಡಿದ್ದು, ಲಂಡನ್ನಿನ ಹಾಕಿ ಕ್ರೀಡಾಂಗಣಕ್ಕೆ ಧ್ಯಾನ್ ಚಂದ್ ಅವರ ಹೆಸರನ್ನು ಇರಿಸಲಾಗಿದೆ. ದೇಶದಲ್ಲಿ ಅವರ ಗೌರವಾರ್ಥ ಅಂಚೆ ಚೀಟಿ ಬಿಡುಗಡೆ ಮಾಡಿದೆ. ದೆಹಲಿಯಲ್ಲಿ ಅವರ ಹೆಸರಿನಲ್ಲಿ ರಾಷ್ಟ್ರೀಯ ಕ್ರೀಡಾಂಗಣ, ರಾಜೀವ್ ಗಾಂಧಿ ಖೇಲ್ ರತ್ನ, ಅರ್ಜುನ ಹಾಗೂ ದ್ರೋಣಚಾರ್ಯ ಪ್ರಶಸ್ತಿ ನೀಡಲಾಗಿದ್ದು, ನಮ್ಮ ರಾಜ್ಯ ಸರ್ಕಾರ ಏಕಲವ್ಯ ಪ್ರಶಸ್ತಿ ನೀಡಿ ಗೌರವಿಸಿದೆ. ಧ್ಯಾನ್ ಚಂದ್ ಅವರು ಕ್ರೀಡಾ ಪ್ರೇಮ ಇಂದಿನ ಪ್ರತಿಯೊಬ್ಬ ಯುವ ಕ್ರೀಡಾಪಟುಗಳಿಗೆ ಸ್ಫೂರ್ತಿಯಾದರೆ ಸಾಧನೆ ಹಾದಿ ಸುಲಲಿತವಾಗಲಿದೆ. ಅವರ ಹೆಸರಿನಲ್ಲಿ ವಿಶ್ವ ಕ್ರೀಡಾ ದಿನಾಚರಣೆ ಮಾಡುತ್ತಿರುವುದು ನಿಜಕ್ಕೂ ಅರ್ಥಪೂರ್ಣವಾಗಿದೆ ಎಂದರು.

ಟೈಮ್ಸ್ ಸ್ಪೋರ್ಟ್ಸ್ ಅಕಾಡೆಮಿ ಸಂಯೋಜಕ ರಮೇಶ್, ದೈಹಿಕ ಶಿಕ್ಷಕ ದರ್ಶನ್, ಕ್ರಿಕೆಟ್ ತರಬೇತುದಾರ ವಿನಯ್, ಫುಟ್‌ಬಾಲ್ ತರಬೇತುದಾರ ತೇಜು ಹಾಜರಿದ್ದರು.

## ಸೆ.30ರಿಂದ ದೀಕ್ಷಾ ಭೂಮಿ ಯಾತ್ರೆ

• ಪ್ರಜೋದಯ ವರದಿ

**ಆಲೂರು:** ಡಾ.ಬಿ.ಆರ್.ಅಂಬೇಡ್ಕರ್ ಅನುಯಾಯಿಗಳನ್ನು ಮಹಾರಾಷ್ಟ್ರ ರಾಜ್ಯದ ನಾಗಪುರ ದೀಕ್ಷಾ ಭೂಮಿಯಲ್ಲಿ ಅ.2 ರಂದು ನಡೆಯಲಿರುವ ದಮ್ಮಪ್ರವರ್ತನ ಕಾರ್ಯಕ್ರಮಕ್ಕೆ ಕಳುಹಿಸುವ ಸಂಬಂಧ ತಾಲ್ಲೂಕುವಾರು ಯಾತ್ರಾರ್ಥಿಗಳನ್ನು ಆಯ್ಕೆ ಮಾಡಿ ಕೆ.ಎಸ್.ಆರ್.ಟಿ.ಸಿ. ಬಸ್ ಮೂಲಕ ಕಳುಹಿಸಲು ಸರ್ಕಾರದಿಂದ ಆದೇಶವಾಗಿರುತ್ತದೆ.

ತಾಲ್ಲೂಕಿನ ಅಂಬೇಡ್ಕರ್ ಅನುಯಾಯಿಗಳು ದೀಕ್ಷಾ ಭೂಮಿ ಯಾತ್ರೆಗೆ ಸೆ.30ರಿಂದ ಅ.4ರವರೆಗೆ ಪ್ರಯಾಣಿಸಿ ಹಾಗೂ ಹಿಂದಿರುಗಿ ಬರುವ ಸಂಬಂಧ, ಆಸಕ್ತ ಯಾತ್ರಾರ್ಥಿಗಳು ಸಮಾಜ ಕಲ್ಯಾಣ ಇಲಾಖೆಯ ವೆಬ್‌ಸೈಟ್ m . . i p r i t g. ನಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.

ತಾಲ್ಲೂಕಿನ ಯಾತ್ರಾರ್ಥಿಗಳು ಆ.25 ರಿಂದ ಸೆ.9ರವರೆಗೆ ತಮ್ಮ ಅರ್ಜಿಯನ್ನು ಆನ್‌ಲೈನ್ ಮೂಲಕ ಸಲ್ಲಿಸಬೇಕು. ಅರ್ಜಿ ಪ್ರತಿಯ ಜೊತೆಗೆ ಜಾತಿ, ಆದಾಯ ಪ್ರಮಾಣ ಪತ್ರ, ರೇಷನ್ ಕಾರ್ಡ್, ಆಧಾರ್ ಕಾರ್ಡ್, 2 ಪಾಸ್ ಪೋರ್ಟ್ ಅಳತೆ ಭಾವಚಿತ್ರ ಮತ್ತು ಬ್ಯಾಂಕ್ ಪಾಸ್‌ಬುಕ್ ಪ್ರತಿಗಳನ್ನು ಕಛೇರಿಗೆ ಸಲ್ಲಿಸಲು ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು ಗ್ರೇಡ್-2 ರವರು ಪ್ರಕಟಣೆಯಲ್ಲಿ ಕೋರಿರುತ್ತಾರೆ.

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019